♦ ಮಂಡ್ಯ ♦ ಮೈಸೂರು ♦ ಚಾಮರಾಜನಗರ ♦ ಹಾಸನ ♦ ರಾಮನಗರ ♦ ತುಮಕೂರು ♦ ಬೆಂಗಳೂರು ಗ್ರಾಮಾಂತರ ♦ ಬೆಂಗಳೂರು ನಗರ E-mail:kayakayogi @gmail.com


ಕಾಯಕ ಯೋಗಿ

ಸಂಪಾದಕರು:ಅರುಣಜ್ಯೋತಿ ಬಿ.ಕೆ. KAYAKA YOGI - Regional Daily ಪ್ರಾದೇಶಿಕ ದಿನಪತ್ರಿಕೆ

RNI No.KARKAN/2018/77805 | POST NO.KA/SK/MND/999/2022-2024 | ಮಂಡ್ಯ Mandya | ಸಂಪುಟ Volume 07 | ಸಂಚಿಕೆ Issue 34 | ಭಾನುವಾರ Sunday | 12–05–2024 | ಪುಟಗಳು Pages 06 | ಬೆಲೆ Rate 02 | ಸಂಪರ್ಕ 9980605484

ಪ್ರಧಾನಿಗೆ ರಾಜಕೀಯವಾಗಿ ವಿರೋಧ: ಸಿದ್ದರಾಮಯ್ಯ

ವಿರೋಧ ಪಕ್ಷದವರು ಯಾರನ್ನೂ ಸಮಾಧಿ ಮಾಡುವುದಿಲ್ಲ ವಿ.ಶ್ರೀನಿವಾಸ್ ಪ್ರಸಾದ್ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಸಿಎಂ ಸ್ಪಷ್ಟನೆ



ಮೈಸೂರು: ವಿರೋಧ ಪಕ್ಷದವರು ಯಾರನ್ನೂ ಸಮಾಧಿ ಮಾಡುವುದಿಲ್ಲ ಪ್ರಧಾನಿಗಳನ್ನು ರಾಜಕೀಯವಾಗಿ ವಿರೋಧ ಮಾಡುತ್ತಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಮೈಸೂರಿನಲ್ಲಿ ನಡೆದ ರಾಜಕೀಯ ಮುತ್ಸದ್ದಿ ಶ್ರೀನಿವಾಸ್ ಪ್ರಸಾದ್ ಅವರಿಗೆ ಶ್ರದ್ಧಾಂಜಲಿ ಮತ್ತು ನುಡಿನಮನ ಕಾರ್ಯಕ್ರಮವನ್ನು ಉದ್ಘಾಟಿಸಿದರು.

ಪ್ರಧಾನಮಂತ್ರಿ ನರೇಂದ್ರ ಮೋದಿಯವರು ನಿನ್ನೆ ವಿರೋಧಪಕ್ಷಗಳು ನನ್ನನ್ನು ಸಮಾಧಿ ಮಾಡಲು ಹೊರಟಿವೆ. ನೀವು ನನ್ನನ್ನು ಕಾಪಾಡಬೇಕು ಎಂದು ಜನತೆಯಲ್ಲಿ ಮಾಡಿರುವ ಮನವಿಗೆ ಪ್ರತಿಕ್ರಿಯೆ ನೀಡಿದ ಅವರು ಮೇಲಿನಂತೆ ಪ್ರತಿಕ್ರಿಯೆ ನೀಡಿದರು.

ನರೇಂದ್ರ ಮೋದಿ ಹತ್ತು ವರ್ಷ ಪ್ರಧಾನಿಗಳಾಗಿ ಬಡವರ ಪರವಾಗಿ ಏನೂ ಮಾಡಿಲ್ಲ ಎನ್ನುವುದು ಹಾಗು ಸುಳ್ಳಿನ ಸರದಾರ ಎನ್ನುವುದು ನಮ್ಮ ಆರೋಪ. ಜನರಿಗೆ ನೀಡಿದ್ದ ಯಾವ ಯಾವ ಭರವಸೆಗಳನ್ನು ಈಡೇರಿಸಿಲ್ಲ. ರಾಜಕೀಯವಾಗಿ ಅವರನ್ನು ಸೋಲಿಸಬೇಕೆನ್ನುವುದು ವಿರೋಧ ಪಕ್ಷಗಳ ಗುರಿ. ಏಕೆಂದರೆ ಈ ದೇಶ ಆರ್ಥಿಕ ಹಾಗೂ ಬಡವರ ಅಭಿವೃದ್ಧಿ ಆಗಿಲ್ಲ ಎಂದರು.

ಮೇಲಕ್ಕೇರಿದವರು ಕೆಳಕ್ಕೆ ಇಳಿಯಲೇ ಬೇಕು: ಪ್ರಧಾನಿಗಳು ಸೋಲುತ್ತೇವೆಂದು ಹತಾಶರಾಗಿ ಈ ರೀತಿ ಮಾತನಾಡುತ್ತಿದ್ದಾರೆ. ಅವರ ಭಾವನಾತ್ಮಕ ಆಟ ಜನರಿಗೆ ಗೊತ್ತಾಗಿದೆ. ಅವರು ಸುಳ್ಳು ಹೇಳುವುದು, ಭಾವನಾತ್ಮಕವಾಗಿ ಶೋಷಣೆ ಮಾಡುವುದು ಜನರಿಗೆ ಗೊತ್ತಾಗಿದೆ. ಜನರಿಗೆ ಗೊತ್ತಾದ ಮೇಲೆ ಪುನ: ಅದೇ ತಪ್ಪನ್ನು ಮಾಡುವುದಿಲ್ಲ. ಮೇಲಕ್ಕೇರಿದವರು ಕೆಳಕ್ಕೆ ಇಳಿಯಲೇಬೇಕು ಎಂದರು.

ನೈತಿಕ ಹಕ್ಕಿಲ್ಲ: ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಅವರು ರಾಜ್ಯದಲ್ಲಿ ಬರಗಾಲ ಇರುವುದರಿಂದ ರೈತರ ಸಾಲ ಮನ್ನಾ ಮಾಡಬೇಕು ಎಂದು ಹೇಳಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ಅವರು ಹಿಂದೆ ಸಾಲ ಮನ್ನಾ ಮಾಡಿ ಎಂದಾಗ ನಮ್ಮ ಬಳಿ ಪ್ರಿಂಟಿಂಗ್ ಮಶೀನ್ ಇಲ್ಲ ಎಂದಿದ್ದರು. ಇವರಿಗೆ ಯಾವ ನೈತಿಕತೆ ಇದೆ ಎಂದು ಪ್ರಶ್ನಿಸಿದರು.

ಭೌದ್ಧ ಧರ್ಮಗುರು ಬಂತೇಜಿ ಸ್ವಾಮೀಜಿ, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಭಾಗ್ಯಲಕ್ಷ್ಮಿ ಶ್ರೀನಿವಾಸ್ ಪ್ರಸಾದ್, ಸಚಿವರಾದ ಹೆಚ್.ಸಿ.ಮಹದೇವಪ್ಪ ಮತ್ತು ಜಿಲ್ಲೆಯ ಶಾಸಕರುಗಳು ಉಪಸ್ಥಿತರಿದ್ದರು.

ಮೋದಿ ಮತ್ತೆ ಪ್ರಧಾನಿ: ಯಡಿಯೂರಪ್ಪ

ಮೈಸೂರು: ನರೇಂದ್ರ ಮೋದಿಯವರು 400 ಕ್ಕು ಹೆಚ್ಚು ಸ್ಥಾನ ಗೆದ್ದು ಮತ್ತೆ ಪ್ರಧಾನಿಯಾಗುತ್ತಾರೆ. ಸೂರ್ಯ ಚಂದ್ರ ಇರೋದು ಎಷ್ಟು ಸತ್ಯ ಇದು ಅಷ್ಟೆ ಸತ್ಯ ಎಂದು ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್. ಯಡಿಯೂರಪ್ಪ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಂದೆ ಪ್ರಧಾನಿಯಾಗಿ ಏನು ಕೆಲಸ ಮಾಡಬೇಕು ಎಂಬುದನ್ನು ಮೋದಿಯವರು ಈಗಲೇ ಚಿಂತೆ ಮಾಡಿದ್ದಾರೆ. ನಾವು ರಾಜ್ಯದಲ್ಲಿ ಕನಿಷ್ಠ 24–25 ಸ್ಥಾನ ಗೆಲ್ಲುತ್ತೇನೆ. ಕಾಂಗ್ರೆಸ್ ನವರು ಏನೇ ಹೇಳಿದ್ದು ನಾವು ತಲೆ ಕೆಡಿಸಿಕೊಳ್ಳುವುದಿಲ್ಲ ಎಂದರು.

ಮೈತ್ರಿ ಮುಂದುವರಿಕೆ: ವಿಧಾನಪರಿಷತ್ ಚುನಾವಣೆಯಲ್ಲೂ ಜೆಡಿಎಸ್–ಬಿಜೆಪಿ ಮೈತ್ರಿ ಮುಂದುವರಿಯುತ್ತದೆ. ಜೆಡಿಎಸ್ ಗೆ 2 ಸ್ಥಾನ ಬಿಟ್ಟುಕೊಟ್ಟು ನಾವು 4 ಕ್ಷೇತ್ರಗಳಲ್ಲಿ ಸ್ಪರ್ಧೆ ಮಾಡುತ್ತೇವೆ. ಯಾವ ಕ್ಷೇತ್ರ ಬಿಟ್ಟು ಕೊಡಬೇಕು ಎಂಬ ದರ ಬಗ್ಗೆ ಇನ್ನೂ ತೀರ್ಮಾನವಾಗಿಲ್ಲ. ಇದು ಸಂಜೆ ಪಕ್ಷದ ಅಧ್ಯಕ್ಷ ಜೆ.ಪಿ. ನಡ್ಡಾ ವಿದರ ಬಿಡುಗಡೆ ಮಾಡಲಿದ್ದಾರೆ ಎಂದು ಮಾಹಿತಿ ನೀಡಿದರು.

ರಾಜ್ಯದಲ್ಲಿ ಭೀಕರ ಬರಗಾಲ ಬಂದಿದೆ. ಕೆರೆ–ಕಟ್ಟೆಗಳು ಬತ್ತಿ ಹೋಗಿವೆ. ಬರಗಾಲ ಜನರನ್ನು ಕಿತ್ತು ತಿನ್ನುತ್ತಿದೆ. ರಾಜ್ಯ ಸರ್ಕಾರ ಸಾಲ ಮನ್ನಾ ಮಾಡಿ ರೈತರಿಗೆ ನೆರವಾಗಬೇಕು ಎಂದು ಒತ್ತಾಯಿಸಿದರು. ಲೋಕಸಭಾ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟ 400ಕ್ಕೂ ಹೆಚ್ಚು ಸ್ಥಾನಗಳನ್ನು ಗೆಲ್ಲಲಿದೆ. ನರೇಂದ್ರ ಮೋದಿ ಮತ್ತೆ ಪ್ರಧಾನಿ ಆಗುತ್ತಾರೆ. ಸೂರ್ಯ–ಚಂದ್ರ ಇರುವುದು ಎಷ್ಟು ಸತ್ಯವೋ ಮೋದಿ ಮತ್ತೊಮ್ಮೆ ಪ್ರಧಾನಿ ಆಗುವುದೂ ಅಷ್ಟೇ ಸತ್ಯ. ಮುಂದೆ ಪ್ರಧಾನಿಯಾಗಿ ಏನು ಕೆಲಸ ಮಾಡಬೇಕು ಎಂಬುದನ್ನು ಅವರು ಈಗಾಗಲೇ ಚಿಂತಿಸಿದ್ದಾರೆ. ರಾಜ್ಯದಲ್ಲಿ ನಾವು ಕನಿಷ್ಠ 24–25 ಸ್ಥಾನಗಳನ್ನು ಗೆಲ್ಲುತ್ತೇವೆ' ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಕಾಂಗ್ರೆಸ್‌ನವರು ಏನೇ ಹೇಳಿದರೂ ನಾವು ತಲೆ ಕೆಡಿಸಿಕೊಳ್ಳುವುದಿಲ್ಲ. ಕಾಂಗ್ರೆಸ್‌ನಲ್ಲಿ ಪ್ರಧಾನಿ ಆಗುವ ಯೋಗ್ಯತೆ ಯಾರಿಗಿದೆ? ವಿಧಾನಸಭೆ ಚುನಾವಣೆಯಲ್ಲಿ ಬೇರೆ ಚರ್ಚೆಯಾಗಬಹುದು. ಆದರೆ, ಮೋದಿ ಮತ್ತೊಮ್ಮೆ ಪ್ರಧಾನಿ ಆಗಬೇಕು ಎಂಬುದು ಎಲ್ಲರ ಅಭಿಪ್ರಾಯವಾಗಿದೆ ಎಂದು ತಿಳಿಸಿದರು. ಸಂಸದ ಪ್ರಜ್ವಲ್ ರೇವಣ್ಣ ಪೆನ್‌ಡ್ರೈವ್ ಪ್ರಕರಣದ ತನಿಖೆ ಪಾರದರ್ಶಕವಾಗಿ ನಡೆಯಬೇಕಾದರೆ ಸಿಬಿಐಗೆ ಕೊಡಬೇಕು. ಬಹುತೇಕರ ಅಭಿಪ್ರಾಯ ಇದೇ ಆಗಿದೆ ಎಂದು ಹೇಳಿದರು.

ನೇಣು ಬಿಗಿದ ಸ್ಥಿತಿಯಲ್ಲಿ ಕೆಎಎಸ್ ಅಧಿಕಾರಿ ಪತ್ನಿ ಮೃತದೇಹ ಪತ್ತೆ



ಬೆಂಗಳೂರು: ರಾಜ್ಯ ರಾಜಧಾನಿಯಲ್ಲಿ ಕೆಎಎಸ್ ಅಧಿಕಾರಿಯೊಬ್ಬರ ಪತ್ನಿ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದು, ಘಟನೆ ಬೆಂಗಳೂರಿನ ಸಂಜಯ್?ನಗರದಲ್ಲಿ ವರದಿಯಾಗಿದೆ.

ವೃತ್ತಿಯಲ್ಲಿ ವಕೀಲರಾಗಿದ್ದ ಕೆಎಎಸ್ ಅಧಿಕಾರಿಯ ಪತ್ನಿ ಚೈತ್ರಾ ಗೌಡ, ಸಂಜಯ್ ನಗರದ ನಿವಾಸವೊಂದರಲ್ಲಿ ಸೀಲಿಂಗ್ ಫ್ಯಾನ್‌ಗೆ ನೇಣುಬಿಗಿದ ಸ್ಥಿತಿಯಲ್ಲಿ ಶವವಾಗಿ ಪತ್ತೆಯಾಗಿರುವುದು ಬೆಳಿಗೆಗೆ ಬಂದಿದೆ.

ಆತ್ಮಹತ್ಯೆ ಎಂದು ಹೇಳಲಾದ ಈ ಘಟನೆ ಬಗ್ಗೆ ಸದ್ಯ ಹೆಚ್ಚಿನ ಮಾಹಿತಿ ಲಭಿಸಬೇಕಿದೆ. ಮೃತ ಚೈತ್ರಾ ಗೌಡ, ಮನೆಯಲ್ಲಿದ್ದ ಫ್ಯಾನ್‌ನಲ್ಲಿ ನೇಣಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದಾರೆ. ಶವವಿದ್ದ ಕೋಣೆಯಲ್ಲಿ ಯಾವುದಾದರೂ ಡೆತ್ ನೋಟ್ ಇರಬಹುದೇ ಎಂದು ಪರಿಶೀಲಿಸಿ ನೋಡಿದಾಗ ಅಲ್ಲಿಯೂ ಏನೂ ಸಿಕ್ಕಿಲ್ಲ. ಇದು ಭಾರೀ ಅನುಮಾನಕ್ಕೆ ದಾರಿ ಮಾಡಿಕೊಟ್ಟಿದ್ದು, ಸದ್ಯ ಘಟನಾ ಸ್ಥಳಕ್ಕೆ ಭೇಟಿ ನೀಡಿರುವ ಸಂಜಯ್?ನಗರದ ಪೊಲೀಸರು, ಚುರುಕಿನ ತನಿಖೆ ಕೈಗೊಂಡಿದ್ದಾರೆ.

ಬಿರುಗಾಳಿ ಮಳೆಗೆ ಬಾಳೆ ತೋಟ ಹಾನಿ ಲಕ್ಷಾಂತರ ರೂ. ನಷ್ಟ: ಪರಿಹಾರಕ್ಕೆ ಒತ್ತಾಯ



ಚಾಮರಾಜನಗರ: ತಾಲೂಕಿನ ವಿವಿಧೆಡೆ ಶನಿವಾರ ಮಧ್ಯಾಹ್ನ 3 ಗಂಟೆ ಸುಮಾರಿಗೆ ಸುರಿದ ಭಾರೀ ಮಳೆಗೆ ಬಾಳೆ ಬೆಳೆಗಾರರನ್ನು ಸಂಕಷ್ಟಕ್ಕೆ ದೂಡಿದು ಅಪಾರ ಹಾನಿಯಾಗಿದೆ.

ಚಾಮರಾಜನಗರ ತಾಲೂಕಿನ ದೊಡ್ಡಮೋಳೆ, ಡೊಳ್ಳಿಪುರ, ಉತ್ತುವಳ್ಳಿ, ಬ್ಯಾಡಮೂಡ್ಲು, ಮರಿಯಾಲದಲ್ಲಿ ರೈತರು ಬೆಳೆದ ಬಾಳೆ ಫಸಲು ನೆಲಕಚ್ಚಿದ್ದು, ಲಕ್ಷಾಂತರ ರೂ. ನಷ್ಟವಾಗಿದೆ.

ಕಳೆದ 6 ತಿಂಗಳು ಹಾಕಿದ್ದ ಶ್ರಮ ಅರ್ಧ ತಾಸಲ್ಲೇ ನಾಶವಾಗಿದ್ದು ಎಲ್ಲವೂ ಕೂಡ ಕಟಾವಿಗೆ ಬಂದಿದ್ದ ಫಸಲಾಗಿದ್ದು, ಲಕ್ಷಾಂತರ ರೂ. ನಷ್ಟ ಉಂಟಾಗಿದೆ..

ದೊಡ್ಡಮೋಳೆ ಗ್ರಾಮದ ಆರ್.ಮಹಾದೇವ, ಮಲ್ಲೇಶ್, ವೆಂಕಟೇಶ್, ಕರಿಯಣ್ಣ, ಉತ್ತುವಳ್ಳಿ ಗ್ರಾಮದ ರವಿ ಸೇರಿದಂತೆ ಹತ್ತಾರು ಮಂದಿ ರೈತರು ಒಂದು ದಿನದ ಮಳೆಗೆ ಕೈ ಸುಟ್ಟುಕೊಂಡಿದ್ದಾರೆ. ಬಾಳೆ ಬೆಳೆಗಾರರಿಗೆ ಸೂಕ್ತ ಪರಿಹಾರ ಕೊಡಬೇಕೆಂದು ಸ್ಥಳೀಯರು ಒತ್ತಾಯಿಸಿದ್ದಾರೆ.

ಸಂಗೊಳ್ಳಿ ರಾಯಣ್ಣ ಪ್ರತಿಮೆ ಭಗ್ನಗೊಳಿಸಿದ್ದ ವ್ಯಕ್ತಿ ಬಂಧನ



ಕೆ.ಆರ್.ಪೇಟೆ: ತಾಲ್ಲೂಕಿನ ಅಕ್ಕಿಹೆಬ್ಬಾಳು ಹೋಬಳಿ ಬೀಕನಹಳ್ಳಿ ಗ್ರಾಮದಲ್ಲಿ ಕಳೆದ ಮೂರು ದಿನಗಳ ಹಿಂದೆ ಸ್ವಾತಂತ್ರ್ಯ ಹೋರಾಟಗಾರ ಸಂಗೊಳ್ಳಿರಾಯಣ್ಣ ಪ್ರತಿಮೆಯನ್ನು ಭಗ್ನಗೊಳಿಸಿದ್ದ ಆರೋಪಿಯನ್ನು ಗ್ರಾಮಾಂತರ ಠಾಣೆಯ ಪೊಲೀಸ್ ನಿರೀಕ್ಷಕ ಆನಂದೇಗೌಡರ ನೇತೃತ್ವದ ಪೊಲೀಸರ ತಂಡ ಬಂಧಿಸುವಲ್ಲಿ ಯಶಸ್ವಿಯಾಗಿದೆ.

ಮೋಹನ(30) ಬಿನ್ ಅಣ್ಣೇಗೌಡ ಬಂಧಿತ ವ್ಯಕ್ತಿಯಾಗಿದ್ದು ಡಾಗ್‌ಸ್ಕ್ವಾಡ್ ನೀಡಿದ ಸುಳಿವಿನ ಬೆನ್ನತ್ತಿದ ಪೊಲೀಸ್ ನಿರೀಕ್ಷಕ ಆನಂದ್‌ಗೌಡ ಆರೋಪಿಯ ಪತ್ತಾಗಿ ತಂಡವೊಂದನ್ನು ರಚಿಸಿ ಕಾರ್ಯಚರಣೆ ಕೈಗೊಂಡ ಹಿನ್ನೆಲೆಯಲ್ಲಿ ಆರೋಪಿ ಮೋಹನ್‌ನನ್ನು ಬಂಧಿಸುವಲ್ಲಿ ಯಶಸ್ವಿಯಾಗಿದೆ.

ಬೀಕನಹಳ್ಳಿ ಗ್ರಾಮದ ನಿವಾಸಿಯಾದ ಮೋಹನ ಕಳೆದ ಹಲವು ವರ್ಷಗಳಿಂದಲೂ ಬೆಂಗಳೂರಿನಲ್ಲಿ ವಾಸವಿದ್ದನು. ಈತ ಬೆಂಗಳೂರಿನ ಜಿಗಣಿಯಲ್ಲಿ ಹೋಟೆಲ್ ಒಂದರಲ್ಲಿ ಕೆಲಸ ಮಾಡುತ್ತಿದ್ದು, ಕಳೆದ ವಾರ ಬೀಕನಹಳ್ಳಿ ಗ್ರಾಮಕ್ಕೆ ಆಗಮಿಸಿದ್ದ ಸಂದರ್ಭದಲ್ಲಿ ಪ್ರತಿಮೆಯ ಬಳಿ ಮದ್ಯಪಾನ ಮಾಡಿ ಕುಡಿದ ಅಮಲಿನಲ್ಲಿ ಈ ಕೃತ್ಯ ಎಸಗಿದ್ದಾನೆ.

ಇದರಿಂದಾಗಿ ಪ್ರತಿಮೆಯ ಹಲವು ಭಾಗಕ್ಕೆ ಭಗ್ನವಾಗಿದೆ. ಇದರಿಂದ ಮೋಹನ ಭಯಭೀತನಾಗಿ ಅಲ್ಲಿ ಇಲ್ಲಿ ಕಾಲ ಕಳೆಯುತ್ತಿದ್ದ ಸಮಯದಲ್ಲಿ ಖಚಿತ ಮಾಹಿತಿಯ ಮೇರೆಗೆ ಪೊಲೀಸರು ಆರೋಪಿ ಮೋಹನನ್ನು ಬಂಧಿಸಿದ್ದಾರೆ.

ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಪ್ರತಿಮೆ ಭಗ್ನವಾಗಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಸುದ್ದಿಯಾಗಿದ್ದ ಘಟನೆ ತೀವ್ರ ಸ್ವರೂಪ ಪಡೆಯುತ್ತಿದ್ದ ಸಮಯದಲ್ಲಿ ಕೇವಲ 2–3 ದಿನಗಳಲ್ಲಿಯೇ ಆರೋಪಿಯನ್ನು ಬಂಧಿಸಿದ ಪೊಲೀಸರ ಕಾರ್ಯಕ್ಕೆ ಸಾರ್ವಜನಿಕರು ಶ್ಲಾಘನೆ ವ್ಯಕ್ತಪಡಿಸಿದ್ದರೆ.

ಬಾರ್ ಬೀಗ ಮುರಿದು 35 ಸಾವಿರ ಮೌಲ್ಯದ ಮದ್ಯ ಕಳ್ಳತನ



ಹನೂರು: ಪಟ್ಟಣದ ಅಮೃತ್ ಬಾರ್ ಅಂಡ್ ರೆಸ್ಟೋರೆಂಟ್‌ನಲ್ಲಿ ಶನಿವಾರ ಮುಂಜಾನೆ ಸುಮಾರು 35 ಸಾವಿರ ಬೆಲೆ ಬಾಳುವ ಮದ್ಯವನ್ನು ಕಳ್ಳರು ಕಳ್ಳತನ ಮಾಡಿದ್ದಾರೆ ಎಂದು ನೌಕರ ರಾಜೇಶ್ ಹನೂರು ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಘಟನೆಯ ವಿವರ: ಪಟ್ಟಣದ ಬಂಡಳ್ಳಿ ಮುಖ್ಯ ರಸ್ತೆಯಲ್ಲಿರುವ ಅಮೃತ್ ಬಾರ್ ಅಂಡ್ ರೆಸ್ಟೋರೆಂಟ್‌ನಲ್ಲಿ ನಾನು ಹಲವು ವರ್ಷಗಳಿಂದ ಬಾರ್ ಕ್ಯಾಶಿಯರ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದು ಎಂದಿನಂತೆ ಮೇ 11ರ ಬೆಳಿಗ್ಗೆ ಬಾರ್ ತೆಗೆದು ಒಳ ಹೋಗಿ ನೋಡಿದಾಗ ಬಾರ್ ಹಿಂಭಾಗದ ಶೆಲ್ಟರ್ ಹೊಡೆದು ಯಾರೋ ಕಳ್ಳರು ಶೆಲ್ಟರ್ ಕೊಕ್ಕೆ ಯನ್ನು ಹೊಡೆದು ಒಳ ನುಗ್ಗಿ ಒಳಗೆ ಇದ್ದ ವಿವಿಧ ಕಂಪನಿಯ ಮದ್ಯವನ್ನು ಕಳ್ಳತನ ಮಾಡಿಕೊಂಡು ಹೋಗಿದ್ದಾರೆ.

ಸಂತೇಮರಳ್ಳಿ ಗ್ರಾಮದ ಜೀವನ್ ಎಂಬಾತ ಒಂದು ವರ್ಷದ ಹಿಂದೆ ನಮ್ಮ ಅಮೃತ್ ಬಾರ್ ರೆಸ್ಟೋರೆಂಟ್‌ನಲ್ಲಿ ಕೆಲಸ ಮಾಡಿ ಬಿಟ್ಟು ಹೋಗಿರುತ್ತಾನೆ. ನನಗೆ ಈತನ ಮೇಲೆ ಅನುಮಾನವಿದ್ದು, ಈ ಸಂಬಂಧ ಕಳ್ಳತನ ಮಾಡಿರುವ ಕಳ್ಳನನ್ನು ಪತ್ತೆ ಹಚ್ಚಿ ಕಾನೂನು ಕ್ರಮ ಕೈಗೊಳ್ಳಬೇಕೆಂದು ದೂರು ನೀಡಿದ್ದಾರೆ. ಎ.ಎಸ್‌ಐ ಶಿವಕುಮಾರ್ ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

ಸ್ಥಳಕ್ಕೆ ಬೆರಳಚ್ಚು ತಜ್ಞರ ಭೇಟಿ: ಅಮೃತ್ ಬಾರ್ ಅಂಡ್ ರೆಸ್ಟೋರೆಂಟ್‌ನಲ್ಲಿ ಕಳ್ಳತನ ದೂರು ದಾಖಲಾಗುತ್ತಿದ್ದಂತೆ ಪಟ್ಟಣ ಪೊಲೀಸ್ ಠಾಣೆಯ ಸಬ್ ಇನ್ಸ್‌ಪೆಕ್ಟರ್ ರಿಹಾನ ಬೇಗಮ್ ನೇತೃತ್ವದಲ್ಲಿ ಚಾಮರಾಜನಗರ ಜಿಲ್ಲಾ ಕೇಂದ್ರದಿಂದ ಆಗಮಿಸಿದ್ದ ಬೆರಳಚ್ಚು ತಜ್ಞರು ಹಾಗೂ ಶ್ವಾನದಳದ ಸಿಬ್ಬಂದಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಧಾರಾಕಾರ ಮಳೆ: ಕೆಆರ್‌ಎಸ್‌ನಲ್ಲಿ ಮನೆಗಳಿಗೆ ನುಗ್ಗಿದ ನೀರು



ಶ್ರೀರಂಗಪಟ್ಟಣ: ತಾಲೂಕಿನಾದ್ಯಂತ ಶುಕ್ರವಾರ ರಾತ್ರಿ ಸುರಿದ ಧಾರಾಕಾರದ ಮಳೆಯಿಂದಾಗಿ ತಾಲ್ಲೂಕಿನ ಕೆಆರ್‌ಎಸ್ ನಲ್ಲಿನ ಮನೆಗಳಿಗೆ ನೀರು ನುಗ್ಗಿ ಮನೆ ಕಾಂಪೌಂಡ್‌ಗಳು ಕುಸಿತಗೊಂಡು, ರಸ್ತೆ ಬದಿ ಮರಗಳು ನೆಲಕ್ಕುರುಳಿರುವ ಘಟನೆ ಸಂಭವಿಸಿದೆ.

ತಾಲೂಕಿನ ಹುಲಿಕೆರೆ ಗ್ರಾಮದ ಕಾಲೋನಿಯಲ್ಲಿನ ತಗ್ಗು ಪ್ರದೇಶದ ಮನೆಗಳಿಗೆ ನೀರು ನುಗ್ಗಿ ಮನೆಯ ಫ್ರಿಡ್ಜ್, ವಾಷಿಂಗ್ ಮಿಷನ್, ಪೀಠೋಪಕರಣ ಸೇರಿದಂತೆ ಇತರ ಗೃಹೋಪಯೋಗಿ ವಸ್ತುಗಳು ಕೆಟ್ಟು ಹಾನಿಯಾಗಿವೆ. ಧಾರಾಕಾರ ಮಳೆ ಹಿನ್ನಲೆಯಲ್ಲಿ ತಗ್ಗು ಪ್ರದೇಶದ ಮನೆಗಳಿಗೆ ನುಗ್ಗಿದ ನೀರಿನಿಂದ ಮನೆಯಲ್ಲಿನ ಪಾತ್ರೆಗಳು ನೀರಲ್ಲಿ ತೇಲಾಡಿದ್ದು, ಮನೆಯಲ್ಲಿದ್ದ ದವಸ ಧಾನ್ಯಗಳು ಕೂಡ ನೀರಿಗೆ ಆಹುತಿಯಾಗಿವೆ.

ಅವೈಜ್ಞಾನಿಕ ಚರಂಡಿ: ಘಟನೆಗೆ ಹುಲಿಕೆರೆ ಗ್ರಾಮದ ಜುವಾರಿ ಗಾರ್ಡನ್ ಪಕ್ಕದಲ್ಲಿ ನಿರ್ಮಿಸಲಾದ ಅವೈಜ್ಞಾನಿಕ ಚರಂಡಿ ನಿರ್ಮಾಣದ ವ್ಯವಸ್ಥೆಯಿಂದಾಗಿ ಗುಂಡಿಯಲ್ಲಿನ ನೀರು ಹೊರ ಹೋಗದೆ ತಗ್ಗು ಪ್ರದೇಶದ 30ಕ್ಕೂ ಹೆಚ್ಚು ಮನೆಗಳಿಗೆ ನುಗ್ಗಿ ಈ ಅವಾಂತರಕ್ಕೆ ಕಾರಣವಾಗಿದೆ ಎಂದು ಸ್ಥಳೀಯ ದೂರಿದ್ದಾರೆ. ಜುವಾರಿ ಗಾರ್ಡನ್ ಕಾಂಪೌಂಡ್ ಕುಸಿದು ಬಿದ್ದ ಪರಿಣಾಮ, ತಗ್ಗು ಪ್ರದೇಶಗಳಿಗೆ ನುಗ್ಗಿದ ನೀರು ಹಲವು ಮನೆಗಳನ್ನು ಜಲಾವೃತಗೊಳಿಸಿವೆ.

ಸ್ಥಳಕ್ಕೆ ಅಧಿಕಾರಿಗಳ ಭೇಟಿ: ಸ್ಥಳೀಯ ನಿವಾಸಿಗಳ ಕರೆಗೆ ಓಗೊಟ್ಟು ಘಟನಾ ಸ್ಥಳಕ್ಕೆ ಹುಲಿಕೆರೆ ಗ್ರಾಪಂ ಪಿಡಿಒ, ಕಂದಾಯ ಅಧಿಕಾರಿಗಳು ಹಾಗೂ ಸ್ಥಳೀಯ ಜನಪ್ರತಿನಿಧಿಗಳು ಭೇಟಿ ನೀಡಿ ಪರಿಶೀಲಿಸಿದ್ದು, ತಹಶೀಲ್ದಾರ್ ಅವರಿಗೂ ದೂರವಾಣಿ ಕರೆ ಮಾಡಿ ಇಲ್ಲಿನ ಅವ್ಯವಸ್ಥೆ ಕುರಿತಾಗಿ ಮಾಹಿತಿ ನೀಡಿದ್ದಾರೆ.

ಸ್ಥಳೀಯ ನಿವಾಸಿಗಳು ಹಾಗೂ ಮಹಿಳೆಯರು ಅಧಿಕಾರಿಗಳ ಮುಂದೆ ಸಮಸ್ಯೆ ಹೇಳಿಕೊಂಡು ಕಣ್ಣೀರಿಟ್ಟು ಮನೆಗೆ ನುಗ್ಗಿದ ನೀರಿನಿಂದ ಹಾಳಾದ ದವಸ ಧಾನ್ಯ ಮನೆ ಕಾಂಪೌಂಡ್‌ನ ಬಗ್ಗೆ ಹೇಳಿಕೊಂಡರಲ್ಲದೆ ಗ್ರಾಮದಲ್ಲಿ ಈ ಸಮಸ್ಯೆಯ ಶಾಶ್ವತಕ್ಕೆ ನಿವಾರಿಸುವಂತೆ ಅಧಿಕಾರಿಗಳಿಗೆ ಮನವಿ ಮಾಡಿದ್ದಾರೆ. ಜೊತೆಗೆ ಮಳೆಯ ನೀರಿನಿಂದಾದ ನಷ್ಟಕ್ಕೆ ಪರಿಹಾರ ನೀಡ ಬೇಕು, ತಕ್ಷಣ ತುರ್ತು ಕಾಮಗಾರಿ ನಡೆಸಿ ಸಮಸ್ಯೆ ಬಗೆಹರಿಸುವಂತೆ ನಿವಾಸಿಗಳು ಒತ್ತಾಯಿಸಿದ್ದಾರೆ.

ಗ್ರಾಪಂ. ಅಧಿಕಾರಿಗಳು ಹಾಗೂ ಕಂದಾಯ ಅಧಿಕಾರಿಗಳು ಚರ್ಚೆ ಮಾಡಿದ ನಂತರ ತಹಶೀಲ್ದಾರ್ ಅದೇಶದ ಮೇರೆಗೆ, ಸ್ಥಳೀಯ ಪೊಲೀಸ್ ಠಾಣೆ, ನಗರಾಭಿವೃದ್ಧಿ ಇಲಾಖೆ, ನೀರಾವರಿ ಇಲಾಖೆ ಹಾಗೂ ಜುವಾರಿ ಗಾರ್ಡನ್ ಸಿಟಿಯ ವ್ಯವಸ್ಥ

website: www.kayakayogi.com

ಕಾಯಕ ಯೋಗಿ

KAYAKA YOGI - Regional Daily

ಪುಟ–2 | 12–05–2024

ಮಂಡ್ಯ

15ರಂದು ಆಡಳಿತ ತಜ್ಞ ಬಿ.ಜಿ.ದಾಸೇಗೌಡ ಕೃತಿ ಬಿಡುಗಡೆ

ಮಂಡ್ಯ: ಕರ್ನಾಟಕ ಸಂಘ ಹಾಗೂ ಬಿ.ಜಿ.ದಾಸೇಗೌಡರ ಕುಟುಂಬ ವರ್ಗದ ವತಿಯಿಂದ ಆಡಳಿತ ತಜ್ಞ ಬಿ.ಜಿ.ದಾಸೇಗೌಡ ಕೃತಿ ಬಿಡುಗಡೆ ಸಮಾರಂಭವನ್ನು ಮೇ 15ರಂದು ಬೆಳಿಗ್ಗೆ 11 ಗಂಟೆಗೆ ಮಂಡ್ಯ ನಗರದ ಕೆವಿ ಶಂಕರಗೌಡ ಶತಮಾನೋತ್ಸವ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ಸಂಘದ ಅಧ್ಯಕ್ಷ ಪ್ರೊ.ಜಯಪ್ರಕಾಶ್ ಗೌಡ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಶ್ರೀ ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿ ಅವರ ದಿವ್ಯ ಸಾನಿಧ್ಯ ಹಾಗೂ ಶ್ರೀ ಪುರುಷೋತ್ತಮಾನಂದನಾಥ ಸ್ವಾಮೀಜಿ ಅವರ ಸಾನಿಧ್ಯದಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ನಿವೃತ್ತ ಐಎಎಸ್ ಅಧಿಕಾರಿ ತಿಮ್ಮೇಗೌಡ ಪುಸ್ತಕವನ್ನು ಬಿಡುಗಡೆ ಮಾಡಲಿದ್ದು, ವಿಧಾನ ಪರಿಷತ್ ಮಾಜಿ ಸದಸ್ಯ ಕೆ.ಟಿ.ಶ್ರೀಕಂಠೇಗೌಡ ಅವರು, ಕೃತಿ ಹಾಗೂ ಬಿ.ಜಿ.ದಾಸೇಗೌಡರ ಕುರಿತು ಮಾತನಾಡಲಿದ್ದಾರೆ ಎಂದರು .

ಈ ಸಂದರ್ಭದಲ್ಲಿ ಮೈಕುಗರ್ ಕಂಪನಿಯ ನಿವೃತ್ತ ವ್ಯವಸ್ಥಾಪಕ ನಿರ್ದೇಶಕ ಬಿ ಮೋಹನ್ ದಾಸ್, ರೈತ ಮುಖಂಡ ಕೆ.ಜೋರಯ್ಯ, ಕೃತಿಯ ಕರ್ತೃ ಚಂದಗಾಲು ಲೋಕೇಶ್ ಉಪಸ್ಥಿತರಿರಲಿದ್ದಾರೆ ಎಂದರು.

ಮಾಜಿ ಶಾಸಕ ಜಿ.ಬಿ.ಶಿವಕುಮಾರ್ ಮಾತನಾಡಿ ಕೊಲ್ಲನ್ ಮತ್ತು ವಿಶ್ವೇಶ್ವರಯ್ಯ ಅವರ ಶ್ರಮದಿಂದ ಇಡೀ ಏಷ್ಯಾ ಖಂಡದಲ್ಲಿಯೇ ಸರ್ಕಾರಿ ಸ್ವಾಮ್ಯದಲ್ಲಿ ಮೈಕುಗರ್ ಕಾರ್ಖಾನೆಯನ್ನು ತೆರೆಯಲಾಯಿತು. ಬಿ.ಜಿ.ದಾಸೇಗೌಡರು ಕಂಪನಿಯಲ್ಲಿ ಅಧಿಕಾರಿಯಾಗಿ ಕಾರ್ಖಾನೆಯ ಯಶಸ್ಸಿಗೆ ಶ್ರಮ ಹಾಕಿದ್ದಾರೆ. ಶಿಸ್ತಿಗೆ ಮತ್ತೊಂದು ಹೆಸರೇ ದಾಸೇಗೌಡರು ಎಂದರು.

ಫೋಷ್ಯಿಯಲ್ಲಿ ರೈತ ಮುಖಂಡ ಕೆ.ಜೋರಯ್ಯ, ಜಿಪಂ ಮಾಜಿ ಅಧ್ಯಕ್ಷ ತಗ್ಗಹಳ್ಳಿ ವೆಂಕಟೇಶ್, ನಗರಸಭಾ ಸದಸ್ಯ ಮಂಜುಳಾ ಉದಯಶಂಕರ್, ಚಿಂದಗಾಲು ಲೋಕೇಶ್, ನಿವೃತ್ತ ಮೆಕಾನಿಕಲ್ ಇಂಜಿನಿಯರ್ ಗಿರಿದಾಸ್, ನಾಗಪ್ಪ ಉಪಸ್ಥಿತರಿದ್ದರು.

ಕೆರಗೋಡು: ಹನುಮ ಭಕ್ತರ ಮೇಲೆ ದೌರ್ಜನ್ಯ– ಪೊಲೀಸರ ವಿರುದ್ಧ ಪ್ರತಿಭಟನೆ



ಮಂಡ್ಯ: ಕೆರಗೋಡು ಹನುಮ ಧ್ವಜ ಹೋರಾಟದಲ್ಲಿ ಭಾಗಿಯಾಗಿದ್ದ ಹನುಮ ಭಕ್ತರ ಮೇಲೆ ರಾಜಕೀಯ ಪ್ರಭಾವಕ್ಕೊಳಗಾಗಿ ನಿರಂತರ ದೌರ್ಜನ್ಯ, ದಬ್ಬಾಳಿಕೆ ಮಾಡುತ್ತಿರುವ ಪೊಲೀಸ್ ಅಧಿಕಾರಿಗಳನ್ನು ಸೇವೆಯಿಂದ ಅಮಾನತು ಮಾಡುವಂತೆ ಒತ್ತಾಯಿಸಿ ಹಿಂದೂ ಸಂಘಟನೆಗಳ ಕಾರ್ಯಕರ್ತರು ಕೆರಗೋಡು ಗ್ರಾಮದಲ್ಲಿ ಪ್ರತಿಭಟನಾ ಮೆರವಣಿಗೆ ನಡೆಸಿದರು.

ಗ್ರಾಮದ ಬಸ್ ನಿಲ್ದಾಣ ಸಮೀಪದ ವೃತ್ತದಿಂದ ವಿಶ್ವ ಹಿಂದೂ ಪರಿಷತ್ ನೇತೃತ್ವದಲ್ಲಿ ಹಿಂದೂ ಸಂಘಟನೆಯ ಕಾರ್ಯಕರ್ತರು ಮೆರವಣಿಗೆ ಹೊರಟು ಜೈ ಶ್ರೀ ರಾಮ್ ಘೋಷಣೆ ಕೂಗುತ್ತಾ ಪೊಲೀಸ್ ಠಾಣೆವರೆಗೆ ತೆರಳಿ ಪೊಲೀಸರು ಜಾರಿ ಮಾಡಿದ್ದ ನೋಟಿಸ್ ಗೆ ಉತ್ತರ ನೀಡಿದರು.

ಕೆರಗೋಡು ಗ್ರಾಮದಲ್ಲಿ ಕಳೆದ ಕೆಲವು ತಿಂಗಳ ಹಿಂದೆ ಹನುಮ ಧ್ವಜಸ್ತಂಬದಲ್ಲಿ ಹನುಮ ಧ್ವಜ ಹಾರಾಟ ಮಾಡಲಾಗಿತ್ತು. ಇದಕ್ಕೆ ಜಿಲ್ಲಾಡಳಿತ ರಾಷ್ಟ್ರಧ್ವಜ ಹಾರಿಸಲು ಅನುಮತಿ ಪಡೆದು ಹನುಮ ಧ್ವಜ ಹಾರಿಸಲಾಗಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದಾಗ ಹನುಮ ಧ್ವಜ ಉಳಿವಿಗಾಗಿ ಸಾವಿರಾರು ಹನುಮ ಭಕ್ತರು ಹೋರಾಟ ಮಾಡಿದ್ದರು, ರಾಜ್ಯ ಸರ್ಕಾರ ಹಾಗೂ ಸಚಿವ,ಶಾಸಕರ ಒತ್ತಡಕ್ಕೆ ಮಣಿದು ಹನುಮ ಧ್ವಜ ತೆರವು ಮಾಡಿ ರಾಷ್ಟ್ರಧ್ವಜ ಹಾರಿಸಿದ್ದರು ಅಂದು ಹೋದ ಅಧಿಕಾರಿಗಳು ಇಂದಿಗೂ ಸಹ ಇತ್ತ ತಲೆ ಹಾಕದೆ ರಾಷ್ಟ್ರಧ್ವಜವನ್ನು ಸಹ ಹಾರಿಸದೆ ಅಗೌರವ ತೋರುತ್ತಿದ್ದಾರೆ ಎಂದು ದೂರಿದರು.

ಹನುಮಧ್ವಜ ಹೋರಾಟದಲ್ಲಿ ಭಾಗಿಯಾಗಿದ್ದವರ ಮೇಲೆ ಶಾಸಕರು ದ್ವೇಷ ರಾಜಕಾರಣ ಮಾಡುತ್ತಿದ್ದಾರೆ. ರಾಜಕೀಯ ಒತ್ತಡಕ್ಕೆ ಒಳಗಾಗಿರುವ ಪೊಲೀಸರು ಅಮಾಯಕರ ಮೇಲೆ ದೌರ್ಜನ್ಯದಬ್ಬಾಳಿಕೆ ಮಾಡುತ್ತಿದ್ದಾರೆ. ಜೈ ಶ್ರೀರಾಮ್ ಘೋಷಣೆ ಕೂಗಿದವರನ್ನು ಠಾಣೆಗೆ ಕರೆಸಿ ಬೆದರಿಕೆ ಹಾಕಲಾಗುತ್ತಿದೆ. ಹನುಮ ಧ್ವಜ ಹೋರಾಟದಲ್ಲಿ ಭಾಗಿಯಾಗಿದ್ದ ಬಾಲಕೃಷ್ಣ, ಶಿವು, ಕಾರ್ತಿಕ್ ಹಾಗೂ ಹರೀಶ್ ಗೆ ನಿಮ್ಮನ್ನು ಏಕೆ ರೌಡಿ ಶೀಟರ್ ಪಟ್ಟಿಗೆ ಸೇರಿಸಬಾರದು ಎಂದು ನೋಟಿಸ್ ಜಾರಿ ಮಾಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ರೌಡಿಶೀಟರ್ ಪಟ್ಟಿಗೆ ಸೇರ್ಪಡೆ ಮಾಡಲು ಅದಕ್ಕೆ ಆದ ನಿಯಮಾವಳಿಗಳಿವೆ ಆದರೆ ಅದನ್ನೆಲ್ಲ ಗಾಳಿಗೆ ತೂರಿ ಯಾವುದೇ ಕ್ರಿಮಿನಲ್ ಅಪರಾಧ ಇಲ್ಲದಿದ್ದರೂ ಹನುಮ ಧ್ವಜ ಹೋರಾಟದಲ್ಲಿ ಬಾಗಿಯಾಗಿದ್ದಾರೆ ಎಂಬ ಏಕೈಕ ಕಾರಣಕ್ಕೆ ರೌಡಿಶೀಟರ್ ಪಟ್ಟಿಗೆ ಸೇರಿಸಲು ಪೋಲಿಸ್ ಅಧಿಕಾರಿಗಳು ಮುಂದಾಗಿದ್ದಾರೆ. ಕೆರಗೋಡು ಠಾಣೆಯ ಸಬ್ ಇನ್ಸ್ಪೆಕ್ಟರ್, ಸರ್ಕಲ್ ಇನ್ಸ್ಪೆಕ್ಟರ್ ಹಾಗೂ ಡಿವೈಎಸ್ಪಿ ವಿನಾಕಾರಣ ಕಿರುಕುಳ ನೀಡುತ್ತಿದ್ದು, ಹಿಂದೂ ಸಂಘಟನೆಗಳ ಕಾರ್ಯಕರ್ತರನ್ನು ಗುರಿ ಮಾಡಲಾಗಿದೆ ಎಂದು ಕಿಡಿಕಾರಿದರು.

ಶಾಸಕರು ಮತ್ತು ಜಿಲ್ಲಾ ಉಸ್ತುವಾರಿ ಸಚಿವರ ಒತ್ತಡದಿಂದ ಯುವಕರನ್ನು ಹೆದರಿಸಿ, ಬೆದರಿಸುವ ಕೆಲಸಕ್ಕೆ ಪೊಲೀಸರು ಮುಂದಾಗಿದ್ದು, ಹನುಮಧ್ವಜ ವಿಚಾರದಲ್ಲಿ ಜಿಲ್ಲಾಡಳಿತ ನಮ್ಮಗಳ ವಿರುದ್ಧ ನಿಂತಾಗ ಕಾನೂನಾತ್ಮಕ ಹೋರಾಟದಿಂದ ನ್ಯಾಯ ಪಡೆಯಲು ಮುಂದಾಗಿದ್ದು, ಆದರೆ ಪೋಲೀಸರು ಕೆರಗೋಡು ಮತ್ತು ಸುತ್ತಮುತ್ತಲ ಗ್ರಾಮದ ಯುವಜನರಲ್ಲಿ ಬೀತಿ ವಾತಾವರಣ ಸೃಷ್ಟಿಸುತ್ತಿದೆ. ಈ ಕೂಡಲೇ ಪೊಲೀಸ್ ಅಧಿಕಾರಿಗಳನ್ನು ಅಮಾನತು ಮಾಡುವಂತೆ ಒತ್ತಾಯಿಸಿದರು.

ಪೊಲೀಸರ ನೋಟಿಸ್‌ಗೆ ಉತ್ತರ ನೀಡುತ್ತೇವೆ, ಪೊಲೀಸರು ರಾಜಕೀಯ ಪ್ರಭಾವಕ್ಕೆ ಒಳಗಾಗಿ ಅಮಾಯಕ ಯುವಕರನ್ನು ರೌಡಿಶೀಟರ್ ಪಟ್ಟಿಗೆ ಸೇರಿಸಲು ಮುಂದಾದರೆ ಕಾನೂನು ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.

ಜೆಡಿಎಸ್ ಮುಖಂಡ ಬಿ.ಆರ್. ರಾಮಚಂದ್ರ, ರಘುನಂದನ್, ವಸಂತಕುಮಾರ್, ಯೋಗೇಶ್, ನರಸಿಂಹಮೂರ್ತಿ, ವಿರೂಪಾಕ್ಷ, ಬಾಲು ಚಿಕ್ಕಬಳ್ಳಿ, ಶ್ರೀನಿವಾಸ್ ನೇತೃತ್ವ ವಹಿಸಿದ್ದರು.

ಪೆನ್‌ಡ್ರೈವ್ ಪ್ರಕರಣ ಪಾರದರ್ಶನ ತನಿಖೆಗೆ ಆಗ್ರಹಿಸಿ ಹಾಸನ ಚಲೋ: ರಮೇಶ್‌ಗೌಡ



ಮಂಡ್ಯ: ಸಂಸದ ಪ್ರಜ್ವಲ್ ರೇವಣ್ಣ ಅವರು ಸಹಾಯ ಕೋರಿ ಬಂದ ಮಹಿಳೆಯರನ್ನು ಲೈಂಗಿಕವಾಗಿ ಶೋಷಣೆ ಮಾಡಿರುವುದನ್ನು ಖಂಡಿಸಿ ಅವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಅಬಲೆಯರನ್ನು ಗೌರವಿಸೋಣ ಅತ್ಯಾಚಾರಿಗೆ ತಕ್ಕ ಶಾಸ್ತಿ ಮಾಡೋಣ ಘೋಷಣೆಯೊಂದಿಗೆ ಹಾಸನ ಚಲೋ ನಡೆಸುವುದಾಗಿ ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ಮಂಡ್ಯ ಜಿಲ್ಲಾ ಘಟಕದ ಅಧ್ಯಕ್ಷ ಜಿ.ಎಂ.ರಮೇಶ್‌ಗೌಡ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಹಾಯ ಕೋರಿ ಬಂದ ಮಹಿಳೆಯರನ್ನು ಲೈಂಗಿಕವಾಗಿ ಶೋಷಣೆ ಮಾಡಿರುವುದು ವಿಷಾದನೀಯ ವಿಚಾರವಾಗಿದೆ ಎಂದು ಕಿಡಿಕಾರಿದರು.

ರಾಜ್ಯ ಸರ್ಕಾರ ಪೆನ್ ಡ್ರೈವ್ ಪ್ರಕರಣವನ್ನು ಪಾರದರ್ಶಕವಾಗಿ ತನಿಖೆ ನಡೆಸಬೇಕು. ನಿಷ್ಪಕ್ಷಪಾತವಾಗಿ ತನಿಖೆಯಾಗಬೇಕಾದರೆ ಪ್ರಜ್ವಲ್ ರೇವಣ್ಣ ಕುಟುಂಬದ ಕೃಪಾಕಟಾಕ್ಷದಿಂದ ಹಾಸನ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಆ ಕುಟುಂಬದ ರುಣಭಲ್ಲಿದ್ದೇವೆ ಎಂದು ಭಾವಿಸಿರುವ ಅಧಿಕಾರಿಗಳನ್ನು ಈ ಪ್ರಕರಣದಿಂದ ದೂರವಿಡಬೇಕು .ಬೇರೆ ಜಿಲ್ಲೆಗಳಿಗೆ ವರ್ಗಾಯಿಸಬೇಕು ಎಂದು ಒತ್ತಾಯಿಸಿದರು.

ಈ ಘಟನೆಯನ್ನು ಖಂಡಿಸಿ ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷ ಮೇ 13 ರಂದು ಅಬಲೆಯರನ್ನು ಗೌರವಿಸೋಣ ಅತ್ಯಾಚಾರಿಗೆ ತಕ್ಕ ಶಾಸ್ತಿ ಮಾಡೋಣ ಎನ್ನುವ ಘೋಷಣೆಯಡಿ ಹಾಸನ ಚಲೋ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ,ರಾಜ್ಯದ ಜನತೆ ಬೆಂಬಲಿಸಬೇಕೆಂದು ಮನವಿ ಮಾಡಿದರು.

ಗೋಷ್ಠಿಯಲ್ಲಿ ಪಕ್ಷದ ಜಿಲ್ಲಾ ಉಪಾಧ್ಯಕ್ಷ ಮಲ್ಲೇಶ್, ಸಂಘಟನಾ ಕಾರ್ಯದರ್ಶಿಗಳಾದ ಶಶಿಧರ್, ಯೋಗೇಶ್, ರವೀಂದ್ರ, ಜಗದೀಶ್, ವಿಶ್ವನಾಥ್ ಉಪಸ್ಥಿತರಿದ್ದರು.

ತಾಲೂಕು ಆಡಳಿತದಿಂದ ಬಸವ ಜಯಂತಿ ಆಚರಣೆ

ಶ್ರೀರಂಗಪಟ್ಟಣ: ತಾಲೂಕು ಆಡಳಿತದ ವತಿಯಿಂದ ಸಾಂಸ್ಕೃತಿಕ ರಾಯಬಾರಿ ಬಸವಣ್ಣನವರ ಜಯಂತಿಯನ್ನು ತಹಶೀಲ್ದಾರ್ ಕಚೇರಿ ಒಳಾಂಗಣದಲ್ಲಿ ಆಯೋಜಿಸಲಾಯಿತು. ಹೆಚ್ಚುವರಿ ತಹಶೀಲ್ದಾರ್ ಹರ್ಷ ರವರು ಬಸವಣ್ಣ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಬಸವಣ್ಣನವರ ತತ್ವ ಮತ್ತು ಆದರ್ಶಗಳ ಕುರಿತು ಮಾತನಾಡಿದರು. ವೀರಶೈವ ಸಮಾಜದ ಮುಖಂಡರು, ವಿವಿಧ ಕನ್ನಡಪರ ಸಂಘ ಸಂಸ್ಥೆಗಳ ಕಾರ್ಯಕರ್ತರು ಭಾಗವಹಿಸಿ ಬಸವಣ್ಣನಿಗೆ ನಮನ ಸಲ್ಲಿಸಿದರು. ಬಿಇಒ ಆರ್.ಪಿ. ಮಹೇಶ್, ವೀರಶೈವ ಮುಖಂಡರಾದ ಜಗದೀಶ್, ಪ್ರದೀಪ್, ಮಂಬಸವಯ್ಯ, ಸಿ.ಎಸ್.ದೀಪಕ್, ಮಲ್ಲಸ್ವಾಮಿ, ಎಸ್.ಕುಮಾರ್, ಕರವೇ ಶಂಕರ್ ಚಿಂದಗಾಲು, ಪ್ರಿಯಾ ರಮೇಶ್, ಕೆ.ಟಿ.ರಂಗಯ್ಯ, ನಂಜುಂಡ ಮೌರ್ಯ, ಬೆನ್ನೂರ, ಅಪ್ಪಾಜಿ ಇತರರಿದ್ದರು.

ಕರ್ನಾಟಕ ಪೊಲೀಸರ ಮೇಲೆ ನಂಬಿಕೆ ಇಲ್ಲದಿದ್ದರೆ ಹೇಗೆ : ಎಚ್.ವಿಶ್ವನಾಥ್

ಮಂಡ್ಯ: ಹಾಸನದ ಸಂಸದ ಪ್ರಜ್ವಲ್ ರೇವಣ್ಣ ಅಶ್ಲೀಲ ವಿಡಿಯೋ ಪ್ರಕರಣ ಕುರಿತು ತನಿಖೆ ನಡೆಸಲು ರಚಿಸಲಾಗಿರುವ ವಿಶೇಷ ತನಿಖಾ ತಂಡದಲ್ಲಿ ಕರ್ನಾಟಕ ಪೊಲೀಸರು ಇದ್ದಾರೆ, ನಮ್ಮ ರಾಜ್ಯದ ಪೊಲೀಸರ ಮೇಲೆ ನಂಬಿಕೆ ಇಲ್ಲದಿದ್ದರೆ ಹೇಗೆ ಎಂದು ಮಾಜಿ ಸಚಿವ ಎಚ್. ವಿಶ್ವನಾಥ್ ಪ್ರಶ್ನಿಸಿದರು.

ಮಂಡ್ಯದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಪ್ರಕರಣ ಕುರಿತು ಸಿಬಿಐ ತನಿಖೆಗೆ ಒತ್ತಡ ಹಾಕುತ್ತಿರುವುದು ಸರಿಯಲ್ಲ, ವಿಶೇಷ ತನಿಖಾ ತಂಡದಿಂದ ನ್ಯಾಯ ಸಿಗಲಿದೆ ಎಂದು ಹೇಳಿದರು.

ಅಶ್ಲೀಲ ವಿಡಿಯೋ ಪ್ರಕರಣ ವಿಚಾರದಲ್ಲಿ ಎಲ್ಲಾ ರಾಜಕಾರಣಿಗಳು ಸೇರಿ ಕರ್ನಾಟಕ ರಾಜ್ಯದ ಜನತೆಗೆ ಮಸಿ ಬಳಿಯುತ್ತಿದ್ದಾರೆ, ಪ್ರಕರಣ ಬೆಳಕಿಗೆ ಬಂದ ನಂತರ ವಿಶೇಷ ತನಿಖಾ ತಂಡ ರಚನೆ ಮಾಡಲಾಗಿದೆ, ಆದರೂ ಕೂಡ ಸುಖಾ ಸುಮ್ಮನೆ ಎಲ್ಲರೂ ಮಾತನಾಡುತ್ತಿದ್ದಾರೆ, ಇದು ಸರಿಯಲ್ಲ, ಮುಖ್ಯಮಂತ್ರಿ, ಮಾಜಿ ಮುಖ್ಯಮಂತ್ರಿ ಯಾದಿಯಾಗಿ ಎಲ್ಲರೂ ಸಹ ಕರ್ನಾಟಕದ ಜನತೆಗೆ ಮಸಿ ಬಳಿಯುವ ಕೆಲಸ ಮಾಡುತ್ತಿದ್ದಾರೆ ಎಂದು ಹೇಳಿದರು.

ಪ್ರಕರಣದ ವಿಚಾರವಾಗಿ ಜಾತಿ ಮತ್ತು ಧರ್ಮ ಎಳೆದು ತರಲಾಗುತ್ತಿದೆ, ಎಲ್ಲರೂ ನಮ್ಮ ಸ್ನೇಹಿತರೆ. ಆದರೆ ಈ ವಿಚಾರದಲ್ಲಿ ತಪ್ಪು ಮಾಡುತ್ತಿದ್ದಾರೆ ಪ್ರತಿಭಟನೆ, ಪರಸ್ಪರ ಆರೋಪ ಪ್ರತ್ಯಾರೋಪ ಮೂಲಕ ಕೆಸರೆರೆ ಚಾಟಿದಲ್ಲಿ ನಿರತರಾಗಿದ್ದಾರೆ ಎಂದು ತಿಳಿಸಿದರು.

ಮೇ 12, 13ರಂದು ಶ್ರೀ ವೀರಮಾಸ್ತಿ ಕೆಂಪಮ್ಮ ದೇವಿ ದೇವಸ್ಥಾನದ ಉದ್ಘಾಟನೆ



ಭಾರತೀನಗರ: ಇಲ್ಲಿಗೆ ಸಮೀಪದ ಕಾರ್ಕಹಳ್ಳಿ ಶ್ರೀಬಸವೇಶ್ವರಸ್ವಾಮಿ ಪುಣ್ಯ ಕ್ಷೇತ್ರದಲ್ಲಿ ನೂತನವಾಗಿ ನಿರ್ಮಿಸಿರುವ ಶ್ರೀ ವೀರಮಾಸ್ತಿ ಕೆಂಪಮ್ಮ ದೇವರ ದೇವ ಸ್ಥಾನ ಮೇ.12 ಮತ್ತು 13 ರಂದು ಉದ್ಘಾಟನೆಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಶಾಸಕ ಮಧು ಜಿ.ಮಾದೇಗೌಡ ಅವರು ಭೇಟಿ ನೀಡಿ ಪರಿಶೀಲಿಸಿ ಗ್ರಾಮಸ್ಥರೊಂದಿಗೆ ಚರ್ಚೆ ನಡೆಸಿದರು.

ಈ ಸಂದರ್ಭದಲ್ಲಿ ಶಾಸಕ ಮಧು ಜಿ.ಮಾದೇಗೌಡ ಅವರು ಮಾತನಾಡಿ, ನಮ್ಮ ಮನೆದೇವರಾದ ಶ್ರೀವೀರಮಾಸ್ತಿ ಕೆಂಪಮ್ಮ ದೇವಸ್ಥಾನವನ್ನು ಗ್ರಾಮಸ್ಥರೊಂದಿಗೆ ನೂತನವಾಗಿ ನಿರ್ಮಿಸಲಾಗಿದೆ. ಹಾಗಾಗಿ ಮೇ 12ರಂದು ಕಾರ್ಕಹಳ್ಳಿ ಗುರುಮಠದ ಶ್ರೀ ಗುರುಸೋಮರಾಧ್ಯ ರವರ ದಿವ್ಯ ಸಾನ್ನಿಧ್ಯದಲ್ಲಿ ಸಂಜೆ ವಿವಿಧ ಪೂಜಾ ಕೈಂಕರ್ಯಗಳನ್ನು ಹಮ್ಮಿಕೊಳ್ಳಲಾಗಿದೆ. ಮೇ 13 ರಂದು ಬೆಳಿಗ್ಗೆ 5 ರಿಂದ 6 ಗಂಟೆಯ ವರೆಗೆ ಬ್ರಾಹ್ಮಿ ಮುಹೂರ್ತದಲ್ಲಿ ಗದ್ದುಗೆ ಪ್ರತಿಷ್ಠಾಪನೆ, ಪ್ರಧಾನ ಕಳಸಪೂಜೆ, ಹೋಮ ಸೇರಿದಂತೆ ವಿವಿಧ ಪೂಜಾಕೈಂಕರ್ಯಗಳನ್ನು ಹಮ್ಮಿಕೊಂಡಿದೆ. ನಂತರ ಮಧ್ಯಾಹ್ನ 12.30 ಕ್ಕೆ ಸಾವಿರಾರು ಭಕ್ತಾದಿಗಳಿಗೆ ಅನ್ನಸಂತರ್ಪಣೆಯನ್ನು ಏರ್ಪಡಿಲಾಗಿದೆ. ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಮನವಿ ಮಾಡಿದರು.

ಈ ಪೂಜಾ ಕಾರ್ಯಕ್ರಮದಲ್ಲಿ ಕಾರ್ಕಹಳ್ಳಿ ಬಸವಪ್ಪ, ಚಿಕ್ಕರಸಿನಕೆರೆ ಬಸವಪ್ಪ ಹಾಗೂ ತೊರೆಬೊಮ್ಮನಹಳ್ಳಿ ಪಟ್ಟಲದಮ್ಮ ದೇವರುಗಳ ಉತ್ಸವದೊಂದಿಗೆ ಈ ಕಾರ್ಯಕ್ರಮ ಜರುಗಲಿದೆ ಎಂದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಯುವ ಮುಖಂಡ ಆಶಯ್ ಮಧು, ಯಜಮಾನರುಗಳಾದ ನಾಡಗೌಡ ತಮ್ಮಣ್ಣ, ನಟರಾಜು, ಮಧು, ಕಾರ್ಕಹಳ್ಳಿ ಸ್ವರೂಪ್ ಬಸವೇಗೌಡ, ಪ್ರಭು, ಬಸಂತ್, ಪ್ರತಾಪ್, ವಿಕ್ಕಿ, ಸುನೀಲ್, ಸುರೇಶ್, ದೇವೇಗೌಡನ ದೊಡ್ಡಿ ಗ್ರಾಮದ ಯಜಮಾನ್ ಬಸವರಾಜು ಸೇರಿದಂತೆ ಸಾದೋಳಲು ಗ್ರಾಮದ ಮುಖಂಡರು ಉಪಸ್ಥಿತರಿದ್ದರು.

ನಮ್ಮ ಮನೆದೇವರಾದ ಶ್ರೀವೀರಮಾಸ್ತಿ ಕೆಂಪಮ್ಮ ದೇವಸ್ಥಾನ ಉದ್ಘಾಟನೆಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದೇವರ ಕೃಪೆಗೆ ಪಾತ್ರರಾಗಿ ಪೂಜೆಯನ್ನು ಯಶಸ್ವಿಗೊಳಿಸಿ ಎಂದು ಆಶಯ್ ಜಿ.ಮಧು ಮನವಿ ಮಾಡಿದ್ದಾರೆ.

ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣೆಗೆ ಸ್ಪರ್ಧೆ: ಕೆ.ರಾಜು

ಮಂಡ್ಯ: ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣೆಗೆ ಸ್ಪರ್ಧಿಸುವುದಾಗಿ ಅನಿಕೇತನ ಪ್ರೌಢಶಾಲೆಯ ಎನ್‌ಸಿಸಿ ಅಧಿಕಾರಿ ಕೆ.ರಾಜು ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾನು ಭಾರತೀಯ ಜನತಾ ಪಕ್ಷದ ಟಿಕೆಟ್ ಆಕಾಂಕ್ಷಿತನಾಗಿದ್ದು ಟಿಕೆಟ್ ಗಾಗಿ ಮನವಿ ಮಾಡುತ್ತೇನೆ. ಒಂದು ವೇಳೆ ಟಿಕೆಟ್ ಕೊಡದಿದ್ದಲ್ಲಿ ಪಕ್ಷೇತರನಾಗಿ ಸ್ಪರ್ಧಿಸಲಿದ್ದು ಶಿಕ್ಷಕ ಬಂಧುಗಳು ಬೆಂಬಲಿಸುವಂತೆ ಮನವಿ ಮಾಡಿದರು. ಗೋಷ್ಠಿಯಲ್ಲಿ ದೈಹಿಕ ಶಿಕ್ಷಕರ ಸಂಘದ ಸದಸ್ಯ ಶಿವಕುಮಾರ್ ಉಪಸ್ಥಿತರಿದ್ದರು.

ಸರ್ಕಾರ ಆರೋಗ್ಯ, ಶಿಕ್ಷಣ ಕ್ಷೇತ್ರಗಳಿಗೆ ಒತ್ತು ನೀಡಲಿ: ಕೆ.ಟಿ.ಹನುಮಂತು

ಅಂತರಾಷ್ಟ್ರೀಯ ದಾದಿಯರ ದಿನಾಚರಣೆ, ಅಭಿನಂದನೆ



ಮಂಡ್ಯ: ಪ್ರಸ್ತುತ ದಿನಗಳಲ್ಲಾದರೂ ಸರ್ಕಾರಗಳು ಆರೋಗ್ಯ ಮತ್ತು ಶಿಕ್ಷಣ ಕ್ಷೇತ್ರಕ್ಕೆ ಯಾವುದೇ ಕೊರತೆಯಾಗದಂತೆ ಹೆಚ್ಚು ಮಹತ್ವ ನೀಡಲಿ ಎಂದು ಅಲಯನ್ಸ್ ಸಂಸ್ಥೆ ಜಿಲ್ಲಾ ರಾಜ್ಯಪಾಲ ಕೆ.ಟಿ.ಹನುಮಂತು ಹೇಳಿದರು.

ಮದ್ದೂರು ತಾಲೂಕಿನ ಗೆಜ್ಜಲಗೆರೆ ಗ್ರಾಮದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರ ಆವರಣದಲ್ಲಿ ಅಂತರಾಷ್ಟ್ರೀಯ ಅಸೋಷಿಯೇಷನ್ ಆಫ್ ಅಲಯನ್ಸ್ ಸಂಸ್ಥೆ ಜಿಲ್ಲಾ ಶಾಖೆ ಆಯೋಜಿಸಿದ್ದ ಅಂತರಾಷ್ಟ್ರೀಯ ದಾದಿಯರ ದಿನ ಆಚರಣೆ ಮತ್ತು ದಾದಿಯರಿಗೆ ಅಭಿನಂದನೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಮನುಷ್ಯನಿಗೆ ಆರೋಗ್ಯ ಮತ್ತು ಶಿಕ್ಷಣ ಬಹಾಳ ಅತ್ಯವಶ್ಯಕವಾಗಿದೆ. ಆದ್ದರಿಂದ ಸರ್ಕಾರಗಳು

website: www.kayakayogi.com
ಕಾಯಕ ಯೋಗಿ
KAYAKA YOGI - Regional Daily
ಪುಟ-3
12-05-2024
ಮೈಸೂರು

ಕುಡಿಯುವ ನೀರು ಸರಬರಾಜು ಯೋಜನೆಯ ಕಾಮಗಾರಿ ಪರಿಶೀಲನೆ



ಮೈಸೂರು: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿಗಳಾದ ಅಂಜುಂ ಪರ್ವೇಜ್ ಅವರು ಮೈಸೂರು ತಾಲ್ಲೂಕಿನ ಹಳೇ ಉಂಡವಾಡಿ ಗ್ರಾಮದ ಬಳಿ ಪ್ರಗತಿಯಲ್ಲಿರುವ ಕುಡಿಯುವ ನೀರು ಸರಬರಾಜು ಯೋಜನೆಯ ಕಾಮಗಾರಿಯನ್ನು ಇಂದು ಪರಿಶೀಲಿಸಿದರು.

ಹಳೇ ಉಂಡವಾಡಿ ಸಮೀಪ ನಿರ್ಮಿಸುತಿರುವ ಮೂಲಸ್ಥಾವರ, ಮೇಗಳಾಪುರ ಸಮೀಪ ನಿರ್ಮಿಸುತ್ತಿರುವ ಜಲ ಶುದ್ಧೀಕರಣ ಘಟಕ ಮತ್ತು ಕೊಳವೆ ಮಾರ್ಗ ಸ್ಥಳಕ್ಕೆ ಭೇಟಿ ನೀಡಿ ಕಾಮಗಾರಿಗಳನ್ನು ಪರಿಶೀಲಿಸಿ, ಪ್ರಗತಿ ಕುರಿತು ಅಧಿಕಾರಿಗಳೊಡನೆ ಚರ್ಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ.ಎಂ.ಗಾಯಿತ್ರಿ, ಉಪ ಕಾರ್ಯದರ್ಶಿ ಜಗನ್ನಾಥ್ ಮೂರ್ತಿ ಅವರು, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಟಿ.ಪ್ರದೀಪ್, ಗ್ರಾಮೀಣ ಕುಡಿಯುವ ನೀರು ಮತ್ತು ಸರಬರಾಜು ಇಲಾಖೆ ಅಭಿಯಂತರರಾದ ರಂಜಿತ್ ಕುಮಾರ್ ಸೇರಿದಂತೆ ಮುಂತಾದವರು ಹಾಜರಿದ್ದರು.

ಸಾಲಿಗ್ರಾಮದಲ್ಲಿ ಬಸವ ಜಯಂತಿ ಆಚರಣೆ



ಸಾಲಿಗ್ರಾಮ: ಕೆ.ಆರ್.ನಗರ ತಾಲೂಕು ಆರೋಗ್ಯ ಅಧಿಕಾರಿ ನಟರಾಜ್ ಅವರು ಸೇರಿದಂತೆ ಸಿಬ್ಬಂದಿ ಸಮ್ಮುಖದಲ್ಲಿ ಬಸವಣ್ಣ ಜಯಂತಿ ಆಚರಣೆ ಮಾಡಲಾಯಿತು. ನಂತರ ಮಾತನಾಡಿದ ಇವರು

ಬಸವಣ್ಣ ಅವರು ಶೈವ ಧರ್ಮದ ಭಕ್ತಿ ಚಳವಳಿಯಲ್ಲಿ ಪ್ರಸಿದ್ಧ ಸಂತರಾಗಿ ಗುರುತಿಸಿಕೊಂಡಿದ್ದವರು. ಹನ್ನೆರಡನೇ ಶತಮಾನದಲ್ಲಿ ಬಸವಣ್ಣನವರು ಮೇಲು ಕೀಳು, ಜಾತಿ ಧರ್ಮ ಹೀಗೆ ನೊಂದವರ ಪರವಾಗಿ ನಿಂತ ಮಹಾನುಭಾವ. ಜಾತಿ ವ್ಯವಸ್ಥೆಯ ವಿರುದ್ಧ ಧ್ವನಿ ಎತ್ತಿದ್ದ ಬಸವಣ್ಣನವರು ಕ್ರಾಂತಿಯ ಬೀಜವನ್ನು ಬಿತ್ತಿದ ಹರಿಕಾರ. 'ಕಾಯಕವೇ ಕೈಲಾಸ', 'ವಸುದೈವ ಕುಟುಂಬಕಂ' ಹೀಗೆ ಹಲವಾರು ತತ್ವಗಳನ್ನು ಸಾರಿದ ಮಹಾನ್ ಭಾವನನ್ನು ಇಂದು ನೆನಪಿಸಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಬಸವ ಜಯಂತಿಯನ್ನು ವೈಶಾಖ ಮಾಸದ ಶುಕ್ಲ ಪಕ್ಷದ ಮೂರನೇ ದಿನದಂದು ಆಚರಿಸಲಾಗುತ್ತದೆ. ಸಮಾಜಕ್ಕೆ ಸಂದೇಶವನ್ನು ಸಾರಿದ ಬಸವೇಶ್ವರರ ಜನ್ಮ ವಾರ್ಷಿಕೋತ್ಸವವಾಗಿದೆ ಎಂದರು.

ಮೇ 14ರಂದು ಭಗೀರಥ ಮಹರ್ಷಿ ಜಯಂತಿ

ಚಾಮರಾಜನಗರ: ಜಿಲ್ಲಾಡಳಿತ, ಜಿಲ್ಲಾ ಪಂಚಾ ಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿ ಯಿಂದ ಭಗೀರಥ ಮಹರ್ಷಿ ಅವರ ಜಯಂತಿಯನ್ನು ಮೇ 14ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣ ಕೊಠಡಿ ಸಂಖ್ಯೆ 103 ರಲ್ಲಿ ಸರಳ ಹಾಗೂ ಸಾಂಕೇತಿಕವಾಗಿ ಆಚರಿಸಲಾಗುತ್ತದೆ.

ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವುದ ರಿಂದ ಭಗೀರಥ ಮಹರ್ಷಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮೂಲಕ ಜಯಂತಿಯನ್ನು ಸರಳವಾಗಿ ಆಚರಿಸಲಾಗುತ್ತಿದೆ ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ತಿಳಿದ್ದಾರೆ.

ರಸ್ತೆ ಕಾಮಗಾರಿ ಶೀಘ್ರ ಪೂರ್ಣಗೊಳಿಸಲು ಶಾಸಕ ಸೂಚನೆ



ಹನೂರು: ಪಟ್ಟಣದಲ್ಲಿ ತಾತ್ಕಾಲಿಕವಾಗಿ ಸ್ಥಗಿತವಾಗಿರುವ ರಸ್ತೆ ಕಾಮಗಾರಿಯನ್ನು ಶೀಘ್ರವೇ ಪೂರ್ಣಗೊಳಿಸಿ ಸಂಚಾರಕ್ಕೆ ಮುಕ್ತಗೊಳಿಸುವಂತೆ ಶಾಸಕ ಎಂ.ಆರ್. ಮಂಜುನಾಥ್ ಕೆಶಿಪ್ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು.

ಪಟ್ಟಣದ ಮುಖ್ಯ ರಸ್ತೆ ಭರದಿಂದ ಸಾಗಿದ ರಸ್ತೆ ಕಾಮಗಾರಿ ಪಟ್ಟಣದ ನಡುವೆ ಹಾದು ಹೋಗುವ ಮುಖ್ಯ ರಸ್ತೆ ಹೆದ್ದಾರಿ ಕಾಮಗಾರಿ ಪೂರ್ಣಗೊಳಿಸುವಂತೆ ತಿಳಿಸಿದರು.

ಹನೂರು ಪಟ್ಟಣದಿಂದ ಕೊಳ್ಳೇಗಾಲದ ವರೆಗೆ ಕೆಶಿಪ್ ಯೋಜನೆಯಲ್ಲಿ ಸುಮಾರು 108 ಕೋಟಿ ವೆಚ್ಚದಲ್ಲಿ ಕಳೆದ ಎಂಟು ವರ್ಷಗಳ ಹಿಂದೆ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಒತ್ತು ನೀಡಲಾಗಿತ್ತು ಆದರೆ ಹನೂರು ಪಟ್ಟಣದ ಕೇಂದ್ರಸ್ಥಾನದಲ್ಲಿ ನಾನಾ ಕಾರಣಗಳಿಂದ ರಸ್ತೆ ಅಭಿವೃದ್ಧಿ ಕಾಮಗಾರಿ ಕುಂಟುತ್ತಾ ಸಾಗಿದೆ. ಇದ್ದರಿಂದ ಮಹದೇಶ್ವರಬೆಟ್ಟಕ್ಕೆ ಹಾಗೂ ನೆರೆಯ ರಾಜ್ಯ ತಮಿಳುನಾಡಿಗೆ ಪ್ರತಿನಿತ್ಯ ತೆರಳುವ ಅಪಾರ ಸಂಖ್ಯೆ ಜನತೆಗೆ ಈ ಮಾರ್ಗದಲ್ಲಿ ವಾಹನ-ಜನ ಸಂಚಾರವು ಈಗ ತೀವ್ರ ಅಪಾಯಕಾರಿಯಾಗಿದೆ. ಆದ್ದರಿಂದ ಎಲ್ಲಾ ಅಂಗಡಿ ಮಾಲೀಕರು ರಸ್ತೆ ಅಗಲೀಕರಣಕ್ಕೆ ಸಹಕರಿಸಿ ಎಂದು ಶಾಸಕರು ಹೇಳಿದರು.

ಪಟ್ಟಣದ ಮುಖ್ಯ ರಸ್ತೆ ಕಾಮಗಾರಿ ನಡೆಯುತ್ತಿದ್ದು ರಸ್ತೆ ಬದಿ ಅಂಗಡಿ ಮಾಲೀಕರು ಗಳಿಗೂ ಕೂಡ ಅಧಿಕಾರಿಗಳಿಗೆ ಉಳಿದಿರುವ ಅಬಿವೃದ್ಧಿ ಕಾಮಗಾರಿ ಪೂರ್ಣಗೊಳಿಸಲು ಸಹಕರ ನೀಡಿ ಪಟ್ಟಣದ ಅಭಿವೃದ್ಧಿಗೆ ಸಹಕರಿಸಿ ಎಂದು ಹೇಳಿದ್ದರು .ಉಳಿದಿರುವ ರಸ್ತೆ ಕಾಮಗಾರಿ ಪೂರ್ಣಗೊಳಿಸಲು ಸೂಕ್ತ ಕ್ರಮಕ್ಕೆಗೊಳ್ಳುವಂತೆ ತಿಳಿಸಿದರು.

ಕೆಸಿಎಫ್ ರಸ್ತೆ ಕಾಮಗಾರಿ ಪ್ರಾಜೆಕ್ಟ್ ಮ್ಯಾನೇಜರ್ ಮುತ್ತಣ್ಣ, ಮಹಾಂತೇಶ್, ಜೆಡಿಎಸ್ ಪಟ್ಟಣ ಪಂಚಾಯಿತಿ ಸದಸ್ಯರಾದ ಆನಂದ್ ಕುಮಾರ್, ಹಾಗೂ ಮುಖಂಡ ರಾದ ಮಂಜೇಶ್ ಗೌಡ, ಗಿರೀಶ್, ಗೋಪಾಲ್ ನಾಯಕ, ಜಯರಾಮು, ಮಹದೇವ್, ಎಸ್.ಆರ್.ಮಹಾದೇವ್, ವೆಂಕಟೇಶ್, ಅಮೀನ್, ವೆಂಕಟೇಶ್ ಇನ್ನಿತರರಿದ್ದರು.

ವಿಜೃಂಭಣೆಯ ಶ್ರೀ ಕಾಳಮ್ಮ ದೇವಿ ರಥೋತ್ಸವ



ಸಾಲಿಗ್ರಾಮ: ತಾಲ್ಲೂಕಿನ ಕಾಳಮ್ಮನ ಕೊಪ್ಪಲು ಗ್ರಾಮದ ಗ್ರಾಮದೇವತೆ ಶ್ರೀ ಕಾಳಮ್ಮ ತಾಯಿ ದೇವರ ರಥೋತ್ಸವ ಹಾಗೂ ಜಾತ್ರಾ ಮಹೋತ್ಸವವು ನೂರಾರು ಭಕ್ತರ ನಡುವೆ ಧಾರ್ಮಿಕ ವಿಧಿ ವಿಧಾನಗಳೊಂದಿಗೆ ಅತ್ಯಂತ ವಿಜೃಂಭಣೆಯಿಂದ ನಡೆಯಿತು.

ದೇವಾಲಯದಲ್ಲಿ ದೇವರಿಗೆ ವಿವಿಧ ಅಭಿಷೇಕಗಳು, ಆರತಿ ಮಾಡಿ ವಿಶೇಷ ಪೂಜೆಯನ್ನು ಸಲ್ಲಿಸಿ ಮಹಾ ಮಂಗಳಾರತಿ ಮಾಡಿ ನಂತರ ಸಾರ್ವಜನಿ ಕರಿಗೆ ಪ್ರಸಾದ ವಿನಿಯೋಗ ಮಾಡಲಾಯಿತು. ರಥೋತ್ಸವದಲ್ಲಿ ಭಾಗವಹಿಸಿದ್ದ ಭಕ್ತರುಗಳು ರಥಕ್ಕೆ ಹಣ್ಣು ಜವನಗಳನ್ನು ಎಸೆದು ತಮ್ಮ ಇಷ್ಟಾರ್ಥ ಸಿದ್ಧಿಗಾಗಿ ಪ್ರಾರ್ಥಿಸಿದರು.

ಶ್ರೀ ಕಾಳಿಕಾಂಭ ರಥೋತ್ಸವಕ್ಕೆ ಮೊದಲು ದೇವರ ಮೂರ್ತಿಯನ್ನು ಅಡ್ಡ ಪಲ್ಲಕ್ಕಿಯಲ್ಲಿ ಪ್ರತಿಷ್ಠಾಪಿಸಿ ಹೆಣ್ಣುಮಕ್ಕಳು ಪೂರ್ಣ ಕುಂಭ ಕಳಸ ಹೊತ್ತು ವಿವಿಧ ಕಲಾ ತಂಡಗಳು ಹಾಗೂ ಮಂಗಳ ವಾದ್ಯ ಗಳೊಂದಿಗೆ ಗ್ರಾಮದ ಮುಖ್ಯ ರಸ್ತೆಯಲ್ಲಿ ಮೆರವಣಿಗೆ ಮಾಡಲಾಯಿತು.

ರಥೋತ್ಸವದಲ್ಲಿ ವಿವಿಧ ಭಾಗಗಳಿಂದ ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಪಾಲ್ಗೊಂಡಿದ್ದರು. ಜಾತ್ರೆಯಲ್ಲಿ ಸಿಹಿತಿಂಡಿ, ಬಳೆ, ತಂಪು ಪಾನೀಯ, ಆಟಿಕೆ ಸಾಮಾನು, ಮನೆ ಬಳಕೆಯ ವಸ್ತುಗಳು ಸೇರಿದಂತೆ ಹಲವು ಮಾದರಿಯ ಅಂಗಡಿಗಳು ತಲೆ ಎತ್ತಿದ್ದವು.

ಸಾಲಿಗ್ರಾಮ ಪೊಲೀಸ್ ಠಾಣೆಯ ಸಿಬ್ಬಂದಿಗಳು ಮುಂಜಾಗ್ರತ ಕ್ರಮವಾಗಿ ಬಂದು ಬಸ್ತ್ ಮಾಡಿದ್ದರು.

ರಥೋತ್ಸವದಲ್ಲಿ ಶಾಸಕ ಡಿ.ರವಿ ಶಂಕರ್, ಜನಪ್ರತಿನಿಧಿಗಳು, ವಿವಿಧ ರಾಜ ಕೀಯ ಪಕ್ಷಗಳ ಮುಖಂಡರು, ಯಜ ಮಾನರುಗಳು, ಮಹಿಳೆಯರು, ಯುವಕರು, ಮಕ್ಕಳು ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

ಮಲೆ ಮಹದೇಶ್ವರ ಅಭಿವೃದ್ಧಿ ಪ್ರಾಧಿಕಾರದ ನೌಕರ ಪುಟ್ಟಪ್ಪಗೆ ಬೀಳ್ಕೊಡುಗೆ



ಹನೂರು: ತಾಲೂಕಿನ ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟದಲ್ಲಿ ಸುಮಾರು 34 ವರ್ಷಗಳ ಕಾಲ ಸೇವೆ ಸಲ್ಲಿಸಿ ನಿವೃತ್ತಿಯಾದ ಕೆ.ವಿ.ಪುಟ್ಟಪ್ಪರವರಿಗೆ ಶ್ರೀ ಮಲೆ ಮಹದೇಶ್ವರ ಅಭಿವೃದ್ಧಿ ಪ್ರಾಧಿಕಾರ ನೌಕರರ ಸಂಘದ ವತಿಯಿಂದ ಸನ್ಮಾನಿಸಿ ಬೀಳ್ಕೊಡಲಾಯಿತು.

ಈ ಸಂದರ್ಭದಲ್ಲಿ ಗೌರವ ಅಧ್ಯಕ್ಷ ಕೆ.ಮಹದೇವ ಸ್ವಾಮಿ, ಅಧ್ಯಕ್ಷ ಮಹದೇವ ಪ್ರಸಾದ್, ಉಪಾಧ್ಯಕ್ಷ ಪಿ. ಮಹದೇವಸ್ವಾಮಿ, ಪದಾಧಿಕಾರಿಗಳಾದ ಮಲ್ಲಿಕಾರ್ಜುನ್, ಪ್ರಾಧಿಕಾರ ಲೆಕ್ಕಪರೀಶೋಧಕ ನಾಗೇಶ್ ಸೇರಿದಂತೆ ಇನ್ನಿತರರು ಹಾಜರಿದ್ದರು.

ಚಾಮರಾಜೇಶ್ವರಿ ಅಕ್ಕನ ಬಳಗದಿಂದ ಅಕ್ಕ ಮಹದೇವಿ ಜಯಂತಿ ಆಚರಣೆ

ಕಾಯಕ ಜೀವಿ ನೀಲಮ್ಮ ಅವರಿಗೆ ಸನ್ಮಾನ



ಕಾಯಕಯೋಗಿ ನ್ಯೂಸ್

ಮೈಸೂರು: ಮೈಸೂರಿನಲ್ಲಿ ಸಂಘ ಟನೆಗೊಂಡಿರುವ ಚಾಮರಾಜೇಶ್ವರಿ ಅಕ್ಕನ ಬಳಗದಿಂದ ಅಕ್ಕಮಹಾದೇವಿ ಜಯಂತಿ ಅಂಗವಾಗಿ ರುದ್ರಭೂಮಿ ಕಾಯಕ ಜೀವಿ ನೀಲಮ್ಮ ಅವರ ಸೇವೆಯನ್ನು ಗುರುತಿಸಿ ಸನ್ಮಾನಿಸಲಾಯಿತು.

ಮೈಸೂರಿನ ಕುವೆಂಪು ನಗರದ ಜೆಎಸ್ಎಸ್ ಕಾನೂನು ಕಾಲೇಜು ಸಭಾಂ ಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಬಳಗದ ಅಧ್ಯಕ್ಷೆ ಮಾದಲಾಂಬಿಕಾ ಹಾಗು ಪದಾಧಿಕಾರಿಗಳು ನೀಲಮ್ಮ ಅವರನ್ನು ಶಾಲು ಹೊದಿಸಿ, ನೆನಪಿನ ಕಾಣಿಕೆ ನೀಡಿ, ಸನ್ಮಾನಿಸುವ ಮೂಲಕ ಅವರ ಸೇವೆಯನ್ನು ಗುಣಗಾನ ಮಾಡಿದರು.

ಅಕ್ಕಮಹದೇವಿ ಸಂಶೋಧನಾ ಮತ್ತು ವಿಸ್ತರಣಾ ಪೀಠದ ನಿರ್ದೇಶಕಿ ಪ್ರೊ. ಕವಿತಾ ರೈ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತ ನಾಡಿ, 12ನೇ ಶತಮಾನದಲ್ಲಿ ಶರಣ ಅಕ್ಕ ಮಹದೇವಿ ಅವರು ರಚಿಸಿ ಮಾಡಿದ ವಚನಗಳು ಹಾಗೂ ಅವರಿದ್ದ ಸಮಾನತೆ ಮತ್ತು ಸ್ತ್ರಿ ಸ್ವಾತಂತ್ರ್ಯ ಬಗ್ಗೆ ಅವರಲ್ಲಿದ್ದ ಸಂವೇದನೆಗಳನ್ನು ತಿಳಿಸಿದರು.

ಪ್ರಪಂಚದಲ್ಲಿರುವುದು ಎರಡನೇ ಜಾತಿ ಒಂದು ಹೆಣ್ಣು ಮತ್ತೊಂದು ಗಂಡು ಜಾತಿ. ಇಬ್ಬರು ಸಮಾನರು, ಇಲ್ಲಿ ಯಾರು ಮೇಲು ಅಲ್ಲ, ಕೀಳು ಅಲ್ಲ. ಸಮ ಸಮಾಜ ವನ್ನು ನಿರ್ಮಾಣ ಮಾಡಲು ಶ್ರಮಿಸಿದ ವರು ಅಕ್ಕ ಮಹದೇವಿ. ಅನುಭವ ಮಂಟಪದಲ್ಲಿ ವಚನಗಳನ್ನು ರಚಿಸಿ ಮಾಡಿ, ಜನರಲ್ಲಿ ಜಾಗೃತಿ ಮೂಡಿಸುವ ಜೊತೆಗೆ ಪ್ರಥಮ ಮಹಿಳಾ ಹೋರಾಟಗಾರರು ಎಂಬ ಕೀರ್ತಿಗೆ ಅಕ್ಕಮಹದೇವಿ ಅವರು ಭಾಜನರಾಗಿದ್ದರು. ಅವರ ತ್ಯಾಗ ಮತ್ತು ಸ್ವಾಭಿಮಾನದ ಬದುಕು ನಮಗೆ ಮಾದರಿ ಯಾಗಬೇಕು ಎಂದು ತಿಳಿಸಿದರು.

ಬಳಗದ ಅಧ್ಯಕ್ಷೆ ಮಾದಲಾಂಬಿಕೆ ನಂಜುಂಡಸ್ವಾಮಿ ಅಧ್ಯಕ್ಷತೆ ವಹಿಸಿ ಮಾತ ನಾಡಿ, ಚಾಮರಾಜನಗರ ಪ್ರದೇಶದಿಂದ ಮೈಸೂರಿನಲ್ಲಿ ನೆಲೆಸಿರುವ ನಾವೆಲ್ಲರು ಒಟ್ಟಾಗಿ ಚಾಮರಾಜೇಶ್ವರಿ ಅಕ್ಕನ ಬಳಗ ವನ್ನು ರಚನೆ ಮಾಡಿಕೊಂಡು ಸಂಘಟನೆ ಮಾಡುವ ಜೊತೆಗೆ ಅಕ್ಕಮಹದೇವಿ ಸೇರಿ ದಂತೆ ಶರಣ ಪರಂಪರೆಯನ್ನು ಪ್ರಚುರ ಪಡಿಸುವ ಜೊತೆಗೆ ಸಮಾಜವನ್ನು ಸಂಘ ಟನೆ ಮಾಡುವ ಉದ್ದೇಶವನ್ನು ಹೊಂದಿದೆ. ಈ ನಿಟ್ಟಿನಲ್ಲಿ ಅಕ್ಕಮಹದೇವಿ ಜಯಂತಿ ಕಾರ್ಯಕ್ರಮದಲ್ಲಿ ರುದ್ರಭೂಮಿಯಲ್ಲಿ ಶವ ಸಂಸ್ಕಾರ ಮಾಡುವ ಕಾಯಕದಲ್ಲಿ ತೊಡ ಗಿಸಿಕೊಂಡು ಬದುಕು ಕಟ್ಟಿಕೊಂಡಿರುವ ನೀಲಮ್ಮ ಅವರ ಸಾಧನೆಯನ್ನು ಗಮನಿಸಿ, ಅವರನ್ನು ಸನ್ಮಾನಿಸುವ ಉತ್ತಮ ಕಾರ್ಯ ವನ್ನು ಬಳಗ ಮಾಡುತ್ತಿದೆ. ಮುಂದಿನ ದಿನಗಳಲ್ಲಿ ಇನ್ನು ಹೆಚ್ಚಿನ ಕಾರ್ಯಕ್ರಮ ಆಯೋಜನೆ ಮಾಡಿ, ಅಕ್ಕ ಮಹದೇವಿ ಅವರ ಚಿಂತನೆಯನ್ನು ಪ್ರತಿಯೊಬ್ಬರು ರೂಢಿಸಿಕೊಳ್ಳೋಣ ಎಂದರು.

ಕಾರ್ಯಕ್ರಮದಲ್ಲಿ ಕದಳಿ ಮಹಿಳಾ ಬಳಗದ ಅಧ್ಯಕ್ಷೆ ಶಾರದಾ ಶಿವಲಿಂಗಸ್ವಾಮಿ, ಬಸವ ಬಳಗದ ಒಕ್ಕೂಟದ ಅಧ್ಯಕ್ಷ ಎಂ. ಪ್ರದೀಪ್‌ಕುಮಾರ್, ಬಳಗದ ಉಪಾಧ್ಯಕ್ಷೆ ಮಂಜುಳಾ ನಂಜುಂಡಸ್ವಾಮಿ, ಕಾರ್ಯ ದರ್ಶಿ ಪ್ರತಿಮಾ ಮಂಜುನಾಥ್, ಹಿರಿಯ ಸಲಹೆಗಾರರಾದ ಮಂಗಳ ಮುದ್ದ ಮಾದಪ್ಪ, ವಿಜಯ ಚಿನ್ನಸ್ವಾಮಿ, ಇಂದಿರಾ ಪರಶಿವಯ್ಯ ಇತರರು ಉಪಸ್ಥಿತರಿದ್ದರು.

ನಂಜನಗೂಡು: ಬಸವ, ಹೇಮರೆಡ್ಡಿ ಮಲ್ಲಮ್ಮ ಜಯಂತಿ



ಕಾಯಕಯೋಗಿ ನ್ಯೂಸ್

ನಂಜನಗೂಡು: ಯುವ ಪೀಳಿಗೆ ಸಾಮಾಜಿಕ ಹರಿಕಾರ ಬಸವಣ್ಣನವರ ತತ್ವ ಆದರ್ಶಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ತಹಶೀಲ್ದಾರ್ ಶಿವಕುಮಾರ್ ಕಾಸ್ನೂರು ಹೇಳಿದರು.

ನಂಜನಗೂಡು ನಗರದ ತಾಲ್ಲೂಕು ಆಡಳಿತ ಭವನದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯ ವತಿಯಿಂದ ವಿಶ್ವ ಗುರು ಬಸವಣ್ಣ ಹಾಗೂ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಕಾರ್ಯ ಕ್ರಮವನ್ನು ತಹಶೀಲ್ದಾರ್ ಶಿವಕುಮಾರ್ ಕಾಸ್ನೂರು ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಉದ್ಘಾಟನೆ ಮಾಡಿದರು.

ಬಳಿಕ ಮಾತನಾಡಿದ ಅವರು, ನೀತಿ ಸಂಹಿತೆ ಜಾರಿಯಲ್ಲಿ ಇರುವುದರಿಂದ ಜಯಂತಿಗಳನ್ನು ಸರಳವಾಗಿ ಆಚರಣೆ ಮಾಡಲಾಗುತ್ತಿದೆ. ಬಸವಣ್ಣನವರ ಕೊಡುಗೆ ಯುವ ಪೀಳಿಗೆಗೆ ಅಮೂಲ್ಯವಾಗಿದೆ. ವಚನ ಸಾಹಿತಿಯ ಮೂಲಕ ಕ್ರಾಂತಿ ಯನ್ನು ನಡೆಸಿ ಸಮಾನತೆಗಾಗಿ ಬಸವಣ್ಣ ನವರು ಹೋರಾಟವನ್ನು ಮಾಡಿದ್ದರು. ಅವರ ವಚನಗಳನ್ನು ಪ್ರತಿಯೊಬ್ಬರು ಅಳ ವಡಿಸಿಕೊಳ್ಳಬೇಕು. ಕಾಯಕವೇ ಕೈಲಾಸ ವೆಂಬ ಅವರ ವಚನದಂತೆ ಪ್ರತಿಯೊಬ್ಬರು ತಮ್ಮ ಕೆಲಸಗಳನ್ನು ಗೌರವಿಸಿ ಸಮಾಜದಲ್ಲಿ ಸಹಬಾಳ್ವೆಯಿಂದ ಜೀವನ ನಡೆಸ ಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ನಗರಸಭಾ ಆಯುಕ್ತ ನಂಜುಂಡಸ್ವಾಮಿ ಸೇರಿದಂತೆ ತಾಲ್ಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

ಗುರುಲಿಂಗ ಜಂಗಮ ಮಠದಲ್ಲಿ ಬಸವ ಜಯಂತಿ



ಕಾಯಕಯೋಗಿ ನ್ಯೂಸ್

ಹುಣಸೂರು: ತಾಲೂಕಿನ ಗಾವಡಗೆರೆಯ ಗುರುಲಿಂಗ ಜಂಗಮ ಮಠದಲ್ಲಿ ಬಸವ ಜಯಂತಿಯ ಆಚರಿಸಲಾಯಿತು.

ಮಠದ ಪೀಠಾಧ್ಯಕ್ಷರಾದ ನಟರಾಜ ಸ್ವಾಮೀಜಿ ಬಸವಣ್ಣನವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿ, ಮಹಾ ಮಾನವತಾವಾದಿ ಸಮಗ್ರ ಕ್ರಾಂತಿಯ ಮೂಲಪುರುಷ ಸರ್ವ ಸಮಾನತೆಯ ಹರಿ ಕಾರ ಅಂತ ಪುಣ್ಯಪುರುಷರ ಜಯಂತೋ ತ್ಸವ ಆಚರಿಸುತ್ತಿರುವುದು ನಮ್ಮಗಳೆಲ್ಲರ ಪುಣ್ಯವೇ ಸರಿ. ಅವರ ಆದರ್ಶ ಗುಣಗಳು ಸರ್ವಕಾಲಿಕ ಸತ್ಯವನ್ನು ಸಾರುತ್ತವೆ. ಅವರ ವಿಚಾರಧಾರೆಗಳು ವಿಶ್ವಮಾನ್ಯವಾಗಿವೆ. ಕಳಬೇಡ ಕೊಲಬೇಡ ಹುಸಿಯ ನುಡಿ ಯಲು ಬೇಡ ಮುನಿಯಬೇಡ ತನ್ನ ಬಣ್ಣಿಸಬೇಡ ಇದ್ದಿರಾ ಅಳಿಯಲು ಬೇಡ ಇದೆ ಅಂತರಂಗ ಶುದ್ಧಿ ಇದೆ ಬಹಿರಂಗ ಶುದ್ಧಿ ಇದೇ ನಮ್ಮ ಕೂಡಲ ಸಂಗಮ ದೇವ ಒಲಿಸುವ ಪರಿ ಈ ಮಾತು ದೇಶ ಭಾಷೆ ಜನ ಎಲ್ಲರಿಗೂ ಬೇಕಾಗಿರುವಂತ ವಿಚಾರ. ಇದು ಯಾರು ಬೇಡ ಅಂತಾರೆ ಹಾಗಾಗಿ ಬಸವಣ್ಣನವರು ವಿಶ್ವದ ಮಹಾ ಬೆಳಗು ಎಲ್ಲರ ಭವ್ಯತೆಯನ್ನು ಮೇಳೈಸುವ ಮಹಾ ಸಂದೇಶ ಇದು ಸರ್ವಕಾಲಿಕ ಸತ್ಯವನ್ನು ಸಾರುತ್ತದೆ ಎಂದರು.

ಇಂತಹ ವಿಚಾರಗಳನ್ನ ನಮ್ಮ ಬದುಕಿ ನಲ್ಲಿ ಅಳವಡಿಸಿಕೊಂಡರೆ ಎಲ್ಲಾ ಸಮಸ್ಯೆ ಗಳಿಗೂ ಪರಿಹಾರವನ್ನು ಒದಗಿಸುವ ಮಹಾ ಶಾಸ್ತ್ರ ಈ ವಚನ ಶಾಸ್ತ್ರದಲ್ಲಿದೆ. ಅಂತಹ ವಚನ ಶಾಸ್ತ್ರ 12ನೇ ಶತಮಾನದ ಸಾಮಾನ್ಯರಿಂದ ಅಸಮಾನ್ಯರವರೆಗೆ ಅಕ್ಷರ ದಿಂದ ನಿರಕ್ಷರ, ಪಕ್ಷಿಗಳಿಗೂ ಅರ್ಥವಾ ಗುವ ರೀತಿಯಲ್ಲಿ ಜೀವನದ ಮೌಲ್ಯಗ ಳನ್ನು ಕೊಟ್ಟು ಹೋಗಿದ್ದಾರೆ ಎಂದರು.

ಬಸವಣ್ಣನವರ ವರ್ಣ ಪದ್ಧತಿ, ಜಾತಿ ತಾರತಮ್ಯ ಮತ್ತು ಮೂಢನಂಬಿಕೆ ವಿರುದ್ಧ ಜನರಲ್ಲಿ ಜಾಗೃತಿ ಮೂಡಿಸಿದರು. ಕಾಯ ಕವೇ ಕೈಲಾಸವೆಂದು ಸಾರಿ ಜನರನ್ನು ದುಡಿಯ ಬದುಕುವ ಪಥದಲ್ಲಿ ಮುನ್ನಡೆಸಿ ದರು. ಅವರ ಆದರ್ಶ ತತ್ವಗಳನ್ನು ಅಳ ವಡಿಸಿಕೊಂಡು ಪ್ರಸ್ತುತ ದಿನಮಾನಗಳಲ್ಲಿ ಬಳ್ಳಿಯ ಮಳೆ ಬೆಳೆ ಚೆನ್ನಾಗಿ ಆಗಿ ಜನರು ಸುಭ

website: www.kayakayogi.com

ಕಾಯಕ ಯೋಗಿ


KAYAKA YOGI - Regional Daily

ಪುಟ–4 | 12–05–2024

ತುಮಕೂರು– ಚಾಮರಾಜನಗರ

ಗುತ್ತಿಗೆದಾರ ದಕ್ಷರಿ ನಿಧನ

ಚಾಮರಾಜನಗರ: ತಾಲ್ಲೂಕಿನ ವೆಂಕಟಯ್ಯನಛತ್ರ ಹೊಸೂರು ಗ್ರಾಮದ ನಿವಾಸಿ, ವಿದ್ಯುತ್ ಗುತ್ತಿಗೆ ದಾರರಾದ ಎಚ್.ಎಂ.ದಕ್ಷರಿ (75) ಶನಿವಾರ ಹೃದಯಾ ಘಾತದಿಂದ ನಿಧನರಾದರು. ಮೃತರು ಪತ್ನಿ ಯೋಗೇಶ್ವರಿ. ಪುತ್ರ ಉದ್ಯಮಿ ಎಚ್.ಡಿ. ಪ್ರತಾಪ್, ಸೊಸೆ ಜಿಪಂ ಮಾಜಿ ಅಧ್ಯಕ್ಷೆ ನಾಗತ್ರಿ ಪ್ರತಾಪ್, ಪುತ್ರಿ ಕುಮಾರಿ, ಅಳಿಯ ಆರ್‌ಟಿಒ ಅಧಿಕಾರಿ ಯೋಗೇಶ್ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಪಾರ್ಥಿವ ಶರೀರವನ್ನು ಪಿ.ಸಿ.ಹೊಸೂರು ಗ್ರಾಮದ ತೋಟದಲ್ಲಿ ಇರಿಸಿ ಅಂತಿಮ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿತ್ತು.





ಗುಂಡ್ಲುಪೇಟೆ ತಾಲ್ಲೂಕಿನ ಉಕ್ಕೂರು ಗ್ರಾಮದ ಅಂಬೇಡ್ಕರ್ ಹೆಬ್ಬಾಗಿಲು ಬಳಿ ಯುವಕರಿಂದ ಬಸವ ಜಯಂತಿ ಆಚರಣೆ ಮಾಡಲಾಯಿತು. ಬಸವ ಜಯಂತಿ ಆಚರಣೆ ಕಾರ್ಯಕ್ರಮದ ಪ್ರಯುಕ್ತ ವಿದ್ಯಾರ್ಥಿಗಳಿಗೆ ನೋಟ್ ಬುಕ್ ಪೆನ್ನು ಕೊಟ್ಟು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ನಾಗೇಶ್ ಚಿಜುಲ, ಲಕ್ಕೂರು ಗಿರೀಶ್, ಬಸವರಾಜು (ಬುಲೆಟ್), ಪಿ.ವೆಂಕಟೇಶ್, ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ರಾಜು, ಮಹದೇವಸ್ವಾಮಿ, ಪಿ.ಮಹೇಶ್, ಚಿನ್ನಸ್ವಾಮಿ, ಬಂಕಯ್ಯ, ಅಂಬೇಡ್ಕರ್ ಯುವಕ ಸಂಘದ ಪದಾಧಿಕಾರಿಗಳು, ಮಹಿಳಾ ಸದಸ್ಯರು, ಗ್ರಾಮಸ್ಥರು ಉಪಸ್ಥಿತರಿದ್ದರು.

ಚಾಮರಾಜನಗರ: ಮಧ್ಯಾಹ್ನವೇ ಧಾರಕಾರ ಮಳೆ



ಕಾಯಕಯೋಗಿ ನ್ಯೂಸ್

ಚಾಮರಾಜನಗರ: ನಗರ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ಶನಿವಾರ ಮಧ್ಯಾಹ್ನ ಧಾರಾಕಾರ ಮಳೆ ಸುರಿಯಿತು.

ಶನಿವಾರ ಮಧ್ಯಾಹ್ನ 12.30ರಲ್ಲಿ ಪ್ರಾರಂಭವಾದ ಮಳೆ ಒಂದು ಗಂಟೆಗೂ ಹೆಚ್ಚು ಕಾಲ ಸುರಿಯಿತು. ಗುಡುಗು, ಸಿಡಿಲಿನೊಂದಿಗೆ ಆರಂಭವಾದ ಮಳೆರಾಯ ಬಿಸಿಲಿನ ತಾಪಕ್ಕೆ ನಲುಗಿ ಹೋಗಿದ್ದ ಭೂಮಿಗೆ ತಂಪೆರೆದನು. ದಿಢೀರನೆ ಬಂದ ಮಳೆಯಿಂದ ರಕ್ಷಣೆ ಪಡೆಯಲು ಜನರು ಅಂಗಡಿ, ಮುಂಗಟ್ಟುಗಳ ಮೊರೆ ಹೋದರು. ತಾಲೂಕಿನ ಹರದನಹಳ್ಳಿ, ಪಿ.ಸಿ.ಹೊಸೂರು, ಕೋಡಿಮೋಳೆ, ದೊಡ್ಡಮೋಳೆ ಸೇರಿದಂತೆ ಇತರೆ ಹಲವು ಗ್ರಾಮಗಳಲ್ಲಿ ಧಾರಾಕಾರ ಮಳೆ ಸುರಿಯಿತು.

ದಿಢೀರನೆ ಬಂದ ಮಳೆಯಿಂದಾಗಿ ಕೂಲಿ ಕಾರ್ಮಿಕರಿಗೆ ಅಡ್ಡಿಯಾಯಿತು. ಕಳೆದ ಹಲವು ದಿನಗಳಿಂದಲೂ ಮಳೆ ಇಲ್ಲದೇ ಪರಿತಪಿಸಿದ್ದ ಜನರ ಮೊಗದಲ್ಲಿ ಮಂದಹಾಸ ಮೂಡಿಸಿತು. ವಿವಿಧ ಗ್ರಾಮಗಳಿಂದ ನಗರಕ್ಕೆ ಆಗಮಿಸಿದ್ದ ಜನರು ಮಳೆಯಿಂದಾಗಿ ಪರದಾಡುವಂತಹ ಪರಿಸ್ಥಿತಿ ನಿರ್ಮಾಣವಾಯಿತು. ನಿರಂತರವಾಗಿ ಸುರಿದ ಮಳೆಯಿಂದಾಗಿ ನಗರದ ಡಿವಿಯೇಷನ್ ರಸ್ತೆ, ಬಿ.ರಾಚಯ್ಯ ಜೋಡಿರಸ್ತೆ, ಪಚ್ಚಪ್ಪ ವೃತ್ತಗಳು ವಾಹನಗಳಲ್ಲದೇ ಬಿಕೋ ಎನ್ನುತ್ತಿದ್ದವು. ಪ್ರಮುಖ ರಸ್ತೆಗಳು ಮಳೆಯ ನೀರಿನಿಂದ ಜಲಾವೃತ್ತವಾಗಿದ್ದವು.

ರೈತರ ಮೊಗದಲ್ಲಿ ಹರ್ಷ: ಮಳೆಯಿಲ್ಲದೇ ಬರಗಾಲದಿಂದಾಗಿ ಕಂಗೆಟ್ಟಿದ್ದ ರೈತರ ಮೊಗದಲ್ಲಿ ಮಳೆಯು ಹರ್ಷ ಮೂಡಿಸಿತು. ಶನಿವಾರ ಮಧ್ಯಾಹ್ನ ಚಾ.ನಗರ ಸೇರಿದಂತೆ ಸುತ್ತಮುತ್ತಲಿನ ಹಲವು ಗ್ರಾಮಗಳಲ್ಲಿ ಸುರಿದ ಮಳೆಯು ರೈತರ ಫಸಲಿಗೆ ಅನುಕೂಲಕರವಾಯಿತು. ಇದರಿಂದಾಗಿ ಮಳೆ ಆಶ್ರಿತ ಜಮೀನುಗಳ ಫಸಲಿಗೆ ಅನುಕೂಲವಾಗಿದ್ದು ರೈತರ ಕೂಡ ಮುಖಗೊಂಡಿದ್ದಾರೆ. ಕಳೆದ ಕೆಲ ದಿನಗಳಿಂದ ಆಗಾಗ್ಗೆ ಸುರಿಯುವ ಮಳೆಯಿಂದಾಗಿ ರೈತರು ಈಗಾಗಲೇ ಕೃಷಿ ಚಟುವಟಿಕೆಯಲ್ಲಿ ತೊಡಗಿಕೊಂಡಿದ್ದಾರೆ.

ಕೆರೆ ಹೂಳೆತ್ತುವ ಕಾಮಗಾರಿ ಸ್ಥಗಿತಗೊಳಿಸಲು ರೈತರ ಪ್ರತಿಭಟನೆ: ಪಿಡಿಓ ಮನವೊಲಿಕೆ



ಕೊಳ್ಳೇಗಾಲ: ಪಟ್ಟಣದ ಪಾಪನಕೆರೆ ನರೇಗಾ ಯೋಜನೆಯಲ್ಲಿ ಸಿದ್ದಯ್ಯನಪುರ ಗ್ರಾಪಂ ಕೈಗೊಂಡಿದ್ದ ಹೂಳೆತ್ತುವ ಕಾಮಗಾರಿಯನ್ನು ಸ್ಥಗಿತಗೊಳಿಸಬೇಕೆಂದು ಒತ್ತಾಯಿಸಿ ಕಾಮಗಾರಿ ನಡೆಯುತ್ತಿದ್ದ ರೈತರು ಪ್ರತಿಭಟನೆ ನಡೆಸಲಾಯಿತು.

ವಿಚಾರ ತಿಳಿದು ಸ್ಥಳಕ್ಕೆ ಬಂದ ಪಿಡಿಓ ಶಿವಮೂರ್ತಿ ಜೊತೆ ಚರ್ಚಿಸಿದಾಗ ಒತ್ತುವರಿ ಮಾಡುವವರಿಗೆ ಸಹಾಯ ಮಾಡುತ್ತೀದ್ದೀರಿ. ತೆಗೆದಿರುವ ಹೂಳನ್ನು ಸಮಮಾಡಿ ಒತ್ತುವರಿಗೆ ಅವಕಾಶ ಕೊಡದಂತೆ ಕ್ರಮಕೈಗೊಳ್ಳಿ ಎಂದು ಒತ್ತಾಯಿಸಿದಾಗ ಪಿಡಿಓ ಅದಕ್ಕೆ ಒಪ್ಪಿ ಕೆಲಸ ಸ್ಥಗಿತಗೊಳಿಸಿ ಜಮೀನು ಪಕ್ಕ ಹಾಕಿರುವ ಹೂಳನ್ನು ತೆರವುಗೊಳಿಸಿ ಒತ್ತುವರಿ ಯಾಗದಂತೆ ನೋಡಿಕೊಳ್ಳುವುದಾಗಿ ಹೇಳಿ ತಾವು ಕೈಗೊಂಡ ಕಾರ್ಯಕ್ಕೆ ರೈತರ ಬಳಿ ಕ್ಷಮೆ ಕೇಳಿದರು.

ನಂತರ ಪ್ರತಿಭಟನೆಯನ್ನು ರೈತರು ಕೈಬಿಟ್ಟು ತೆರಳಿದರು. ಪ್ರತಿಭಟನೆಯಲ್ಲಿ ರೈತರುಗಳಾದ ಪಿ.ಕೃಷ್ಣರಾಜ್, ಉಮೇಶ್, ಮಹದೇವ, ಕಿರಣ್, ರಂಗಣ್ಣ, ಕೃಷ್ಣ, ಮೋಹನ್, ಜಗದೀಶ್ ಹಾಗೂ ಇತರರು ಇದ್ದರು.

ಯಳಂದೂರು ತಾಲ್ಲೂಕಿಗೆ ಸುಪ್ರಿಯಾ ಪ್ರಥಮ

ಕಾಯಕಯೋಗಿ ನ್ಯೂಸ್



ಯಳಂದೂರು: ತಾಲೂಕಿಗೆ ಈ ಬಾರಿ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಒಟ್ಟಾರೆ ಶೇ.72.40 ರಷ್ಟು ಫಲಿತಾಂಶದ ಲಭಿಸಿದ್ದು, ವಿದ್ಯಾರ್ಥಿನಿಯರು ಮೇಲುಗೈ ಸಾಧಿಸಿದ್ದಾರೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಕಾಂತರಾಜು ಮಾಹಿತಿ ನೀಡಿದರು.

ಒಟ್ಟು 882 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು, 640 ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ. ಈ ಬಾರಿಯೂ ಸರ್ಕಾರಿ ಶಾಲೆಗಳು ಉತ್ತಮ ಸಾಧನೆ ಮಾಡಿದೆ .ತಾಲೂಕಿನಲ್ಲಿ ಒಟ್ಟು 19 ಪ್ರೌಢಶಾಲೆಗಳಿದ್ದು, ಸರ್ಕಾರಿ ಆದರ್ಶ ಶಾಲೆ ವಿದ್ಯಾರ್ಥಿಗಳು ಫಲಿತಾಂಶದಲ್ಲಿ ಮೊದಲ ಸ್ಥಾನ ಗಳಿಸಿದ್ದು ಶೇ.98.7ರಷ್ಟು ಫಲಿತಾಂಶ ಬಂದಿದೆ.

ಪ್ರತಿ ವರ್ಷವೂ ಶೇಕಡ ನೂರರಷ್ಟು ಫಲಿತಾಂಶ ದಾಖಲಿಸಿದ್ದ ಶಾಲೆಗೆ ಈ ಬಾರಿ ಒಬ್ಬ ವಿದ್ಯಾರ್ಥಿನಿ ಅನುತ್ತೀರ್ಣರಾಗಿದ್ದು, ಈ ಅವಕಾಶ ಶಾಲೆಗೆ ತಪ್ಪಿದೆ. ಪರೀಕ್ಷೆಗೆ ಹಾಜರಾಗಿದ್ದ 407 ವಿದ್ಯಾರ್ಥಿಗಳಲ್ಲಿ 242 ವಿದ್ಯಾರ್ಥಿಗಳು ಉತ್ತೀರ್ಣರಾದರೆ, ಒಟ್ಟು 475 ವಿದ್ಯಾರ್ಥಿನಿಯರು ಪರೀಕ್ಷೆಗೆ ಹಾಜರಾಗಿದ್ದರು. ಇದರಲ್ಲಿ 398 ವಿದ್ಯಾರ್ಥಿನಿಯರು ತೇರ್ಗಡೆಯಾಗಿ ಮೇಲುಗೈ ಸಾಧಿಸಿದ್ದಾರೆ. ಶೇಕಡವಾರು ಫಲಿತಾಂಶದಲ್ಲಿ ವಿದ್ಯಾರ್ಥಿಗಳು ಶೇಕಡ 59.46 ದಾಖಲಿಸಿದ್ದಾರೆ. ವಿದ್ಯಾರ್ಥಿನಿಯರು ಶೇಕಡ 83.79 ರಷ್ಟು ಉತ್ತೀರ್ಣರಾಗಿದ್ದಾರೆ. ಜಿಲ್ಲೆಯಲ್ಲಿ ಯಳಂದೂರು ತಾಲೂಕು ಫಲಿತಾಂಶದಲ್ಲಿ 5 ಸ್ಥಾನ ಪಡೆದುಕೊಂಡಿದೆ.

ಎಸ್ ಸುಪ್ರಿಯಾ ತಾಲೂಕಿಗೆ ಪ್ರಥಮ: ತಾಲೂಕಿನ ವೈದ್ಯ ಮೊಳೆ ಗ್ರಾಮದ ಲಿಂಗರಾಜು ಪ್ರೇಮ ದಂಪತಿ ಪುತ್ರಿ, ಸರ್ಕಾರಿ ಆದರ್ಶ ವಿದ್ಯಾಲಯದ ವಿದ್ಯಾರ್ಥಿನಿ ಎಸ್.ಸುಪ್ರಿಯಾ 602 ಅಂಕಗಳಿಸುವ ಮೂಲಕ ತಾಲೂಕಿಗೆ ಪ್ರಥಮ ಸ್ಥಾನ ಪಡೆದಿದ್ದಾಳೆ. ತಾಲೂಕಿನ ಟಾಪ್ 10 ಅಂಕಗಳಿಗೆ ವಿದ್ಯಾರ್ಥಿಗಳಲ್ಲೂ 9 ವಿದ್ಯಾರ್ಥಿಗಳು ಸರ್ಕಾರಿ ಶಾಲೆಯ ಮಕ್ಕಳೇ ಆಗಿದ್ದಾರೆ. ಆದರ್ಶ ಶಾಲೆಯ ವಿದ್ಯಾರ್ಥಿಗಳೇ ಐದು ಮಂದಿ ಇದ್ದಾರೆ. ತಾಲೂಕಿಗೆ ಪ್ರಥಮ ಸ್ಥಾನ ಪಡೆದ ಎಸ್.ಸುಪ್ರಿಯಾ ಮನೆಗೆ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಕಾಂತರಾಜು ಹಾಗೂ ಆದರ್ಶ ವಿದ್ಯಾಲಯದ ಮುಖ್ಯ ಶಿಕ್ಷಕ ಗುರುಮೂರ್ತಿ ಭೇಟಿ ನೀಡಿ ವಿದ್ಯಾರ್ಥಿಯನ್ನು ಸನ್ಮಾನಿಸಿದರು.

ಮಳೆಹಾನಿ: ವಿಶೇಷ ಪ್ಯಾಕೇಜ್‌ಗೆ ಒತ್ತಾಯಿಸಿ ಪ್ರತಿಭಟನೆ



ಕಾಯಕಯೋಗಿ ನ್ಯೂಸ್

ಚಾಮರಾಜನಗರ: ಬಿರುಗಾಳಿ ಮಳೆಗೆ ಬಾಳೆ ಫಸಲು ನಾಶಗೊಂಡು ಸಂಕಷ್ಟದಲ್ಲಿ ಸಿಲುಕಿರುವ ಬಾಳೆ ಬೆಳೆಗಾರರಿಗೆ ಸರ್ಕಾರ ವಿಶೇಷ ಪ್ಯಾಕೇಜ್ ಘೋಷಿಸುವಂತೆ ಆಗ್ರಹಿಸಿ ರಾಜ್ಯ ಕಬ್ಬು ಬೆಳೆಗಾರರ ಸಂಘದ ವತಿಯಿಂದ ನಗರದಲ್ಲಿ ಪ್ರತಿಭಟನೆ ನಡೆಯಿತು.

ಚಾಮರಾಜನಗರದ ಸೋಮವಾರ ಪೇಟೆ ಬಳಿಯ ರಾಷ್ಟ್ರೀಯ ಹೆದ್ದಾರಿ 209 ರ ಬೈಪಾಸ್ ರಸ್ತೆಯ ಬಳಿ ಜಮಾಯಿಸಿದ ಪ್ರತಿಭಟನಾಕಾರರು ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತ ಪಡಿಸಿ ಕೆಲಕಾಲ ರಸ್ತೆ ತಡೆದು ಪ್ರತಿಭಟನೆ ನಡೆಸಿದರು.

ಸಂಘದ ರಾಜ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ಮಾತನಾಡಿ, ರಾಜ್ಯದಲ್ಲಿ ತೀವ್ರ ಬರಗಾಲದಿಂದ ನೊಂದಿರುವ ರೈತರಿಗೆ ವೈಜ್ಞಾನಿಕವಾಗಿ ಬೆಳೆ ನಷ್ಟ ಕೊಡಬೇಕು ಎಂದು ಒತ್ತಾಯಿಸಲಾಗಿದೆ. ಆದರೆ, ಹತ್ತು ಗಳನ್ನು ಎಲ್ಲಿಸಿ ರೈತರಿಗೆ ಪರಿಹಾರ ಕೊಡುವಲ್ಲಿ ಸರ್ಕಾರ ಮೀನ ಮಾಡುತ್ತಿದೆ. ಅಲ್ಲದೇ ಮೈಸೂರು, ಚಾಮರಾಜನಗರ ಜಿಲ್ಲೆಗಳಲ್ಲಿನ 1.50 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆದಿರುವ ಬಾಳೆ ಬೆಳೆಗಾರರು ಸಂಕಷ್ಟದಲ್ಲಿದ್ದಾರೆ ಎಂದರು.

ಕೂಡಲೇ ಬಾಳೆ ಬೆಳೆಗಾರರಿಗೆ ವಿಶೇಷ ಪ್ಯಾಕೇಜ್ ಘೋಷಣೆ ಮಾಡಬೇಕು. ಅಕ್ರಮ–ಸಕ್ರಮ ಯೋಜನೆ ಜಾರಿಗೆ ತರಬೇಕು. ಹಾಲು ಉತ್ಪಾದಕರಿಗೆ 10 ರೂ. ಹೆಚ್ಚುವರಿ ಪ್ರೋತ್ಸಾಹಧನ ಕೊಡಬೇಕು ಎಂದು ಆಗ್ರಹಿಸಿದರು.

ಸರ್ಕಾರದ ಕಾನೂನುಗಳಲ್ಲಿ ರೈತ ಪರವಾದ ನಿಲುವುಗಳನ್ನು ತೆಗೆದುಕೊಳ್ಳಬೇಕು. ಬ್ಯಾಂಕ್‌ಗಳಲ್ಲಿ ರೈತರಿಗೆ ಹೊಸ ಸಾಲ ಕೊಡುತ್ತಿಲ್ಲ. ಸರ್ಕಾರ ಮಧ್ಯ ಪ್ರವೇಶ ಮಾಡಿ ಬೆಳೆ ನಷ್ಟ ಪರಿಹಾರವನ್ನು ವೈಜ್ಞಾನಿಕವಾಗಿ ಕೊಡಬೇಕು. ಇಲ್ಲದಿದ್ದರೆ ಜಿಲ್ಲೆಯಲ್ಲಿ ಉಗ್ರ ಪ್ರತಿಭಟನೆ ಮಾಡುವುದಾಗಿ ಎಚ್ಚರಿಸಿದರು.

ಮುಂದಿನ ದಿನಗಳಲ್ಲಿ ಚುನಾವಣೆ ನೀತಿ ಸಂಹಿತೆಯನ್ನು ಸಡಿಲಿಸಿ ರೈತರ ಕಷ್ಟಗಳಿಗೆ ಅಧಿಕಾರಿಗಳು ಸ್ಪಂದಿಸದಿದ್ದರೆ ಗ್ರಾಮೀಣ ಭಾಗಗಳಲ್ಲಿ ಅಧಿಕಾರಿಗಳು ಹಾಗೂ ಚುನಾಯಿತ ಪ್ರತಿನಿಧಿಗಳಿಗೆ ತಕ್ಕ ಪಾಠ ಕಲಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಮಲೆಯೂರು ಹರ್ಷ, ಜಿಲ್ಲಾಧ್ಯಕ್ಷ ಹಾಲಿನ ನಾಗರಾಜ್, ಪದಾಧಿಕಾರಿಗಳಾದ ರವಿ ಹರಳಿಕಟ್ಟೆ, ಕುಮಾರ್ ಉಡಿಗಾಲ, ಮಂಜುನಾಥ್, ಗುರುಮಲ್ಲಪ್ಪ, ಮಹದೇವಸ್ವಾಮಿ, ಚೇರ್‌ಮನ್ ಗುರು, ಮಾದೇಶ್, ಜಗ, ರಾಜು, ಸೂರ್ಯ, ಬಸವರಾಜಪ್ಪ, ಮಹೇಂದ್ರ, ಸತೀಶ್, ಪ್ರಭುಸ್ವಾಮಿ, ಸಿದ್ದಲಿಂಗಪ್ಪ, ಸಿದ್ದಪ್ಪ, ಮಹೇಶ, ಮುದ್ದಳ್ಳಿ ಚಿಕ್ಕಸ್ವಾಮಿ, ಅಂಬಳೆ ಮಂಜುನಾಥ್, ಕೋಣನೂರು ವಿಶ್ವನಾಥ್, ದೇವನೂರು ನಾಗೇಂದ್ರ, ಗುರುವಿನಪುರ ಚಿಂದ್ರು, ಪ್ರಸಾದ್, ವಿನಯ್, ಸ್ವಾಮಿ, ಆನಂದ, ಸುರೇಶ್, ಸಂಜು ಸೇರಿದಂತೆ ಇತರರು ಭಾಗವಹಿಸಿದ್ದರು.

ಮಳೆಯಲ್ಲೂ ಮುಂದುವರೆದ ಪ್ರತಿಭಟನೆ

ನಗರದ ಹೊರವಲಯದ ಸೋಮವಾರಪೇಟೆ ಬಳಿ ಇರುವ ರಾಷ್ಟ್ರೀಯ ಹೆದ್ದಾರಿ 209ರ ಬೈಪಾಸ್ ರಸ್ತೆ ಬಳಿ ಕಬ್ಬು ಬೆಳೆಗಾರರ ಸಂಘದ ವತಿಯಿಂದ ಪ್ರತಿಭಟನೆ ಮಾಡಲು ಮುಂದಾದ ವೇಳೆ ಮಳೆ ಬಂದು ಅಡ್ಡಿಪಡಿಸಿತು. ಆದರೆ, ಸಂಘದ ಪದಾಧಿಕಾರಿಗಳು ಹಾಗೂ ರೈತರು ಮಳೆಯನ್ನು ಲೆಕ್ಕಿಸದೇ ಪ್ರತಿಭಟನೆ ನಡೆಸಿದರು. ಮಳೆಯಲ್ಲಿಯೇ ನೆನೆದುಕೊಂಡು ರಸ್ತೆ ತಡೆದು ಧರಣಿ ನಡೆಸಿದರು. ರಸ್ತೆ ತಡೆದ ಪರಿಣಾಮ ತಮಿಳುನಾಡು ಕಡೆ ತೆರಳುವ ವಾಹನಗಳ ಸವಾರರು ಕೆಲಕಾಲ ಪರದಾಡಿದರು. ಆದರೆ, ದಿಢೀರನೆ ಬಂದ ಮಳೆಯಿಂದಾಗಿ ಸ್ಥಳದಲ್ಲಿದ್ದ ಪೊಲೀಸರು ವಾಹನಗಳು ತೆರಳಲು ಅವಕಾಶ ಕಲ್ಪಿಸಿದರು.

ತುಮಕೂರು: ವಿವಿಧ ಸಂಘಟನೆಗಳಿಂದ ಬಸವ ಜಯಂತಿ



ಕಾಯಕಯೋಗಿ ನ್ಯೂಸ್

ತುಮಕೂರು: ಬಸವ ಜಯಂತಿ ಪ್ರಯುಕ್ತ ಮಹಾನಗರ ಪಾಲಿಕೆಯ ಆವರಣದಲ್ಲಿ ಅಖಿಲ ಭಾರತಡಾ. ಬಿ.ಆರ್.ಅಂಬೇಡ್ಕರ್ ಪ್ರಚಾರ ಸಮಿತಿ ತುಮಕೂರು ಶಾಖೆ, ದಲಿತಪರ ಸಂಘಟನೆಗಳು ಹಾಗೂ ಕನ್ನಡಪರ ಸಂಘಟನೆಗಳ ಒಕ್ಕೂಟ ವತಿಯಿಂದ ಹಮ್ಮಿಕೊಳ್ಳಲಾಗಿತ್ತು ಈ ಸಂದರ್ಭದಲ್ಲಿ ಮಹಷ್ಟಮನ ಸಲ್ಲಿಸಿ ಸಾರ್ವಜನಿಕರಿಗೆ ಸಿಹಿ ವಿತರಣೆ ಮಾಡಲಾಯಿತು.

ಅಖಿಲ ಭಾರತ ಅಂಬೇಡ್ಕರ್ ಪ್ರಚಾರ ಸಮಿತಿ ಜಿಲ್ಲಾಧ್ಯಕ್ಷ ಎನ್.ಕೆ.ನಿಧಿಕುಮಾರ್, ಜಿಲ್ಲಾ ಉಪಾಧ್ಯಕ್ಷ ಇಂದ್ರಕುಮಾರ್, ಕಾರ್ಮಿಕರ ಘಟಕದ ಜಿಲ್ಲಾಧ್ಯಕ್ಷ ಎಸ್.ನಾರಾಯಣ್, ಒಬಿಸಿ ಘಟಕದ ಜಿಲ್ಲಾಧ್ಯಕ್ಷ ಎಸ್.ರಾಮಚಂದ್ರಾವ್, ಅಲ್ಪಸಂಖ್ಯಾತರ ಘಟಕದ ಜಿಲ್ಲಾಧ್ಯಕ್ಷ ಶಬ್ಬೀರ್‌ಅಹಮ್ಮದ್, ಅಲ್ಪ ಸಂಖ್ಯಾತರ ಘಟಕದ ನಗರಾಧ್ಯಕ್ಷ ರಫೀಕ್‌ಅಹಮ್ಮದ್, ಗೂಳೂರು ರಾಜಣ್ಣ ಟೈಲರ್‌ಜಗದೀಶ್, ಕ.ರ.ವೇ. ಆನಂದ್, ಕನ್ನಡ ಪ್ರಕಾಶ್, ಮೋಹನ್‌ಕುಮಾರ್, ದರ್ಶನ್, ಎ.ರಂಜನ್, ಲಕ್ಷ್ಮಣ್ ಸೇರಿದಂತೆ ಇನ್ನಿತರೆ ಮುಖಂಡರು ಉಪಸ್ಥಿತರಿದ್ದರು.

ಶ್ರೀ ಮಹಾಲಕ್ಷ್ಮೀ ವಿದ್ಯಾಮಂದಿರ ಪ್ರೌಢಶಾಲೆ ಶೇ.96ರಷ್ಟು ಫಲಿತಾಂಶ

ಕೊರಟಗೆರೆ: ಪ್ರಸಕ್ತ ಸಾಲಿನ 2023–24 ನೇ ಶೈಕ್ಷಣಿಕ ವರ್ಷದ ಎಸ್.ಎಸ್.ಎಲ್.ಸಿ ಪರೀಕ್ಷೆ–1 ರಲ್ಲಿ ತಾಲೂಕಿನ ಗೊರವನಹಳ್ಳಿ ಶ್ರೀ ಮಹಾಲಕ್ಷ್ಮಿ ಟ್ರಸ್ಟ್ ವತಿಯಿಂದ ನಡೆಯುತ್ತಿರುವ ಶ್ರೀಮಹಾಲಕ್ಷ್ಮಿ ವಿದ್ಯಾಮಂದಿರದ ವಿದ್ಯಾರ್ಥಿನಿ ಎಂ.ಪಿ.ಪೂಜಿತ ಶೇ 84.48 ಫಲಿತಾಂಶ ಪಡೆಯುವ ಮೂಲಕ ಶಾಲೆ ಶೇ.96 ರಷ್ಟು ಫಲಿತಾಂಶ ಪಡೆದಿದೆ.

ಶ್ರೀ ಮಹಾಲಕ್ಷ್ಮೀ ವಿದ್ಯಾಮಂದಿರದ ಮುಖ್ಯೋಪಾಧ್ಯ ಸೋಮ ಶೇಖರ್ ಪತ್ರಿಕಾ ಪ್ರಕಟನೆ ನೀಡಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ 21 ವಿದ್ಯಾರ್ಥಿಗಳು ಪರೀಕ್ಷೆ ಪಡೆದಿದ್ದು 20 ವಿದ್ಯಾರ್ಥಿಗಳು ಉತ್ತೀರ್ಣರಾಗುವ ಮೂಲಕ ಶಾಲೆಗೆ ಶೇ. 96 ರಷ್ಟು ಫಲಿತಾಂಶ ಬಂದಿದ್ದು ವಿದ್ಯಾರ್ಥಿ ಎಂ.ಪಿ.ಪೂಜಿತ 528 ಅಂಕಗಳೊಸು ಮೂಲಕ ಶೇ.96 ರಷ್ಟು ಫಲಿತಾಂಶ ಪಡೆದು ಶಾಲೆಗೆ ಕೀರ್ತಿ ದಂದಿದ್ದಾರೆ, ಡಿಸ್ಟಂಗಷನ್ ಪಡೆದ ವಿದ್ಯಾರ್ಥಿಯನ್ನು ಹಾಗೂ ಉತ್ತಮ ಫಲಿತಾಂಶ ತಂದ ವಿದ್ಯಾರ್ಥಿಗಳನ್ನು ಶ್ರೀ ಮಹಾಲಕ್ಷ್ಮೀ ದೇವಾಲಯದ ಆಡಳಿತ ಮಂಡಲಿಯ ಅಧ್ಯಕ್ಷ , ಕಾರ್ಯದರ್ಶಿ ಸೇರಿದಂತೆ ಎಲ್ಲಾ ಧರ್ಮದರ್ಶಿಗಳು ವಿದ್ಯಾಮಂದಿರದ ಶಿಕ್ಷಕ ವೃಂದ ಅಭಿನಂದಿಸಿದ್ದಾರೆ.

ಕೊರಟಗೆರೆ ಪಟ್ಟಣದ ಎಲ್ಲ ವಾರ್ಡ್‌ಗಳಿಗೆ ತಹಶೀಲ್ದಾರ್ ಮಂಜುನಾಥ್ ಭೇಟಿ

ಶೀಘ್ರವೇ ಕುಡಿಯುವ ನೀರಿನ ಲೋಪದೋಷ ಸರಿಪಡಿಸುವ ಭರವಸೆ



ಕಾಯಕಯೋಗಿ ನ್ಯೂಸ್

ಕೊರಟಗೆರೆ: ಕೊರಟಗೆರೆ ಪಟ್ಟಣದ ಎಲ್ಲಾ ವಾರ್ಡ್‌ಗಳಿಗೆ ತಹಶೀಲ್ದಾರ್ ಮಂಜುನಾಥ್ ಭೇಟಿ ನೀಡಿ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯದ ಬಗ್ಗೆ ಪರಿಶೀಲಿಸಿ ಲೋಪದೋಷಗಳನ್ನು ಸರಿಪಡಿಸುವುದಾಗಿ ಸಾರ್ವಜನಿಕರಿಗೆ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಪತ್ರಕರ್ತರಿಗೆ ಮಾಹಿತಿ ನೀಡಿದ ತಹಶೀಲ್ದಾರ್ ಮಂಜುನಾಥ್, ತಾಲೂಕಿನಲ್ಲಿ ಭೀಕರ ಬರಗಾಲ ಇದ್ದರೂ ಅದರ ನಿರ್ವಹಣೆಗೆ ಕ್ಷೇತ್ರದ ಶಾಸಕರು ಹಾಗೂ ಗೃಹ ಸಚಿವ ಡಾ.ಜಿ. ಪರಮೇಶ್ವರ ರವರು ಎಲ್ಲಾ ರೀತಿಯ ಅನುದಾನ ಮತ್ತು ಮಾರ್ಗದರ್ಶನವನ್ನು ನೀಡಿದ್ದಾರೆ, ತಾಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಿದ್ದರೂ ಸಹ ಜನರಿಗೆ ಯಾವುದೇ ರೀತಿ ತೊಂದರೆ ಬಾರದಂತೆ ನಿರ್ವಹಣೆ ಮಾಡಲಾಗುತ್ತಿದೆ, ಹಲವು ಕಡೆ ನೀರಿನ ಅಭಾವ ಇದ್ದರೂ ನೀರನ್ನು ಇತರೆ ಕಡೆಯಿಂದ ಬರುವ

website: www.kayakayogi.com
ಕಾಯಕ ಯೋಗಿ
KAYAKA YOGI - Regional Daily
ಪುಟ–5 | 12–05–2024
ಹಾಸನ– ರಾಮನಗರ

ಅತ್ಯಾಚಾರ ಆರೋಪ: ಬಿಜೆಪಿ ಮುಖಂಡ ದೇವರಾಜೇಗೌಡ ಬಂಧನ

ಹಾಸನ: ಹಾಸನ ಜೆಡಿಎಸ್ ಸಂಸದ ಪ್ರಜ್ವಲ್ ರೇವಣ್ಣ ಅಶ್ಲೀಲ ಪೆನ್ ಡ್ರೈವ್ ಪ್ರಕರಣದಲ್ಲಿ ನಿನ್ನೆ ವಶಕ್ಕೆ ಪಡೆದಿದ್ದ ವಕೀಲ ಹಾಗೂ ಬಿಜೆಪಿ ಮುಖಂಡ ದೇವರಾಜೇಗೌಡರನ್ನು ಇಂದು ಪೊಲೀಸರು ಬಂಧಿಸಿದ್ದಾರೆ.

ಮಹಿಳೆ ಮೇಲೆ ದೌರ್ಜನ್ಯ ಎಸಗಿರುವ ಆರೋಪ ಪ್ರಕರಣದಲ್ಲಿ ಹೊಳೆನರಸೀಪುರ ಗ್ರಾಮಾಂತರ ವೃತ್ತ ನಿರೀಕ್ಷಕರ ಕಛೇರಿಯಲ್ಲಿ ಸತತ ಮೂರು ಗಂಟೆಗಳ ವಿಚಾರಣೆ ನಡೆಸಿ ಬಂಧಿಸಿದ್ದಾರೆ. ನಿನ್ನೆ ಚಿತ್ರದುರ್ಗ ಬಳಿಯ ಕೆ.ಆರ್.ಹಳ್ಳಿ ಗೇಟ್ ಬಳಿ ಹಿರಿಯೂರು ಗ್ರಾಮಾಂತರ ಪೊಲೀಸರು ದೇವರಾಜೇಗೌಡ ಅವರನ್ನು ವಶಕ್ಕೆ ಪಡೆದಿದ್ದಾರೆ. ಹೊಳೆನರಸೀಪುರ ಠಾಣೆಯಲ್ಲಿ ದಾಖಲಾಗಿದ್ದ ಎರಡು ಕೇಸ್‌ಗಳ ಸಂಬಂಧ ಅವರನ್ನು ವಶಕ್ಕೆ ಪಡೆಯಲಾಗಿತ್ತು. ವಕೀಲರಾಗಿರುವ ದೇವರಾಜೇಗೌಡ ವಿರುದ್ಧ ಏಪ್ರಿಲ್ 1ರಂದು ಹೊಳೆನರಸೀಪುರ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು. ಆದರೆ ಪ್ರಜ್ವಲ್ ರೇವಣ್ಣ ಪ್ರಕರಣದಲ್ಲಿ ಅವರು ಪ್ರಮುಖ ಮಾಹಿತಿದಾರರಾದ್ದರಿಂದ ಅದು ಇತ್ತೀಚೆಗೆ ಬೆಳಕಿಗೆ ಬಂದಿದೆ. ಪ್ರಜ್ವಲ್ ರೇವಣ್ಣ ಅವರು ಹಲವಾರು ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿರುವ ಬಗ್ಗೆ ಕಳೆದ ವರ್ಷ ಬಿಜೆಪಿ ನಾಯಕರಿಗೆ ಎಚ್ಚರಿಕೆ ನೀಡಿದ್ದ ದೇವರಾಜೇಗೌಡರು, ಹಾಸನದಿಂದ ಜೆಡಿಎಸ್ ಸಂಸದರಿಗೆ ಲೋಕಸಭೆ ಟಿಕೆಟ್ ನೀಡದಂತೆ ಆಗ್ರಹಿಸಿದ್ದರು.

2023ರ ವಿಧಾನಸಭಾ ಚುನಾವಣೆಯಲ್ಲಿ ಪ್ರಜ್ವಲ್ ರೇವಣ್ಣ ಅವರ ತಂದೆ ಮತ್ತು ಹೊಳೆನರಸೀಪುರ ಶಾಸಕ ಹೆಚ್ ಡಿ ರೇವಣ್ಣ ವಿರುದ್ಧ ಸ್ಪರ್ಧಿಸಿದ್ದ ದೇವರಾಜೇಗೌಡ, ಲೈಂಗಿಕ ಕಿರುಕುಳದ ವೀಡಿಯೊಗಳನ್ನು ಸೋರಿಕೆ ಮಾಡಿದ್ದಕ್ಕಾಗಿ ರಾಜ್ಯದ ಕಾಂಗ್ರೆಸ್ ನಾಯಕರನ್ನು ದೂಷಿಸಿದ್ದರು.

ಹಾಸನ ಜಿಲ್ಲೆಯ 36 ವರ್ಷದ ಮಹಿಳೆಯೊಬ್ಬರು ತಮ್ಮ ಆಸ್ತಿ ಮಾರಾಟಕ್ಕೆ ಸಹಾಯ ಮಾಡುವ ನೆಪದಲ್ಲಿ ದೇವರಾಜೇಗೌಡ ತನಗೆ ಕಿರುಕುಳ ನೀಡಿದ್ದಾರೆ ಎಂದು ಆರೋಪಿಸಿದ್ದಾರೆ. ಹೆದರಿಸಿ ಬೆದರಿಸಿ ತನ್ನ ಮೇಲೆ ದೌರ್ಜನ್ಯ ನಡೆಸಲಾಗಿದೆ. ವೀಡಿಯೋ ಕಾಲ್ ಮಾಡಿ ಮಾನಸಿಕ ಹಿಂಸೆ ನೀಡಿದ್ದಾರೆ. ವೀಡಿಯೋ ಕಾಲ್ ಮಾಡಿ ತನ್ನ ಖಾಸಗಿ ಅಂಗಾಂಗ ತೋರಿಸಿ ಪ್ರಚೋದನೆಗೆ ಯತ್ನಿಸಿದ್ದಾರೆ ಎಂದು ಸಂತ್ರಸ್ತೆ ದೂರಿನಲ್ಲಿ ಉಲ್ಲೇಖಿಸಿದ್ದಾರೆ ಎನ್ನಲಾಗಿದೆ. ಮಹಿಳೆ ದೂರು ಆಧರಿಸಿ ಹೊಳೆನರಸೀಪುರ ನಗರ ಠಾಣೆಯಲ್ಲಿ ಎಫ್‌ಐಆರ್ ದಾಖಲು ಮಾಡಿಕೊಳ್ಳಲಾಗಿದೆ ಎಂದು ಮೂಲಗಳಿಂದ ತಿಳಿದುಬಂದಿದೆ.

ಆನೆ ದಾಳಿ ತಡೆಗಟ್ಟದಿದ್ದಲ್ಲಿ ಅರಣ್ಯ ಇಲಾಖೆ ಕಚೇರಿಗೆ ಬೀಗ ಜಡಿದು ಪ್ರತಿಭಟನೆ



ಕನಕಪುರ: ತಾಲೂಕಿನ ಕೋಡಿಹಳ್ಳಿ, ಹುಣಸನಹಳ್ಳಿ ಗ್ರಾಮಗಳಲ್ಲಿ ಆನೆಗಳ ದಾಳಿಯಿಂದ ಸರಣಿ ಸಾವುಗಳು ಸಂಭವಿಸುತ್ತಿದ್ದರೂ ಸಹ ಆನೆಗಳ ದಾಳಿ ತಡೆಯಲು ಅರಣ್ಯ ಇಲಾಖೆ ಅಧಿಕಾರಿಗಳು ಸಂಪೂರ್ಣ ವಿಫಲರಾಗಿರುವುದಾಗಿ ಜಿಲ್ಲಾ ರೈತ ಸಂಘದ ಅಧ್ಯಕ್ಷ ಚೀಲೂರು ಮುನಿರಾಜು ಆರೋಪಿಸಿದ್ದಾರೆ.

ಶನಿವಾರ ನಗರದ ರೈತ ಸಂಘದ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಾಲೂಕಿನ ಗಡಿಗ್ರಾಮದ ಭಾಗಗಳಲ್ಲಿ ಕಾಡಾನೆಗಳ ದಾಳಿಯಿಂದ ಸಾಲು ಸಾಲು ಸಾವು ಸಂಭವಿಸುತ್ತಿವೆ, ಕಾಡಾನೆಗಳನ್ನು ನಿಯಂತ್ರಿಸಲು ಅರಣ್ಯ ಇಲಾಖೆ ಸಂಪೂರ್ಣ ವಿಫಲವಾಗಿದೆ. ಇವುಗಳ ನಿಯಂತ್ರಣಕ್ಕೆ ಯಾವುದೇ ಕ್ರಮ ಕೈಗೊಳ್ಳದೆ ಕಾಡಂಚಿನ ರೈತರು ಸಾವನ್ನಪ್ಪಿದ್ದಾರೆ.

ಈವರೆಗೂ ಸಹ ಅರಣ್ಯ ಅಧಿಕಾರಿಗಳು ರೈತರ ಸಭೆ ನಡೆಸದೆ ಅವರಿಗೆ ಆತ್ಮಸ್ಥೈರ್ಯ ತುಂಬುವಂತ ಯಾವುದೇ ಕೆಲಸ ಮಾಡಿಲ್ಲ, ರೈತ ಸಂಘದ ಪರವಾಗಿ ನಾವು ದೂರು ಕೊಟ್ಟರು ಸಹ ನಮ್ಮನ್ನು ನಿರ್ಲಕ್ಷ ಮಾಡುತ್ತಿರುವುದಾಗಿ ತಿಳಿಸಿ. ಈ ಕೂಡಲೇ ಅರಣ್ಯ ಅಧಿಕಾರಿಗಳು ರೈತರ ಸಂಪರ್ಕ ಸಭೆ ನಡೆಸಿ ಕಾಡಾನೆಗಳ ದಾಳಿಯನ್ನು ತಡೆಯದಿದ್ದಲ್ಲಿ ಅವರ ಕಚೇರಿಗೆ ಬೀಗ ಹಾಕಿ ಪ್ರತಿಭಟನೆ ನಡೆಸಬೇಕಾದಿತೆಂದು ಎಚ್ಚರಿಕೆ ನೀಡಿದ್ದಾರೆ. ಈ ಸಂದರ್ಭದಲ್ಲಿ ಜಿಲ್ಲಾ ಹಾಗೂ ರೈತ ಸಂಘದ ಮುಖಂಡರು ಹಾಜರಿದ್ದರು.

ಡಿಎಂಎಸ್ ಜ್ಞಾನ ಕುಟೀರ ಶಾಲೆಗೆ ಶೇ.90 ಫಲಿತಾಂಶ

ಪಾಂಡವಪುರ : ತಾಲೂಕಿನ ಬೇಬಿ ಗ್ರಾಮದ ಶ್ರೀ ದುರ್ಗಾಂಡೇಶ್ವರ ಮಹಂತ ಶಿವಯೋಗಿಗಳ ಮಠದ ಡಿಎಂಎಸ್ ಜ್ಞಾನ ಕುಟೀರ ಶಾಲೆಗೆ 2023–24 ಸಾಲಿನ ಎಸ್‌ಎಸ್‌ಎಲ್‌ಸಿ ಪಬ್ಲಿಕ್ ಪರೀಕ್ಷೆಯಲ್ಲಿ ಶೇ.90 ರಷ್ಟು ಫಲಿತಾಂಶ ಬಂದಿದೆ.

ಪರೀಕ್ಷೆ ಎದುರಿಸಿದ 10 ವಿದ್ಯಾರ್ಥಿಗಳ ಪೈಕಿ 9 ವಿದ್ಯಾರ್ಥಿಗಳು ಉತ್ತಮ ಅಂಕ ಪಡೆದು ತೇರ್ಗಡೆ ಹೊಂದಿದ್ದು ಒರ್ವ ವಿದ್ಯಾರ್ಥಿ ಅನುತ್ತೀರ್ಣಗೊಂಡಿದ್ದಾನೆ. ಕೆ.ಎಸ್. ದರ್ಶನ್ 571, ಸಿ.ಎಸ್.ಚಂದನ್ 517 ಹಾಗೂ ಎಚ್.ಎ.ಅನನ್ಯ 514 ಅಂಕ ಪಡೆಯುವ ಮೂಲಕ ಶಾಲೆಗೆ ಕೀರ್ತಿ ತಂದಿದ್ದಾರೆ. ಶಾಲೆಯು ಕಳೆದ 9 ವರ್ಷಗಳಿಂದ ಶೇ.ನೂರರಷ್ಟು ಫಲಿತಾಂಶ ಪಡೆದಿದ್ದು, ಫಲಿತಾಂಶಕ್ಕೆ ಕಾರಣರಾದ ಶಾಲೆಯ ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಪಾಲಕರನ್ನು ಮಠದ ಪೀಠಾಧಿಪತ್ಯರು ಶಾಲೆಯ ಅಧ್ಯಕ್ಷ ತ್ರಿನೇತ್ರ ಮಹಂತ ಶಿವಯೋಗಿ ಸ್ವಾಮಿಗಳು ಅಭಿನಂದಿಸಿದ್ದಾರೆ.

ಶಿವಶರಣೆ ಶ್ರೀ ಹೇಮರೆಡ್ಡಿ ಮಲ್ಲಮ್ಮನವರ ತತಾದರ್ಶ ಪಾಲಿಸಿ



ಕಾಯಕಯೋಗಿ ನ್ಯೂಸ್

ರಾಮನಗರ: ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಅವರು ಜೀವನವೇ ಉತ್ತಮ ಸಂದೇಶವಾಗಿದೆ. ಬದುಕಿನುದ್ದಕ್ಕೂ ಸವಾಲುಗಳನ್ನು ಎದುರಿಸಿ ಮಾದರಿಯಾಗಿರುವ ಹೇಮರೆಡ್ಡಿ ಮಲ್ಲಮ್ಮ ಅವರು ಎಲ್ಲರಿಗೂ ದಾರಿ ದೀಪವಾಗಿದ್ದಾರೆ. ಇವರ ವಿಚಾರಗಳನ್ನು ಮನನ ಮಾಡಿಕೊಳ್ಳಬೇಕಿದೆ ಎಂದು ಚಂದ್ರಶೇಖರ್ ರವರು ತಿಳಿಸಿದರು.

ಅವರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಚೇರಿಯಲ್ಲಿ ಏರ್ಪಡಿಸಲಾಗಿದ್ದ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಹೇಮರೆಡ್ಡಿ ಮಲ್ಲಮ್ಮ ಅವರ ಜೀವನ ಮೌಲ್ಯಗಳನ್ನು ಇಂದಿನ ಪೀಳಿಗೆಯವರು ಅನುಸರಿಸಬೇಕಾದ ಅಗತ್ಯವಿದೆ. ಎಲ್ಲರೂ ಒಳತನ್ನು ಬಯಸಿದ ಮಲ್ಲಮ್ಮ ಅವರ ಗುಣಗಳನ್ನು ಅಳವಡಿಸಿಕೊಳ್ಳಬೇಕಿದೆ ಎಂದು ಸಲಹೆ ನೀಡಿದರು

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ರಮೇಶ್ ಬಾಬು, ಜಿಲ್ಲಾಧಿಕಾರಿಯ ಕಚೇರಿಯ ಸಹಾಯಕರಾದ ಜಯಂತ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಅರ್ಪಿತ ಕೆ.ಜೆ, ಸಮುದಾಯದ ಮುಂಖಂಡರುಗಳಾದ ಶ್ರೀಮತಿ ಶಾರದಾ, ವಸಂತ, ವನಮೇಲಮ್ಮ ಹಾಗೂ ಇತರರು ಉಪಸ್ಥಿತರಿದ್ದರು.

ರಾಮನಗರ ಜಿಲ್ಲಾಡಳಿತದಿಂದ ಬಸವ ಜಯಂತಿ



ಕಾಯಕಯೋಗಿ ನ್ಯೂಸ್

ರಾಮನಗರ: ಬಸವಣ್ಣನವರು ಜಾತಿ ಪದ್ಧತಿ ಸೇರಿದಂತೆ ಸಾಮಾಜಿಕ ಪಿಡುಗುಗಳ ವಿರುದ್ಧ 12ನೇ ಶತಮಾನದಲ್ಲಿಯೇ ದನಿಯೆತ್ತಿದವರು. ಅವರ ಆದರ್ಶಗಳು, ತತ್ವಗಳು ನಮ್ಮ ಜೀವನದುದ್ದಕ್ಕೂ ಅಳವಡಿಸಿಕೊಳ್ಳಬೇಕು ಎಂದು ಉಪಸ್ಯಾಸಕರಾದ ರಾಜಶೇಖರ್ ರವರು ತಿಳಿಸಿದರು.

ಅವರು ಇಜೀಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಜಗಜ್ಯೋತಿ ಶ್ರೀ ಬಸವೇಶ್ವರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಬಸವಣ್ಣನವರ ಕ್ರಾಂತಿಕಾರಿಕ ಹೆಜ್ಜೆಗಳು ಇಂದಿಗೂ ಪ್ರಸ್ತುತ. ಸಾಏರಕ್ಕೂ ಹೆಚ್ಚು ವಚನಗಳನ್ನು ರಚಿಸುವ ಮೂಲಕ ಸಮಾಜದ ಸುಧಾರಣೆಗೆ ಪಣತೊಟ್ಟದವರು. ಅವರ ವಚನಗಳನ್ನು ಅಧ್ಯಯನ ಮಾಡಿದರೆ ನಮ್ಮಲ್ಲಿ ಬದಲಾವಣೆ ಸಾಧ್ಯವಾಗಲಿದೆ ಎಂದರು.

ಕಾರ್ಯಕ್ರಮದಲ್ಲಿ ಉಪವಿಭಾಗಾಧಿಕಾರಿ ಬಿನೋಯ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ರಮೇಶ್ ಬಾಬು, ಸಮುದಾಯದ ಮುಖಂಡರುಗಳಾದ ರುದ್ರೇಶ್, ಶಂಕರಪ್ಪ, ಶಿವಕುಮಾರ್, ರುದ್ರದೇವರು, ಶಿವು, ಎಸ್.ಆರ್ ನಾಗರಾಜು, ಜಗದೀಶ್, ರಾಜಶೇಖರ್ ಹಾಗೂ ಇತರರು ಉಪಸ್ಥಿತರಿದ್ದರು.

ಜಮೀನು ಮಾರಾಟ ನಿಲ್ಲಿಸಿ ಒಕ್ಕಲುತನ ಉಳಿಸಿ: ಆದಿಚುಂಚನಗಿರಿ ಶ್ರೀ ಕರೆ



ತುಮಕೂರು: ಗ್ರಾಮ ಹಾಗೂ ಕೃಷಿ ತೊರೆದು ನಗರದತ್ತ ಹೋಗುವ ಬದಲು ನಮ್ಮ ಒಕ್ಕಲುತನ ಉಳಿಸಿ ಬೆಳೆಸಿ ಧರ್ಮಾಚರಣೆ ಜೊತೆ ಸಮಾಜ ಕಟ್ಟುವ ಕೆಲಸ ಮಾಡಬೇಕು. ಈ ನಿಟ್ಟಿನಲ್ಲಿ ಮೊದಲು ಜಮೀನು ಮಾರುವ ಪ್ರವೃತ್ತಿ ಬಿಡಬೇಕು ಎಂದು ಆದಿಚುಂಚನಗಿರಿ ಮಠಾಧ್ಯಕ್ಷ ನಿರ್ಮಲಾನಂದನಾಥ ಸ್ವಾಮೀಜಿ ಕರೆ ನೀಡಿದರು.

ಗುಬ್ಬಿ ತಾಲೂಕಿನ ಕಸಬ ಹೋಬಳಿ ಎಸ್ ಕೊಡಗೀಹಳ್ಳಿ ಪಾಳ್ಯ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಲಾದ ಲಕ್ಷ್ಮೀ ವೆಂಕಟೇಶ್ವರ ಕಲ್ಯಾಣ ಮಂಟಪ ಲೋಕಾರ್ಪಣೆಗೊಳಿಸಿ ಮಾತನಾಡಿದರು.

"ಜಮೀನು ಮಾರಿ ನಗರ ಸೇರಿದ ಬಳಿಕ ಕೆಲ ಹಳ್ಳಿಗಳು ವೃದ್ಧಾಶ್ರಮದಂತೆ ಕಾಣುತ್ತಿವೆ. ಕೃಷಿ ನಡೆಸಲು ಹಿಂದೇಟು ಹಾಕುವ ಯುವ ಸಮುದಾಯ ಆಧುನಿಕತೆಗೆ ಜೋತು ಬಿದ್ದಿವೆ" ಎಂದರು.

"ಗ್ರಾಮಗಳಿಂದ ಆರಂಭವಾದ ಕೃಷಿ ದೇಶದ ಆರ್ಥಿಕ ಸುಸ್ಥಿತಿಗೆ ಕಾರಣವಾಗಿದೆ ಎಂಬುದು ಯುವ ಸಮುದಾಯ ಮನಗಾಣಬೇಕಿದೆ. ಕೃಷಿಯೇ ಅತ್ಯುತ್ತಮ ಉದ್ಯೋಗ ಎನಿಸುವ ಕಾಲ ಸನ್ನಿಹಿತ ವಾಗಿದೆ. ಈ ನಿಟ್ಟಿನಲ್ಲಿ ಜಮೀನು ಮಾರುವ ಚಿಂತನೆ ಬಿಟ್ಟು ಗ್ರಾಮೀಣ ಭಾಗದಲ್ಲಿ ಯುವಕರು ಉದ್ಯೋಗ ಸೃಷ್ಟಿ ಮಾಡ "ಕೃಷಿ ಶಿಕ್ಷಣ ಅವಶ್ಯವಾಗಿ ಬೇಕಿದೆ. ರೈತರ ಬೆಳೆಗಳಿಗೆ ವೈಜ್ಞಾನಿಕ ಬೆಲೆ ಕೂಡಾ ಬಂದೇ ಬರುತ್ತದೆ. ಈ ನಿಟ್ಟಿನಲ್ಲಿ ಒಕ್ಕಲಿಗರು ಒಕ್ಕಲುತನ ಸಂಪ್ರದಾಯಬದ್ಧ ವಾಗಿ ಮುನ್ನಡೆಸುವುದೂ ಕೂಡಾ ಒಂದು ಧರ್ಮದ ಕೆಲಸ" ಎಂದರು.

"ಪ್ರತಿಯೊಂದು ಜೀವಿಯಲ್ಲಿ ಕಾಣುವ ನಾಲ್ಕು ಅವಶ್ಯವಾದ ಆಹಾರ, ನಿದ್ರೆ, ಭಯ ಹಾಗೂ ಮೈಥುನ ನಿಯಮಿತವಾಗಿ ಪ್ರಕ್ರಿಯೆ ನಡೆಯುತ್ತದೆ. ಹಾಗೆಯೇ ಬದುಕು ಕಟ್ಟಿಕೊಳ್ಳಲು ಅವಶ್ಯ ಉದ್ಯೋಗ ಆಯ್ಕೆ ಮಾಡಬೇಕಿದೆ. ಮೊದಲು ಕೃಷಿ ಪ್ರಧಾನ ನಮ್ಮ ದೇಶದಲ್ಲಿ ಇಂದಿಗೂ ಶೇ.70ರಷ್ಟು ಕೃಷಿಕ ವರ್ಗವಿದೆ. ಮನುಷ್ಯ ಜನ್ಮ ಆ ಕಾರಣ ಮನುಷ್ಯತ್ವದ ಜೀವನ ಸಾಗಿಸಲು ಧಾರ್ಮಿಕಾಚರಣೆ ನಡೆಸಿ ನೆಮ್ಮದಿ ಕಾಣಬೇಕು" ಎಂದರು.

ಶಾಸಕ ಎಸ್ ಆರ್ ಶ್ರೀನಿವಾಸ್ ಮಾತನಾಡಿ, "ಸಂಬಂಧಕ್ಕೆ ಬೆಲೆ ಇಲ್ಲವಾದ ಈ ಕಾಲದಲ್ಲಿ ಅರ್ಧ ದಿನದ ಮದುವೆ ನಡೆಯುತ್ತಿದೆ. ಆದರೂ ಆಡಂಬರ ಮಾತ್ರ ಎಂದಿಗೂ ಬಿಟ್ಟಿಲ್ಲ. ಪ್ರತಿಷ್ಠೆ ಪ್ರದರ್ಶನ ಮಾಡುವ ಮದುವೆಗಳು ಎಂದಿಗೂ ಸರಳ ವಿವಾಹ ಆಗಲಾರದು. ಕಲ್ಯಾಣ ಮಂಟಪ ಗ್ರಾಮದಲ್ಲಿ ಉಪಯೋಗವಾಗಲಿ ಎಂಬ ಹಾರೈಕೆ ನಮ್ಮದು. ಆಧುನಿಕತೆ ಹಿಂದೆ ಓಡುವ ನಮ್ಮ ಇಂದಿನ ಸಮಾಜ ಕೇವಲ ತೋರಿಕೆಗೆ ಸೀಮಿತವಾಗುತ್ತದೆ. ನಮ್ಮ ಕೆಲಸ ಗ್ರಾಮಗಳಲ್ಲಿ ನಿರಂತರ ನಡೆಯಲಿ" ಎಂದು ಹಾರೈಸಿದರು.

ವೇದಿಕೆಯಲ್ಲಿ ಮುಂಗಳನಾಥ ಸ್ವಾಮೀಜಿ, ಮಾಜಿ ಶಾಸಕ ಎಚ್.ನಿಂಗಪ್ಪ, ಜೆಡಿಎಸ್ ಮುಖಂಡ ಬಿ.ಎಸ್. ನಾಗರಾಜು, ಎಪಿಎಂಸಿ ಮಾಜಿ ಅಧ್ಯಕ್ಷ ಕಳ್ಳಿಪಾಳ್ಯ ಲೋಕೇಶ್, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಜಿಲ್ಲಾ ನಿರ್ದೇಶಕ ಸತೀಶ್ ಸುವರ್ಣ, ಯೋಜನಾಧಿಕಾರಿ ರಾಜೇಶ್, ಶ್ರೀ ಲಕ್ಷ್ಮೀ ವೆಂಕಟೇಶ್ವರಸ್ವಾಮಿ ದೇವಾಲಯ ಸಮಿತಿಯ ಎ.ಗೋವಿಂದ ರಾಜು, ಕೆ.ಎನ್.ವೆಂಕಟೇಗೌಡ, ಮುಖಂಡ ರಾದ ಗಿರೀಶ್, ಬಸವರಾಜು, ಪ್ರಕಾಶ್, ವೆಂಕಟೇಶ್ ಸೇರಿದಂತೆ ಇತರರು ಇದ್ದರು.

ಬದನವಾಳು ಗ್ರಾಮದಲ್ಲಿ ಶ್ರೀನಿವಾಸ್ ಪ್ರಸಾದ್ ನುಡಿನಮನ ಕಾರ್ಯಕ್ರಮ

ನಂಜನಗೂಡು: ತಾಲ್ಲೂಕಿನ ಬದನವಾಳು ಗ್ರಾಮದಲ್ಲಿ ನುಡಿ ನಮನ, ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ದಿವಂಗತ ವಿ ಶ್ರೀನಿವಾಸ್ ಪ್ರಸಾದ್ ರವರನ್ನು ನೆನೆದು ಗ್ರಾಮಸ್ಥರು ಕಣ್ಣೀರಿಟ್ಟಿದ್ದಾರೆ.

ಗ್ರಾಮದ ಮಹಾತ್ಮ ಗಾಂಧೀಜಿ ಪುತ್ಥಳಿ ಮುಂಭಾಗದಲ್ಲಿ ಡಾ.ಬಿ.ಆರ್ ಅಂಬೇಡ್ಕರ್ ಯುವಕರ ಸಂಘ ಮತ್ತು ಶ್ರೀನಿವಾಸ್ ಪ್ರಸಾದ್ ಅಭಿಮಾನಿಗಳ ಬಳಗ ಹಾಗೂ ಗ್ರಾಮಸ್ಥರು ಆಯೋಜನೆ ಮಾಡಲಾಗಿದ್ದ ಸಂಸದ ದಿವಂಗತ ವಿ. ಶ್ರೀನಿವಾಸ್ ಪ್ರಸಾದ್ ನುಡಿ ನಮನ ಕಾರ್ಯಕ್ರಮದಲ್ಲಿ ಪ್ರಸಾದ್ ರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಜ್ಯೋತಿ ಬೆಳಗಿಸಿ ಮೌನಾಚರಣೆ ಮಾಡಲಾಯಿತು.

ಬಳಿಕ ಮಾಜಿ ತಾಪಂ ಸದಸ್ಯ ಬಿ.ಎಸ್. ರಾಮು ಮಾತನಾಡಿ, ಶ್ರೀನಿವಾಸ್ ಪ್ರಸಾದ್ ರವರನ್ನು ಕಳೆದುಕೊಂಡು ನಾವು ತಬ್ಬಲಿ ಮಕ್ಕಳಾಗಿದ್ದೇವೆ. ರಾಜ್ಯಕ್ಕೆ ಮತ್ತು ರಾಷ್ಟ್ರಕ್ಕೆ ತುಂಬಲಾರದ ನಷ್ಟ ಉಂಟಾಗಿದೆ. 1993ರ ಬದನವಾಳು ಕೊಲೆ ಪ್ರಕರಣದಲ್ಲಿ ಶ್ರೀನಿವಾಸ್ ಪ್ರಸಾದ್ ರವರು ಬೆನ್ನೆಲುಬಾಗಿ ನಿಂತು ನಮಗೆ ನ್ಯಾಯ ವನ್ನು ನೀಡಿದರು. ಬದನ ವಾಳಿಗೂ ಶ್ರೀನಿವಾಸ್ ಪ್ರಸಾದ್ ರವರಿಗೂ 40 ವರ್ಷಗಳ ಕಾಲ ನಂಟಿದೆ. ನಮ್ಮ ಮೈಸೂರು ಪ್ರಾಂತ್ಯ ದಲ್ಲಿ ದಲಿತ ನಾಯಕತ್ವ ಮರೆಯಾಗುತ್ತಿದೆ. ಬೇರೆ ಜನಾಂಗಗಳ ಬಗ್ಗೆ ಪ್ರಸಾದ್ ರವರಿಗೆ ಅಸೂಯೆ ಇರಲಿಲ್ಲ. ದೇವಸ್ಥಾನ ವಿಚಾರವಾಗಿ ಅಮಾಯಕರನ್ನು ಕೊಲೆ ಮಾಡಿದ್ದು ಎಷ್ಟು ಸರಿ, ಇವರಿಗೆ ನ್ಯಾಯ ಕೊಡಿಸುವ ನಿಟ್ಟಿನಲ್ಲಿ ನಮ್ಮ ಜೊತೆಗಿದ್ದರು. ಕೊಲೆಯಾದ ವ್ಯಕ್ತಿಗಳ ಕುಟುಂಬಗಳಿಗೆ ನ್ಯಾಯ ಕೊಡಿಸಿದರು. ಅಪರಾಧಿಗಳಿಗೆ ತಕ್ಕ ಶಿಕ್ಷೆಯನ್ನು ಕೊಡಿಸಿ ದಲಿತರ ಪರ ನಿಂತಿದ್ದರು. ಹಾಗಾಗಿ ಬದನವಾಳು ಗ್ರಾಮದಲ್ಲಿ ಒಂದು ರಸ್ತೆಗೆ ಅವರ ಹೆಸರನ್ನು ನಾಮಕರಣ ಮಾಡಬೇಕು ಎಂದು ಗ್ರಾಮಸ್ಥರೆಲ್ಲಾ ತೀರ್ಮಾನ ಮಾಡಿದ್ದು, ಗ್ರಾ ಪಂ ಗೆ ಈ ವಿಷಯವನ್ನು ತಿಳಿಸಿದ್ದೇವೆ.

ನುಡಿ ನಮನ ಕಾರ್ಯಕ್ರಮದಲ್ಲಿ ಗೀತ ಗಾಯನ ಏರ್ಪಡಿಸಿದ್ದು, ಪ್ರಸಾದ್ ನೆನೆದು ಗ್ರಾಮಸ್ಥರು ಭಾವುಕರಾಗಿದ್ದಾರೆ.

ಈ ಸಂದರ್ಭದಲ್ಲಿ ಮಾಜಿ ತಾಪಂ ಅಧ್ಯಕ್ಷ ನಾಗೇಶ್ ರಾಜ್, ಸಾಹಿತಿ ಮಲ್ಲುಂಡಿ ಮಹದೇವಸ್ವಾಮಿ, ಶ್ರೀನಿವಾಸ್ ಪ್ರಸಾದ್ ರವರ ಸಹೋದರ ರಾಮಸ್ವಾಮಿ, ಪ್ಯೊ ಕುಮಾರಸ್ವಾಮಿ, ಕುಂಬ್ರಹಳ್ಳಿ ಸುಬ್ಬಣ್ಣ, ದೊರೆಸ್ವಾಮಿ, ಗ್ರಾಪಂ ಸದಸ್ಯರಾದ ಶಿವರಾಮ್ ಇತರರು ಭಾಗವಹಿಸಿದ್ದರು.

ಎಸ್‌ಎಸ್‌ಎಲ್‌ಸಿ: ತಾಲೂಕಿಗೆ ಪ್ರಿಯತೋಷ್ ಪ್ರಥಮ, ಭೂಮಿಕ ದ್ವಿತೀಯ

ಕಾಯಕಯೋಗಿ ನ್ಯೂಸ್

ಕೊರಟಗೆರೆ: 2023–24ನೇ ಶೈಕ್ಷಣಿಕ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಚಾಣಕ್ಯ ಶಾಲೆಯ ವಿದ್ಯಾರ್ಥಿ ಹಾಗೂ ಪರ್ತಕರ್ತನ ಮಗನಾದ ಪ್ರಿಯತೋಷ್‌ಗೆ ಶೇ.98.08 ಫಲಿತಾಂಶ ಬಂದಿದ್ದು ತಾಲೂಕಿಗೆ ಪ್ರಥಮ ಸ್ಥಾನವನ್ನು ಪಡೆದಿದ್ದಾನೆ. ಇದೇ ಶಾಲೆಯ ಮತ್ತೋರ್ವ ವಿದ್ಯಾರ್ಥಿನಿ ಅಂಬಿಕಾ ಶೇ.97ರಷ್ಟು ಫಲಿತಾಂಶ ಬಂದಿದ್ದು ತಾಲೂಕಿಗೆ ದ್ವಿತೀಯ ಸ್ಥಾನ ಪಡೆದಿದ್ದು, ಪತ್ರಿಕಾ ವಿತರಕ ಪಂಕಜ್ ಕುಮಾರ್ ಶೇ.96%ರಷ್ಟು

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-6 | 12-05-2024

ಬೆಂಗಳೂರು




ಸ್ಪಂದನ ಸೇವಾ ಸಂಸ್ಥೆಯಿಂದ ಅಕ್ಷಯ ಅನ್ನ ಕಾರ್ಯಕ್ರಮ

ನಂಜನಗೂಡು: ಅಕ್ಷಯ ತೃತೀಯ ಅಂದ್ರೆ ಜನರು ಒಡವೆ ವಸ್ತ ತಗೋಬೇಕು. ಇದರಿಂದ ನಮ್ಮ ಸಂಪತ್ತು ಅಕ್ಷಯವಾಗುತ್ತದೆ ಎಂಬ ನಂಬಿಕೆ ಇದೆ. ಈ ನಂಬಿಕೆಯಿಂದ ಅನೇಕ ಜನರು ಸಾಲ ಸೋಲ ಮಾಡಿ ಒಡವೆ ವಸ್ತ ಖರೀದಿ ಮಾಡುತ್ತಾರೆ. ಆದ್ರೆ ಇದೆಲ್ಲವನ್ನೂ ಮೀರುವಂತೆ ಮೈಸೂರಿನ ಸ್ಪಂದನ ಸೇವಾ ಸಂಸ್ಥೆ ವಿಭಿನ್ನವಾಗಿ ಅಕ್ಷಯ ತೃತೀಯ ದಿನವನ್ನು ಆಚರಿಸಿದೆ. ಹೌದು ಮೈಸೂರಿನ ಸ್ಪಂದನ ಸೇವಾ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರಾದ ಶ್ರೀಮತಿ ಮಮತಾಶೆಟ್ಟಿ ಅವರು ಅಕ್ಷಯ ತೃತೀಯ ದಿನ ನಂಜನಗೂಡಿನ ಶ್ರೀ ನಂಜುಂಡೇಶ್ವರ ಸ್ವಾಮಿ ದೇವಸ್ಥಾನದ ಬಳಿ ಹಸಿದವರಿಗೆ ಊಟ ಮತ್ತು ಸಿಹಿಯನ್ನು ಹಂಚುವ ಮೂಲಕ ವಿಭಿನ್ನವಾಗಿ ಆಚರಣೆ ಮಾಡಿದರು.

ಈ ವೇಳೆ ಕಾರ್ಯದರ್ಶಿ ಸರಸ್ವತಿ, ಸದಸ್ಯರಾದ ರಾಘವೇಂದ್ರ ಹಾಜರಿದ್ದರು. ಈ ವೇಳೆ ಮಾತನಾಡಿದ ಮಮತಾಶೆಟ್ಟಿ ಅಕ್ಷಯ ತೃತೀಯ ಕೇವಲ ಒಡವೆ ವಸ್ತ ಖರೀದಿ ಮಾಡುವುದಲ್ಲ. ಅದರ ಬದಲಿಗೆ ಹಸಿದವರಿಗೆ ಒಂದೊತ್ತು ಊಟ ಹಾಕಿ ಆ ಮೂಲಕವೂ ತಮ್ಮ ಸಂಪತ್ತನ್ನು ಅಕ್ಷಯ ಮಾಡಿಕೊಳ್ಳಿ ಎಂದು ಕರೆ ನೀಡಿದ್ದಾರೆ.

ಮಹಂತಿ ಮಠದಲ್ಲಿ ಸರಳವಾಗಿ ಬಸವ ಜಯಂತಿ



ಕಾಯಕಯೋಗಿ ನ್ಯೂಸ್

ದೇವನಹಳ್ಳಿ: ಪಟ್ಟಣದ ಮಹಂತಿ ಮಠದಲ್ಲಿ ಕ್ರಾಂತಿಯೋಗಿ ಬಸವಣ್ಣನವರ ಜಯಂತಿಯನ್ನು ಭಾವಚಿತ್ರ ಪೂಜಿಸುವ ಮುಖಾಂತರ ಸರಳವಾಗಿ ಆಚರಿಸಲಾ ಯಿತು.

ಈ ಸಮಯದಲ್ಲಿ ಬಸವ ಜಯಂತಿ ಆಚರಣಾ ಸಮಿತಿ ಅಧ್ಯಕ್ಷ ವೀರಭದ್ರಯ್ಯ ಮಾತನಾಡಿ ಬಸವಣ್ಣ ಅವರು, 900 ವರ್ಷಗಳ ಹಿಂದೆ ವರ್ಗ, ವರ್ಣ, ಜಾತಿ, ಧರ್ಮ, ಲಿಂಗ- ಭೇದಗಳಿಂದ ಮುಕ್ತರಾಗಿ ಮಾನವ ಏಕತೆಯನ್ನು ಸಾಧಿಸಬೇಕು ಎನ್ನುವ ಸಂದೇಶವನ್ನು ಸಾರಿದ್ದಾರೆ. ಅದಕ್ಕಾಗಿ ಅಪರಿಮಿತವಾಗಿ ಶ್ರಮಿಸುವುದರ ಜೊತೆಗೆ ಹೋರಾಟವನ್ನೇ ಮಾಡಿದ್ದಾರೆ, ಇಡೀ ಪ್ರಪಂಚದ ಯಾವುದೇ ದೇಶದಲ್ಲಿ ದುಡಿಯುವ ವರ್ಗಕ್ಕಾಗಿ, ಕಾಯಕ ಜೀವಿಗಳಿಗಾಗಿ, ನೊಂದವರ ಏಳಿಗೆಗಾಗಿ ಬಸವ ನಾಡಿನಲ್ಲಿ ಹುಟ್ಟಿದ್ದು ಈ ಧರ್ಮ. ಈ ಧರ್ಮವನ್ನು ಉಳಿಸಿ ಬೆಳೆಸಬೇಕು, ಇದು ಪ್ರತಿಯೊಬ್ಬರ ಮನೆಯ ಧರ್ಮವಾಗಬೇಕು. ಬಸವಣ್ಣ ಅವರ ಆದರ್ಶ, ತತ್ವಗಳನ್ನು ಸದಾ ಸ್ಮರಿಸಬೇಕು ಎಂದರು. ಈ ಸಮಯದಲ್ಲಿ ನಿವೃತ್ತ ಮುಖ್ಯಾಧಿಕಾರಿ ಪ್ರಭುದೇವ್, ಶಾಂತಕುಮಾರ್, ವಿ.ಪರ್ವತರಾಜ್, ವಿ. ಸುರೇಶ್, ಹರ್ಷ, ಕುಸುಮ, ಸೌಮ್ಯಶ್ರೀ, ಮಾಲಾ, ಸೇರಿದಂತೆ ಅನೇಕರು ಹಾಜರಿದ್ದರು.

ಜಗಜ್ಯೋತಿ ಬಸವಣ್ಣನವರ ಅದ್ದೂರಿ ಮೆರವಣಿಗೆ



ಕಾಯಕಯೋಗಿ ನ್ಯೂಸ್

ದೇವನಹಳ್ಳಿ: ನಗರ ಯುವಕ ಸಂಘವು ಸುಮಾರು 25 ವರ್ಷಗಳಿಂದ ಯಶಸ್ವಿಯಾಗಿ ಬಸವ ಜಯಂತಿ ಕಾರ್ಯಕ್ರಮವನ್ನು ಆಚರಿಸಿಕೊಂಡು ಬರುತ್ತಿದೆ ಎಂದು ಅ.ಶಿ.ವೈ ನಗರ್ತ ಯುವಕ ಸಂಘದ ಕಾರ್ಯಧ್ಯಕ್ಷರಾದ ಜೆ.ಆರ್.ಪಿ.ಮುರುಳೀಧರ್ ತಿಳಿಸಿದರು

ಅವರು ಪಟ್ಟಣದಲ್ಲಿರುವ ಗಾಂಧಿ ಚೌಕದಲ್ಲಿ ಅಯೋಧ್ಯಾನಗರ ಶಿವಾಚಾರ್ಯ ವೈಶ್ಯ ನಗರ್ತ ಯುವಕ ಸಂಘ ಮತ್ತು ಶ್ರೀ ನಗರೇಶ್ವರ ಸ್ವಾಮಿ ಸೇವಾ ಟ್ರಸ್ಟ್ ಮತ್ತು ರಾಷ್ಟ್ರೀಯ ಬಸವದಳ ಸಂಯುಕ್ತ ಆಶ್ರಯದಲ್ಲಿ ಕ್ರಾಂತಿಯೋಗಿ ವಿಶ್ವಗುರು ಬಸವಣ್ಣನವರ 891ನೆಯ ಜಯಂತಿಯ ಅಂಗವಾಗಿ ಸಂಜೆ ಜಗಜ್ಯೋತಿ ಬಸವಣ್ಣನವರ ಪಂಚಲೋಹ ಮೂರ್ತಿಯನ್ನು ಆನೇಕಲ್ ನಗರದ ಹಂಸ ರಥದೊಂದಿಗೆ ಕೇರಳದ ಸುಪ್ರಸಿದ್ಧ ಸಾಗರಂ ಕಲಾ ತಂಡ ಸಮಿತಿಯ ಚಂಡೆ ವಾದ್ಯದೊಂದಿಗೆ ಊರಿನ ಪ್ರಮುಖ ಬೀದಿಗಳಲ್ಲಿ ವಿಜೃಂಭಿಸಲಾಗಿದ್ದ ಮೆರವಣಿಗೆಯನ್ನು ಉದ್ಘಾಟಿಸಿ, ಮಾತನಾಡಿದರು.

ಈ ಕಾರ್ಯಕ್ರಮದಲ್ಲಿ ಹಂಸ ವಾಹನ ಪಲ್ಲಕ್ಕಿ ಸೇವೆಯನ್ನು ಒದಗಿಸಿದ ಪುರಸಭಾ ಮಾಜಿ ಅಧ್ಯಕ್ಷರು ಹಾಲಿ ಸದಸ್ಯರಾದ ಎಂ.ಸತೀಶ್ ಕುಮಾರ್ ಮತ್ತು ಸಹೋದರರು, ಚಿಂಡೆ ವಾದ್ಯ ಸೇವೆಯನ್ನು ಒದಗಿಸಿದ ಎಆರ್‌ಸಿ. ನವೀನ್ ಕುಮಾರ್, ಚಿಕ್ಕ ವೀರಣ್ಣ ಮಿಠಾಯಿ ಅಂಗಡಿ ಮಾಲೀಕರಾದ ಸಿ.ಸುರೇಶ್ ಹಾಗೂ ಅಜಿತ್‌ರವರನ್ನು ಸನ್ಮಾನಿಸಲಾಯಿತು.

ಬೆಳಗ್ಗೆ ಬಾದಾಮಿ ಹಾಲು ಸೇವೆ, ರಾತ್ರಿ ದಾಸೋಹ ಸೇವೆಯನ್ನು ಲಿಂಗೈಕ್ಯ ಶಾರದಮ್ಮ ಚಿಕ್ಕ ಗುಂಡಪ್ಪ ಸ್ಮರಣಾರ್ಥವಾಗಿ ಆರ್ ರಾಜಣ್ಣ ಮತ್ತು ಸಹೋದರರು ಸೇವೆಯನ್ನು ನಡೆಸಿಕೊಟ್ಟರು. ಈ ಕಾರ್ಯಕ್ರಮದಲ್ಲಿ ನಗರ್ತ ಯುವಕ ಸಂಘದ ಅಧ್ಯಕ್ಷರು ಬೇಕರಿ ಮಂಜುನಾಥ್, ಮಹಂತಿನ ಮಠದ ಅಧ್ಯಕ್ಷರಾದ ಪುನೀತ್ ಶಿವಕುಮಾರ್, ಗೌರವ ಕಾರ್ಯದರ್ಶಿಗಳಾದ ವಿ.ವಿಶ್ವನಾಥ್, ಬೇಕರಿ ಶಿವಣ್ಣ, ವಿ.ಬಸವರಾಜ್ ಮತ್ತು ಅಂಗ ಸಂಸ್ಥೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಯುವಶಕ್ತಿ ರಾಷ್ಟ್ರಶಕ್ತಿ: ಡಾ.ಡಿ.ವೀರೇಂದ್ರ ಹೆಗ್ಗಡೆ ಅಭಿಮತ



ಕಾಯಕಯೋಗಿ ನ್ಯೂಸ್

ದೇವನಹಳ್ಳಿ: ರಾಷ್ಟ್ರೀಯ ಯುವ ಯೋಜನೆಯು ಈ ದೇಶದ ಅತಿದೊಡ್ಡ ಯುವ ಯೋಜನೆಯಾಗಿದೆ ಎಂದು ಶ್ರೀ ಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಡಾ. ಡಿ. ವೀರೇಂದ್ರ ಹೆಗ್ಗಡೆ ತಿಳಿಸಿದರು.

ಇವರು ಧರ್ಮಸ್ಥಳದ ತಮ್ಮ ಗೃಹ ಕಚೇರಿ ಆವರಣದಲ್ಲಿ ವಿಜಯಪುರ ಪಟ್ಟಣದ ರಾಜ್ಯ ರಾಷ್ಟ್ರೀಯ ಯುವ ಯೋಜನೆ ವತಿಯಿಂದ ದೇಶದ ವಿವಿಧೆಡೆ ಆಯೋಜಿಸುವ ರಾಷ್ಟ್ರೀಯ ಭಾವೈಕ್ಯತಾ ಯುವ ಶಾಂತಿ ಶಿಬಿರಗಳಿಗೆ ಆಶೀರ್ವದಿಸಿ ಶುಭ ಕೋರಿ ದೇಶದ ಹಿರಿಯ ಗಾಂಧಿವಾದಿ ದಿ.ಡಾ.ಎಸ್.ಎನ್ ಸುಬ್ಬರಾವ್ ರವರ ಹಿಂದಿನ ಮಾರ್ಗ ದರ್ಶನದಂತೆ ನಡೆಯುವ ರಾಷ್ಟ್ರೀಯ ಯುವ ಶಿಬಿರಗಳು ಯುವ ಜನರಿಗೆ ನಾಯಕತ್ವ ಗುಣ ಬೆಳವಣಿಗೆ ಯೊಂದಿಗೆ ಅವರ ವ್ಯಕ್ತಿತ್ವವನ್ನು ಸಹ ಸಾರ್ವಜನಿಕ ಸೇವೆಯ ಮೂಲಕ ಅಭಿವೃದ್ಧಿ ಗೊಳಿಸಲಾಗುತ್ತದೆ. ಹಾಗೂ ಈ ಯುವ ಯೋಜನೆಯ ಮೂಲಕ ದೇಶದ ಮೂಲೆ ಮೂಲೆಗಲಲ್ಲಿರುವ ಯುವಜನರಿಗೆ ರಾಷ್ಟ್ರೀಯ ಭಾವೈಕ್ಯತೆಯ ತರಬೇತಿಯನ್ನು ನೀಡಿ ಈ ರಾಷ್ಟ್ರ ನಿರ್ಮಾಣದ ಕಾರ್ಯ ದಲ್ಲಿ ತೊಡಗಿಸಿಕೊಳ್ಳಲು ಪ್ರೇರಣೆ ನೀಡುವುದರೊಂದಿಗೆ ದೇಶಪ್ರೇಮ ಮತ್ತು ಸೇವಾ ಮನೋಭಾವನೆ ಯನ್ನು ಬೆಳೆಸುವುದಾಗಿದೆ ಎಂದರು.

ರಾಜ್ಯ ರಾಷ್ಟ್ರೀಯ ಯುವ ಯೋಜನೆಯ ರಾಜ್ಯ ಸಂಯೋಜಕ ಡಾ.ವಿ. ಪ್ರಶಾಂತ ಮಾತನಾಡಿ,ರಾಷ್ಟ್ರೀಯ ಯುವ ಯೋಜನೆ (ಎನ್.ವೈ.ಪಿ) ಗೆ ಸೇರಿದವರಿಗೆ ಸೇರುವ ಮೊದಲು ಉಂಟಾಗುವ ಪ್ರಶ್ನೆ ನಾವು ಈ ಸಮಾಜ ಸೇವೆ ಮಾಡುವುದರಿಂದ ನಮಗೇನು ಲಾಭ ವೆಂದು ಆದರೆ ಅದರಲ್ಲಿ ತೊಡಗಿದ ಮೇಲೆ ಗೊತ್ತಾಗುವುದು ತೊಡಗಿ ಕೊಂಡವರಿಗಾಗುವ ಲಾಭಗಳಾದ ಶಿಸ್ತುಸಮಯದ ಬೆಲೆ, ಸಹಬಾಳ್ವೆ, ಸಹಭೋಜನ, ಹೊದಾಣಿಕೆ, ಶ್ರಮದ ಮಹತ್ವ ನಾಯಕತ್ವ ಗುಣ, ಪರಿಣಾಮಕಾರಿ ಭಾಷಣ ಕಲೆ,ಸಭಾ ಕಂಪನ ನಿವಾರಣೆ, ಪ್ರತಿಭಾ ಪ್ರದರ್ಶನ, ವ್ಯಕ್ತಿತ್ವ ವಿಕಸನ, ಆತ್ಮ ವಿಶ್ವಾಸ ದೊಂದಿಗೆ ಮಾನಸಿಕ ಸ್ಥೈರ್ಯ, ರಾಷ್ಟ್ರೀಯ ಭಾವೈಕ್ಯ-ರಾಷ್ಟ್ರಭಕ್ತಿಯೊಂದಿಗೆ ಯುವ ಜನರ ಜೀವನ ರೀತಿ-ನೀತಿ ಮತ್ತು ಸ್ವಾವಲಂಬಿ ಜೀವನ ಶೈಲಿಯ ಬೆಳವಣಿಗೆಗಳಾಗಿವೆ ಆದ್ದರಿಂದ ಈ ಮೇಲ್ಕಂಡ ಅಂಶಗಳನ್ನು ಆಧರಿಸಿ ರಾಷ್ಟ್ರೀಯ ಯುವ ಶಿಬಿರಗಳಲ್ಲಿ ಭಾಗವಹಿಸುವುದರಿಂದ ಯುವಜನತೆಯಲ್ಲಿ ಕಾಣಬಹುದಾದ ಈ ಮಹತ್ವದ ಬದಲಾವಣೆಗಳಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಉಪಸ್ಥಿಯಲ್ಲಿ ಡಾ.ಡಿ.ವೀರೇಂದ್ರ ಹೆಗ್ಗಡೆ ರವರ ಆಪ್ತ ಕಾರ್ಯದರ್ಶಿ ಎ. ವೀರು ಶೆಟ್ಟಿ ರಾಷ್ಟ್ರೀಯ ಯುವ ಸ್ವಯಂ ಸೇವಕ ಎಸ್.ಯೋಚಿತ್ ಕುಮಾರ್ ಹಾಗೂ ರಾಷ್ಟ್ರೀಯ ಯುವ ಯೋಜನೆಯ ರಾಜ್ಯ ಸ್ವಯಂಸೇವಕರ ವೃಂದ ಹಾಜರಿದ್ದರು.

ದೇವನಹಳ್ಳಿ: ಬಿಸಿಲಿನಿಂದ ಹೈರಾಣಾದ ಜನತೆಗೆ ಸಂಜೆ ತಂಪು ನೀಡಿದ ವರುಣ



ಕಾಯಕಯೋಗಿ ನ್ಯೂಸ್

ದೇವನಹಳ್ಳಿ: ಪಟ್ಟಣ ಸೇರಿದಂತೆ ಗ್ರಾಮೀಣ ಭಾಗದಲ್ಲಿ ಅಲ್ಲಲ್ಲಿ ಶನಿವಾರ ದಂದು ಸಂಜೆ 4.30 ರ ಸುಮಾರಿಗೆ ತುಂತುರು ಬಾರಿ ಮಳೆಯಾಗಿದೆ. ಕಳೆದೆರಡು ದಿನಗಳಿಂದ ಆಗಾಗ ಸುರಿದ ತುಂತುರು ಮಳೆಗೆ ಸ್ವಲ್ಪ ಮಟ್ಟಿಗೆ ಭೂಮಿ ತಂಪೆರಿದಂತಾಗಿದೆ.


ಸಂಜೆ ಆರೂವರೆ ಗಂಟೆಯಾದರೂ ಸುಡು ಬಿಸಿಲಿಗೆ ಹೈರಾಣಾಗಿದ್ದ ಜನತೆಗೆ ಇದೀಗ ಬೆಳಗ್ಗಿನಿಂದ ಮೋಡ ಕವಿದ ವಾತಾವರಣ ಕಂಡು ಬಂದು ಮಳೆಯಾಗಿರುವುದು ನೆಮ್ಮದಿ ತಂದೊಡ್ಡಿದೆ. ಕೃಷಿ ಬೆಳೆಗಳಿಗೆ ನೀರಿನ ಅಭಾವದಿಂದ ಕಂಗೆಟ್ಟಿದ್ದ ರೈತರಿಗೆ ತುಂತುರು ಮಳೆಯಾ ಗಿರುವುದು ಸಂತಸ ತರಿಸಿದೆ.

ಇನ್ನೂ ಸಂಜೆಯಾಗುತ್ತಲೇ ಮಳೆಯು ಅಬ್ಬರ ಜಾಸ್ತಿಯಾಗುತ್ತಿದ್ದು ಕೆಲಸ ಕಾರ್ಯಗಳಿಗೆ ಹೋಗುವ ಜನತೆಗೆ ಈ ಮಳೆಯಿಂದ ತೊಂದರೆಯಾದರು ಬಿರು ಬಿಸಿಲಿನ ದಗೆಗೆ ಜನರು ಎಷ್ಟೆ ಮಳೆ ಬಂದರು ಪರವಾಗಿಲ್ಲ ಅನ್ನುತ್ತಿದ್ದಾರೆ.

ವಿದ್ಯುತ್ ಕಣ್ಣೇ ಮುಚ್ಚಾಲೆ: ಪಟ್ಟಣ ಸೇರಿದಂತೆ ಗ್ರಾಮೀಣಾ ಭಾಗದಲ್ಲಿ ವಿದ್ಯುತ್ ಸಮಸ್ಯೆ ಹೆಚ್ಚಾಗುತ್ತಿದೆ. ಗ್ರಾಮೀಣ ಭಾಗದಲ್ಲಿ ಸ್ವಲ್ಪ ಮಳೆ ಬಂದರು ಬೆಸ್ಕಂ ಇಲಾಖೆ ಸರಿಯಾಗಿ ವಿದ್ಯುತ್ ಕಂಬಗಳನ್ನು ಸರಿಪಡಿಸದೇ ಪ್ರತಿದಿನವು ಸಂಜೆಯಾದರೆ ಕೆಲ ಭಾಗಗಳಲ್ಲಿ ವಿದ್ಯುತ್ ಕಡಿತವಾಗುತ್ತಿದ್ದು ಸಾರ್ವಜನಿಕರಿಗೆ ತೊಂದರೆ ಯಾಗುತ್ತಿದೆ ಎಂದು ಕೆಲವರು ಆರೋಪಿಸಿದರು.

ಬಸ್ ಸಮಸ್ಯೆ: ಮಳೆ ಕಾರಣ ಬಸ್‌ಗಳ ಸಂಚಾರದಲ್ಲಿ ವ್ಯತ್ಯಯವಾಗಿ ಗ್ರಾಮೀಣ ಸೇರಿದಂತೆ ಪಟ್ಟಣ ಸುತ್ತಮುತ್ತಲಿನ ಭಾಗಗಳಿಂದ ಸಾವಿರಾರು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಚಿಕ್ಕಬಳ್ಳಾಪುರ, ಬೆಂಗಳೂರು ಪ್ರದೇಶಗಳಿಂದ ಬರಬೇಕಾದರು ಹೋಗಬೇಕಾದರೆ ಬಸ್ ಗಳು ಇಲ್ಲದೆ ಗಂಟೆಗಟ್ಟಲೇ ಕಾಯಬೇಕಾದ ಪರಿಸ್ಥಿತಿ ಇರುವುದರಿಂದ ಈ ಮಳೆಗಾಲದಲ್ಲಿ ಹೆಚ್ಚಿನ ಬಸ್ಸಗಳ ವ್ಯವಸ್ಥೆ ಮಾಡಬೇಕಾಗಿದೆ ಎಂದರು ಸಾರ್ವಜನಿಕರು ಒತ್ತಾಯಿಸಿದರು.

ಗುರು ಬಸವಣ್ಣನವರ ಕಲ್ಯಾಣ ರಾಜ್ಯ



ಇಂದಿಗೆ ಸುಮಾರು ಎಂಟುನೂರು ವರ್ಷಗಳ ಹಿಂದೆ ಸಮಾಜದಲ್ಲಿ ನಡೆಯುತ್ತಿದ್ದ ಅನಿಷ್ಟ ಹಾಗೂ ಧರ್ಮದ ಹೆಸರಿನಲ್ಲಿ ಬಡವರ ರಕ್ತ ಕುಡಿಯುವ ಪುರೋಹಿತ ಶಾಹಿಗಳ ಆಡಂಬರತೆಯ ವಿರುದ್ಧ ಕಾದಾಡಿ, ಸಮಗ್ರವಾದ ಸಾಮಾಜಿಕ ಕ್ರಾಂತಿ ಮಾಡಿದ ಕ್ರಾಂತಿಯೋಗಿ, ವಿಶ್ವಗುರು, ಧರ್ಮಕರ್ತ ಜಗಜ್ಯೋತಿ ಬಸವೇಶ್ವರರ ಕಾರ್ಯಕ್ಷೇತ್ರ ಈ ಕಲ್ಯಾಣ ನಾಡು, ಈ ಕಲ್ಯಾಣ ನಾಡಿನಲ್ಲಿ ಜನಿಸಿದ ನಾವೆಲ್ಲರೂ ಪುಣ್ಯವಂತರು; ಧನ್ಯರು.

ಕಲ್ಯಾಣ ಎಂದರೆ ಸುಖ ಎಂದರ್ಥ. ಇಡೀ ಮಾನವ ಕುಲವೇ ಸುಖ ಶಾಂತಿಯಿಂದ ಬಾಳಬೇಕೆಂಬುದು ವಿಶ್ವಗುರು ಬಸವೇಶ್ವರರ ಹೆಬ್ಬಯಕೆಯಾಗಿತ್ತು ಅವರು ಹುಟ್ಟುವುದಕ್ಕಿಂತ ಮುಂಚೆ ಮಹಿಳೆಯರಿಗೆ ಧಾರ್ಮಿಕ ಪೂಜೆ, ಪುನಸ್ಕಾರಗಳನ್ನು ಮಾಡುವುದಕ್ಕೆ ಆ ಕಾಯಕ್ರಮಗಳಲ್ಲಿ ಭಾಗವಹಿಸುವುದಕ್ಕೆ ಅಧಿಕಾರ ಇರಲಿಲ್ಲ. ಆದರೆ ಬಸವಣ್ಣನವರು ಈ ಎಲ್ಲಾ ಹಕ್ಕುಗಳನ್ನು ಮಹಿಳೆಯರಿಗೆ ಒದಗಿಸಿಕೊಟ್ಟು ಜಗತ್ತಿಗೆ ಜ್ಯೋತಿಯಾದರು. ಈ ಹಿಂದೆ ಮಹಿಳಾಪರವಾಗಿ ಹೋರಾಡುವ ಅವರಿಗೆ ಹಕ್ಕುಗಳನ್ನು ಒದಗಿಸಿಕೊಡುವ ವ್ಯಕ್ತಿ ಈ ಜಗತ್ತಿನಲ್ಲಿ ಒಬ್ಬರೂ ಇರಲಿಲ್ಲ. ಇದು ಬಸವ ತಂದೆಯ ಅದ್ಭುತ ಸಾಧನೆ.

ಸಾವಿರಾರು ವರುಷಗಳಿಂದ ಮಹಿಳೆಯರಿಗೆ 'ಮಾತೃದೇವೋಭವ' ಎಂದು ಪೂಜಿಸಿ, ಅವಳಿಗೆ ಮಾತಿನಲ್ಲಿಯೇ ಮಂಟಪ ಕಟ್ಟಿ ಹೊಗಳಿ ಹೊನ್ನಶೂಲ ಕ್ಕೇರಿಸಿ ಮನೆಯಲ್ಲಿ ಕೂಡಿ ಹಾಕಿದ್ದರು. ನಾಲ್ಕು ಗೋಡೆಗಳ ಮಧ್ಯೆ ಅವಳಿಗೆ ಕಟ್ಟಿ ಹಾಕಲಾಗಿತ್ತು. ಹೀಗೆ ಎಲ್ಲಾ ಕ್ಷೇತ್ರಗಳಲ್ಲಿಯೂ ಸ್ತ್ರೀಯು ಕೋಷಣೆಗೊಳಗಾಗಿದ್ದಳು. ನಮ್ಮ ಭಾರತದಲ್ಲಿ ಇಷ್ಟೊಂದು ಅನಾಹುತಗಳು ದುರ್ಘಟನೆಗಳು ಜರುಗಲು ಕಾರಣ ಅನಕ್ಷರತೆ ಮತ್ತು ಮೂಢ ನಂಬಿಕೆ. ಈ ಅನಕ್ಷರತೆಯು ಭಾರತದಲ್ಲಿಯೇ ಇಷ್ಟೊಂದು ಗಟ್ಟಿ ಮನೆ ಮಾಡಿ ಕುಳಿತಿರಲು ಇಲ್ಲಿ ಅನೇಕ ಕಾರಣಗಳಿವೆ.

ಬುದ್ಧಿಜೀವಿಗಳು ಎನಿಸಿಕೊಂಡಿದ್ದ ಪುರೋಹಿತಶಾಹಿಗಳು ಏನೂ ಅರಿಯದ ಮುಗ್ಧರಿಗೆ ಅಂಧ ಶ್ರದ್ಧೆಗಳಲ್ಲಿ ದೂಡಿ ತಮ್ಮ ಬೇಳೆ ಬೇಯಿಸಿಕೊಂಡರು. ಸ್ವರ್ಗದ ಆಸೆ ಹಚ್ಚಿ ಬಡವರನ್ನು ಬಾಡಿಗೆ ಎತ್ತಿನಂತೆ ದುಡಿಸಿಕೊಂಡರು, ಅಸಹಾಯಕತೆಯಿಂದ ತಮ್ಮ ಪಲ್ಲಕ್ಕಿ ಮೇಲೆ ಕುಳಿತು ಮರೆದಿದ್ದಾರೆ.

ಇದಲ್ಲದೇ ಮಹಿಳೆಯರಿಗಂತೂ ಕತ್ತಲು ಕೋಣೆಯ ತೊತ್ತು ಸಂತಾನ ಸೃಷ್ಟಿ ಸುವ ಯಂತ್ರ ಎಂದೇ ಭಾವಿಸಿದ್ದರು. ಅವಳಿಗೆ ಮನೆಯ ಹೊರಗೆ ಅಂಗಡಿಗಳಿಗೆ ಹೋಗಲು ಸಹ ಅಧಿಕಾರ ಇರಲಿಲ್ಲ. ಅವಳು ಶಿಕ್ಷಣ ಕಲಿಯುವುದಂತೂ ದೂರದ ಮರಿಚಿಕೆಯೇ ಆಯಿತು. ಇದನ್ನು ನೋಡಿಯೇ ಬಸವಣ್ಣನವರು ಮರುಗಿದರು. ಮಹಿಳೆಯು ಗಂಡಿಗೆ ಸಮಾನಳು, ಅವಳೂ ವಿದ್ಯೆ ಕಲಿಯಬೇಕು, ಧರ್ಮ ಹಾಗೂ ತತ್ವ ಶಾಸ್ತ್ರದ ಅರ್ಥ ಅವಳು ಅರಿಯಬೇಕು, ಹೆಣ್ಣು ಗಂಡು ಇಬ್ಬರೂ ಬಾಳ ಬಂಡಿಗೆ ಎರಡು ಚಕ್ರಗಳಿದ್ದಂತೆ ಎಂದು ಮಹಿಳೆಯ ಕೋಷಣೆಯ ಬಂಧ ಬಿಡಿಸಿ, ಅವಳು ಎಲ್ಲಾ ಕ್ಷೇತ್ರಗಳಲ್ಲಿಯೂ ಧೈರ್ಯವಾಗಿ ಮುನ್ನಡೆಯುವಂತೆ ಅನುವು ಮಾಡಿಕೊಟ್ಟ ಶ್ರೇಯಸ್ಸು ಆ ಮಹಾ ಗುರುವಿಗೆ ಸಲ್ಲುತ್ತದೆ.

ಇಂದು ಭಾರತದ ಸಂವಿಧಾನದಲ್ಲಿ ಮಹಿಳೆಯರಿಗೆ ಕೊಟ್ಟಿರುವ ಸೌಲತ್ತುಗಳಿಗಿಂತಲೂ ಅಂದಿನ ಸಂಸತ್ತಾದ ಅನುಭವ ಮಂಟಪದಲ್ಲಿ ಸ್ತ್ರೀಯರಿಗೆ ಹೆಚ್ಚಿನ ಅನುಕೂಲತೆಗಳಿದ್ದವು. ಅಂತೆಯೇ ಅಕ್ಕನಾಗಮ್ಮ ಅಕ್ಕ ಮಹಾದೇವಿ, ಅಯ್ಯಕ್ಕಿ ಲಕ್ಕಮ್ಮ ಮುಂತಾದ ಶರಣೆಯರು ಅನುಭವ ಮಂಟಪದ ಕಾರ್ಯ ಕಲಾಪಗಳಲ್ಲಿ ಕಿಚ್ಚಿದೆಯಿಂದ ಪಾಲ್ಗೊಂಡು ಸಮಾಜದ, ಮಹಿಳೆಯರ ಉದ್ಧಾರಕ್ಕಾಗಿ ಹೋರಾಡಿದರು. ಅನುಭವ ಮಂಟಪದೊಳಗೆ ಶರಣರೊಡನೆ ಶರಣೆಯರೂ ಚರ್ಚೆಯಲ್ಲಿ ಭಾಗವಹಿಸುತ್ತಿದ್ದರು.

ಅಂದು ಗುರು ಬಸವಣ್ಣನವರ ಪ್ರಭಾವದಿಂದಾಗಿ ಅಕ್ಕಮಹಾದೇವಿಯವರು ಈ ಕುಟಿಲ ಸಂಸಾರವನ್ನು ತ್ಯಜಿಸಿ ಲಿಂಗವೇ ತಾಯಿ, ಲಿಂಗವೇ ತಂದೆ ಲಿಂಗವೇ ಪತಿ, ಚನ್ನಮಲ್ಲಿಕಾರ್ಜುನನೇ ತನ್ನ ಸರ್ವಸ್ವ ವೆಂದು ತಿಳಿದರು. ಹೆಣ್ಣು ಗಂಡೆಂಬ ಭೇದ ತೊಡೆದು ಹಾಕಲು ಅವರು ತಮ್ಮ ಪ್ರಾಣವನ್ನೇ ಮುಡುಪಾಗಿಟ್ಟಿದ್ದರು.

ಹೀಗೆ ಅನೇಕ ಶರಣ ಶರಣೆಯರು ಸಮಾಜಕ್ಕಾಗಿ ದೀನ ದಲಿತರಿಗಾಗಿ ದುಡಿದಿದ್ದಾರೆ. ಇವರೆಲ್ಲರೂ ಬಳಸಿಕೊಂಡ ಅಸ್ತ್ರ ಒಂದೇ ಅದೇ. ವಚನ ಸಾಹಿತ್ಯ. ಸ್ತ್ರೀ ಸಮಾನತೆಗಲ್ಲದೆ ಶರಣರು ಅಂತರಂಗದ ಶುದ್ಧಿ ಮತ್ತು ಮನುಷ್ಯನ ಕಪಟತನವನ್ನು ಹೋಗಲಾಡಿಸಲು ಒತ್ತು ನೀಡಿದ್ದಾರೆ. ಇಲ್ಲಿ ಗುರು ಬಸವೇಶ್ವರರ ಒಂದು ವಚನ ನೆನಪಿಗೆ ಬರುತ್ತದೆ.

ಹುತ್ತವ ಬಡಿದಡೆ ಹಾವು ಸಾಯಬಲ್ಲುದೇ? ಅಯ್ಯಾ! ಅಘೋರ ತಪವ ಮಾಡಿದರೇನು? ಅಂತರಾತ್ಮ ಶುದ್ಧವಿಲ್ಲದ ವರನ್ನೆಂದೂ ಮೆಚ್ಚ ನಮ್ಮ ಕೂಡಲ ಸಂಗಮದೇವಾ"

ಮನುಷ್ಯನು ಸ್ವಾರ್ಥದಿಂದ ಬರೀ ತೋರಿಕೆಗೆ ಮಾತ್ರ ಭಕ್ತಿ ಮಾಡುತ್ತಾನೆ. ಅದು ಕೇವಲ ಡಂಭಾಚಾರ, ವ್ಯಾಪಾರ. ಅದು ಬೆಕ್ಕು ಮಠದೊಳಗೆ ಇಲಿಗಾಗಿ ತಪಸ್ಸು ಮಾಡಿದಂತೆಯೇ ಸರಿ.

ಇಂತಹ ಅನೇಕ ಶರಣರನ್ನು ಇಂದಿಗೂ ನಾವು ಕಾಣಬಹುದು. ಮೂರು ಸಾರಿ ಸ್ನಾನ ಮಾಡಿ ಲಿಂಗಪೂಜೆ ಮಾಡುವರು ಆದರೆ ಅವರ ಅಂತರಂಗದಲ್ಲಿ ಅಧ